ಸಂಪುಟ: 21, ಸಂಚಿಕೆ: 334, ಪುಟಗಳು: 8, ಬುಧವಾರ, 11 ಸೆಪ್ಟೆಂಬರ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

ಸುಭಾಷಿತ

ಕ್ಷಮಿಸುವುದರಿಂದ ಮನಸ್ಸಿಗೆ ನೆಮ್ಮದಿ ಸಿಗುತ್ತದೆ.

। ಗೌತಮ ಬುದ್ಧ

## ಪಂಚಾಂಗ

(ಬುಧವಾರ 11, ಸೆಪ್ಟೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ
- ದಕ್ಷಿಣಾಯನ, ವರ್ಷ ಋತು,
- ಭಾದ್ರಪದ ಮಾಸ, ಶುಕ್ಲ ಪಕ್ಷ,
- ಅಷ್ಟಮಿ, ಜೇಷ್ಠ ನಕ್ಷತ್ರ
- ರಾಹುಕಾಲ - 12:19 ರಿಂದ 1:51
- ಗುಳಿಕಕಾಲ - 10:47 ರಿಂದ 12:19
- ಯಮಗಂಡಕಾಲ - 7:43 ರಿಂದ 9:15




## ಸಂಕ್ಷಿಪ್ತ ಸುದ್ದಿ

### ಕರ್ನಾಟಕ ಬಿಜೆಪಿಯಲ್ಲಿನ ಗಾಯಕ್ಕೆ ಆರ್‌ಎಸ್‌ಎಸ್ ಮುಲಾಮು




**ಬೆಂಗಳೂರು:** ಲೋಕಸಭೆ ಚುನಾವಣೆ ಟಿಕೆಟ್ ವಿಚಾರವಾಗಿ ಕರ್ನಾಟಕ ಬಿಜೆಪಿಯಲ್ಲಿ ಮೂಡಿದ್ದ ಬಿರುಕು ಈಗ ದೊಡ್ಡದಾಗಿದೆ. ಬಿಜೆಪಿಯಲ್ಲಿ ಎಲ್ಲವೂ ಸರಿ ಇಲ್ಲ ಎಂಬುವುದು ಮೇಲ್ನೋಟಕ್ಕೆ ಕಾಣುತ್ತಿದೆ. ನಾಯಕರ ಮಧ್ಯೆಯೇ ಅಸಮಧಾನ ಮೂಡಿದೆ. ರಾಜ್ಯ ಬಿಜೆಪಿಯಲ್ಲಿ ಮೂಡಿರುವ ಬಂಡಾಯವನ್ನು ಶಮನ ಮಾಡಲು ರಾಷ್ಟ್ರೀಯ ಸ್ವಯಂಸೇವಕ ಸಂಘ ಮೈದಾನಕ್ಕೆ ಇಳಿಯಲಿದೆ. ನಾಳೆ ರಾಜ್ಯ ಬಿಜೆಪಿ ಮತ್ತು ಆರ್‌ಎಸ್‌ಎಸ್ ನಾಯಕರ ನಡುವೆ ಸಭೆ ನಡೆಯಲಿದೆ ಎಂದು ಮೂಲಗಳಿಂದ ಮಾಹಿತಿ ದೊರೆತಿದೆ. ಈ ಸಭೆಗೆ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ, ಗೋಕಾಕ್ ಶಾಸಕ ರಮೇಶ ಜಾರಕಿಹೊಳಿ ಮತ್ತು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮತ್ತು ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಬಣಕ್ಕೆ ಅಹ್ವಾನ ನೀಡಲಾಗಿದೆ. ಸಭೆಗೆ ಒಟ್ಟು 40ಕ್ಕೂ ಅಧಿಕ ನಾಯಕರನ್ನು ಆಹ್ವಾನಿಸಲಾಗಿದೆ. ಆದರೆ, ಕೆಲ ನಾಯಕರು ಪುಟ 2

### ನಟ ಕಿರಣ್ ರಾಜ್ ಪ್ರಯಾಣಿಸುತ್ತಿದ್ದ ಕಾರು ಅಪಘಾತ

**ಬೆಂಗಳೂರು:** ರಾನಿ ಚಿತ್ರದ ನಾಯಕ, ಕನ್ನಡತಿ ಸೀರಿಯಲ್ ನಟ ಕಿರಣ್ ರಾಜ್ ಪ್ರಯಾಣಿಸುತ್ತಿದ್ದ ಕಾರು ಕೆಂಗೇರಿ ಬಳಿ ಅಪಘಾತವಾಗಿದೆ. ಮುದ್ದರಾಯನ ಪಾಳ್ಯ ವೃದ್ದಾಶ್ರಮಕ್ಕೆ ಹೋಗಿ ಬರುತ್ತಿದ್ದಾಅಪಘಾತ ಸಂಭವಿಸಿದೆ.



ಎಕ್ಸಿಕ್ಯೂಟಿವ್ ಪ್ರೊಡ್ಯೂಸರ್ ಗಿರೀಶ್ ಕಾರು ಚಾಲನೆ ಮಾಡುತ್ತಿದ್ದಾಗ ನಿಯಂತ್ರಣ ತಪ್ಪಿ ಕಂಬಕ್ಕೆ ಡಿಕ್ಕಿ ಹೊಡೆದಿದೆ. ಗುದ್ದಿದ ರಭಸಕ್ಕೆ ಕಿರಣ್ ರಾಜ್ ಗೆ ಎದೆಯ ಭಾಗಕ್ಕೆ ಪೆಟ್ಟಾಗಿದ್ದು ಸದ್ಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಸದ್ಯ ಕಿರಣ್ ರಾಜ್ ಪ್ರಾಣಾಪಾಯದಿಂದ ಪಾರಾಗಿದ್ದು ಸ್ಥಳಕ್ಕೆ ಕೆಂಗೇರಿ ಸಂಚಾರಿ ಪೊಲೀಸರು ಭೇಟಿ ಪರಿಶೀಲನೆ ನಡೆಸಿದ್ದಾರೆ. ಕಿರುತೆರೆಯಲ್ಲಿ ಕನ್ನಡತಿ ಧಾರಾವಾಹಿ ಮೂಲಕ ಖ್ಯಾತಿ ಪಡೆದಿದ್ದ ಕಿರಣ್ ರಾಜ್ ಅಭಿನಯದ ರಾನಿ ಸಿನಿಮಾ ಬಿಡುಗಡೆಗೆ ಒಂದು ದಿನ ಇರುವಾಗ ಅಪಘಾತ ಸಂಭವಿಸಿದೆ.

## ಇತಿಹಾಸದಲ್ಲೇ ಮೊದಲ ಬಾರಿಗೆ ರಾಜ್ಯಪಾಲರಿಲ್ಲದೆಯೇ ನಡೆದ
# ಬೆಂ.ವಿವಿ ಘಟಿಕೋತ್ಸವ





**ಬೆಂಗಳೂರು:** ನಿನ್ನೆ ನಡೆದ 59ನೇ ಬೆಂಗಳೂರು ವಿಶ್ವವಿದ್ಯಾಲಯದ ಘಟಿಕೋತ್ಸವ ಕಾರ್ಯಕ್ರಮದಲ್ಲಿ 26 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಪದವಿ ಪ್ರಧಾನ ಮಾಡಲಾಯ್ತು. ಆದರೆ ಇದೇ ಮೊದಲ ಬಾರಿಗೆ ರಾಜ್ಯಪಾಲರ ಗೈರುಹಾಜರಿಯಲ್ಲಿ ಘಟಿಕೋತ್ಸವ ಕಾರ್ಯಕ್ರಮ ನಡೆಯಿತು. ಘಟಿಕೋತ್ಸವಕ್ಕೆ ರಾಜ್ಯಪಾಲರು ಗೈರಾದ ವಿಚಾರ ಚರ್ಚೆಗೆ ಗ್ರಾಸವಾಗಿದೆ. ಸಿಎಂ ಸಿದ್ದರಾಮಯ್ಯ ಮೂಡಾ ಪ್ರಕರಣದ ಚರ್ಚೆ ಮಧ್ಯೆ ಘಟಿಕೋತ್ಸವದಿಂದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ದೂರ ಉಳಿದಿದ್ದಾರೆ. ಹೀಗಾಗಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿದ್ದರು. ಪುಟ 2

## ಹೆಚ್‌ಎಂಟಿ ಪುನಶ್ಚೇತನಕ್ಕೆ ಭಾರಿ ಬಂಡವಾಳ ಹೂಡಲಿದೆ ಕೇಂದ್ರ: ಕುಮಾರಸ್ವಾಮಿ
# ಪ್ರಧಾನಿ ಜತೆ ಮಾತುಕತೆ

**ಬೆಂಗಳೂರು:** ಕರ್ನಾಟಕದ ಹೆಚ್‌ಎಂಟಿ ವಾಚ್ ಬ್ರ್ಯಾಂಡ್ ಅನ್ನು ಹೇಗಾದರೂ ಮಾಡಿ ಪುನಶ್ಚೇತನ ಮಾಡಿ ರಾಜ್ಯದ ಪ್ರಸಿದ್ಧ ಬ್ರ್ಯಾಂಡೊಂದರ ಪುನರುತ್ಥಾನ ಮಾಡಲೇಬೇಕೆಂದು ಟೊಂಕ ಕಟ್ಟಿದಂತಿರುವ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ ಕುಮಾರಸ್ವಾಮಿ ಇದೀಗ ಮತ್ತೊಂದು ಶುಭ ಸುದ್ದಿ ನೀಡಿದ್ದಾರೆ. ಹೆಚ್‌ಎಂಟಿ ವಾಚ್ ತಯಾರಿಕಾ ಸಂಸ್ಥೆಗೆ ಕೇಂದ್ರ ಸರ್ಕಾರ ಭಾರಿ ಬಂಡವಾಳ ಹೂಡುವಂತೆ ಮಾಡುವಲ್ಲಿ ಅವರು ಬಹುತೇಕ ಯಶಸ್ವಿಯಾಗಿದ್ದಾರೆ. ಈ ವಿಚಾರವಾಗಿ ಪ್ರಧಾನಿ ನರೇಂದ್ರ ಮೋದಿ ಜತೆಗೆ ಕುಮಾರಸ್ವಾಮಿ ಮಾತುಕತೆ ನಡೆಸಿದ್ದಾರೆ.

ಹೆಚ್‌ಎಂಟಿ ವಾಚ್ ತಯಾರಿಕಾ ಕಂಪನಿ ಪುನಶ್ಚೇತನಕ್ಕೆ 6,500 ಕೋಟಿ ರೂಪಾಯಿಗೂ ಹೆಚ್ಚು ಹಣ ಹೂಡಿಕೆ ಮಾಡಲು ಕೇಂದ್ರ ಸರ್ಕಾರ ಸಮ್ಮತಿಸಿದೆ. ಇದರೊಂದಿಗೆ ಈ ಬ್ರ್ಯಾಂಡ್‌ಗೆ ಮರುಜೀವ ಕೊಡಲು ಕುಮಾರಸ್ವಾಮಿ ರೂಪುರೇಷೆ ಸಿದ್ಧಪಡಿಸಿದ್ದಾರೆ. ಪುಟ 2



## ಮುಡಾ ಹಗರಣ: ಸಿದ್ದರಾಮಯ್ಯಗೆ ನಾಳೆ ನಿರ್ಣಾಯಕ ದಿನ
# ಹೈಕೋರ್ಟ್‌ನತ್ತ ಎಲ್ಲರ ಚಿತ್ತ

**ಬೆಂಗಳೂರು:** ಮುಡಾ ಹಗರಣ ಸಂಬಂಧ ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್ ಭವಿಷ್ಯ ಕರ್ನಾಟಕ ಹೈಕೋರ್ಟ್‌ನಲ್ಲಿದೆ. ಗುರುವಾರ ವಿಚಾರಣೆ ಮುಂದುವರಿಯಲಿದ್ದು, ಗುರುವಾರವೇ ಆದೇಶ ಹೊರಬೀಳುವ ಸಾಧ್ಯತೆಯಿದೆ. ರಾಜ್ಯಪಾಲರ ನಿರ್ಧಾರವನ್ನು ಹೈಕೋರ್ಟ್ ಎತ್ತಿಹಿಡಿಯುತ್ತದೆಯಾ? ಅಥವಾ ಪ್ರಾಸಿಕ್ಯೂಷನ್‌ಗೆ ನೀಡಿರುವ ಅನುಮತಿ ರದ್ದುಮಾಡುತ್ತದೆಯಾ ಎಂಬುದು ತೀವ್ರ ಕುತೂಹಲ ಕೆರಳಿಸಿದೆ. ಸೆಪ್ಟೆಂಬರ್ 12ರಂದೇ ವಿಚಾರಣೆಯನ್ನು ಮುಗಿಸೋಣ ಎಂದು ಈಗಾಗಲೇ ನ್ಯಾಯಮೂರ್ತಿಗಳು ಹೇಳಿದ್ದಾರೆ.

ಗುರುವಾರ ಸಿಎಂ ಪರವಾಗಿ ಹಿರಿಯ ವಕೀಲ ಅಭಿಷೇಕ್ ಮನುಸಿಂಘ್ವಿ ವಾದ ಮಂಡಿಸಲಿದ್ದು, ರಾಜ್ಯಪಾಲರ ಪರ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ವಾದ ಮಂಡಿಸಲಿದ್ದಾರೆ. ಹೀಗಾಗಿ ನಾಳೆ ಹೈಕೋರ್ಟ್‌ನಲ್ಲಿ ಹೈವೋಲ್ಟೇಜ್ ವಾದ-ಪ್ರತಿವಾದ ನಡೆಯುವ ಸಾಧ್ಯತೆಯಿದೆ.

**ಕಾಂಗ್ರೆಸ್‌ನಲ್ಲಿ ಸಿಎಂ ಕುರ್ಚಿ ರೇಸ್; ಬಿಜೆಪಿ ಲೇವಡಿ:** ಮತ್ತೊಂದೆಡೆ, ಕಾಂಗ್ರೆಸ್‌ನಲ್ಲಿನ ಸಿಎಂ ಕುರ್ಚಿ ರೇಸ್ ಬಗ್ಗೆ ಬಿಜೆಪಿ ನಾಯಕರು ಲೇವಡಿ ಮಾಡಿದ್ದಾರೆ. ಸಿದ್ದರಾಮ್ಯಯರ ಸಿಎಂ ಕುರ್ಚಿ ಉಳಿಯಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರೆ, ಯಾವುದೇ ಕ್ಷಣದಲ್ಲಿ ಸಿಎಂ ರಾಜೀನಾಮೆ ನಿಶ್ಚಿತ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹೇಳಿದ್ದಾರೆ. ಇನ್ನು ಮಾಜಿ ಸಚಿವ ಸುಧಾಕರ್, ಸಿದ್ದರಾಮಯ್ಯಗೆ ಕಾಂಗ್ರೆಸ್‌ನವರೇ ಖೆಡ್ಡಾ ತೋಡಿದ್ದಾರೆ ಎಂದು ಕುಟುಕಿದ್ದಾರೆ. ಪುಟ 2



## ಮಾಜಿ ಸಚಿವ ನಾಗೇಂದ್ರ ಕೃತ್ಯಗಳ ಬಗ್ಗೆ ಸ್ಫೋಟಕ ಮಾಹಿತಿ
# ಬಿಚ್ಚಿಟ್ಟ ಇಡಿ ಚಾರ್ಜ್ ಶೀಟ್



**ಬೆಂಗಳೂರು:** ಬಹುಕೋಟಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದ ತನಿಖೆಗೆ ರಾಜ್ಯ ಸರ್ಕಾರ ರಚಿಸಿದ್ದ ಎಸ್ ಐಟಿಯಿಂದ ಬಚಾವಾಗಿದ್ದ ಮಾಜಿ ಸಚಿವ ಬಿ ನಾಗೇಂದ್ರ ಇದೀಗ ಸಂಕಷ್ಟಕ್ಕೆ ಸಿಲುಕಿದ್ದಾರೆ. ಎಸ್ ಐಟಿ ಚಾರ್ಜ್ ಶೀಟ್ ನಲ್ಲಿ ನಾಗೇಂದ್ರ ಹೆಸರೇ ಉಲ್ಲೇಖಿಸಿರಲಿಲ್ಲ. ಮುಖ್ಯಮಂತ್ರಿ ಆದಿಯಾಗಿ ಎಲ್ಲ ಕಾಂಗ್ರೆಸ್ ನಾಯಕರೂ ಸಹ ಹಗರಣದಲ್ಲಿ ನಾಗೇಂದ್ರ ಕೈವಾಡ ಇಲ್ಲ ಎಂದೇ ಹೇಳಿದ್ದರು. ಅವರನ್ನು ಸಮರ್ಥಿಸಿಕೊಂಡಿದ್ದರು. ಆದಾಗ್ಯೂ, ನಾಗೇಂದ್ರರನ್ನು ಸಚಿವ ಸ್ಥಾನದಿಂದ ಕೆಳಗಿಳಿಸಲಾಗಿತ್ತು. ಇದೀಗ ಹಗರಣ ಸಂಬಂಧ ಕೇಂದ್ರ ತನಿಖಾ ಸಂಸ್ಥೆ ಜಾರಿ ನಿರ್ದೇಶನಾಲಯವು ನ್ಯಾಯಾಲಯಕ್ಕೆ ಸಲ್ಲಿಸಿರುವ ಚಾರ್ಜ್ ಶೀಟ್ ನಿಂದ ಸ್ಫೋಟಕ ಅಂಶಗಳು ಬಯಲಾಗಿವೆ. ಪುಟ 2



## ಬಿಜೆಪಿ ಸರ್ಕಾರದ ಅವಧಿಯ ಹಗರಣಗಳ ತನಿಖೆ ಪ್ರಗತಿ ಪರಿಶೀಲನೆಗೆ
# ಸಚಿವರ ಸಮಿತಿ ನೇಮಕ

**ಬೆಂಗಳೂರು:** ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿನ ಹಗರಣಗಳ ಮತ್ತು ಇತರ ಹಗರಣಗಳ ತನಿಖೆಯ ಪ್ರಗತಿ ಪರಿಶೀಲನೆಗೆ ಗೃಹ ಸಚಿವ ಡಾ. ಜಿ ಪರಮೇಶ್ವರ ನೇತೃತ್ವದಲ್ಲಿ ಸಮಿತಿ ರಚನೆ ಮಾಡಿ ಕರ್ನಾಟಕ ಸರ್ಕಾರ ಆದೇಶ ಹೊರಡಿಸಿದೆ. ಈ ವಿಚಾರವಾಗಿ ಖುದ್ದು ಸಿಎಂ ಸಿದ್ದರಾಮಯ್ಯ ಅವರೇ ಆದೇಶ ಹೊರಡಿಸಿದ್ದಾರೆ.

**ಸಿದ್ದರಾಮಯ್ಯ ಆದೇಶದಲ್ಲೇನಿದೆ?:** ಸರ್ಕಾರದ ಮತ್ತು ತನಿಖಾ ಸಂಸ್ಥೆಗಳ ಹಂತದಲ್ಲಿ ಚಾಲ್ತಿಯಲ್ಲಿರುವ ವಿವಿಧ ಹಗರಣಗಳ ತನಿಖೆಗಳ ಪ್ರಗತಿ, ಸಮನ್ವಯ ಮುಂತಾದ ಕಾರ್ಯಗಳಿಗೆ ಸಂಬಂಧಿಸಿದಂತೆ ಕ್ರಮ ವಹಿಸಲು ಈ ಕೆಳಕಂಡಂತೆ ಮಾನ್ಯ ಸಚಿವರುಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ ಎಂದು ಉಲ್ಲೇಖಿಸಿರುವ ಸಿದ್ದರಾಮಯ್ಯ, ಸಮಿತಿಯ ಸದಸ್ಯರ ಹೆಸರುಗಳನ್ನು ಉಲ್ಲೇಖಿಸಿದ್ದಾರೆ. ಪುಟ 2



## ಶಿರೂರು ಗುಡ್ಡ ಕುಸಿತದಲ್ಲಿ ಕಾಣೆಯಾಗಿರುವ ಜಗನಾಥ್ ಪುತ್ರಿಗೆ
# ನೌಕರಿ ಕೊಡಿಸಿದ ಹೆಚ್‌ಡಿಕೆ

**ಕಾರವಾರ:** ಶಿರೂರು ಗುಡ್ಡ ಕುಸಿತದ ಬಳಿಕ ಮೊದಲಿಗೆ ಸ್ಥಳಕ್ಕೆ ಭೇಟಿ ನೀಡಿದ್ದ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಕಾಣೆಯಾಗಿರುವ ಜಗನ್ನಾಥ ಪುತ್ರಿ ಕೃತಿಕಾ ಅವರಿಗೆ ಕೆಲಸ ಕೊಡಿಸುವುದಾಗಿ ಭರವಸೆ ನೀಡಿದ್ದರು. ಕೊಟ್ಟ ಭರವಸೆಯಂತೆ ಇದೀಗ, ಹೆಚ್ ಡಿ ಕುಮಾರಸ್ವಾಮಿ ಅವರು ಜಗನ್ನಾಥ ಪುತ್ರಿ ಕೃತಿಕಾ ಅವರಿಗೆ ಕೈಗಾ ಅಣು ವಿದ್ಯುತ್ ಸ್ಥಾವರದ ಬಿಹೆಚ್ ಇಎಲ್ ನಲ್ಲಿ ಉದ್ಯೋಗ ಕೊಡಿಸಿದ್ದಾರೆ. ಹೆಚ್ ಡಿ ಕುಮಾರಸ್ವಾಮಿ ಅವರು ಕೃತಿಕಾ ಅವರಿಗೆ ದೂರವಾಣಿ ಕರೆ ಮಾಡಿ ಉದ್ಯೋಗ ಖಾತರಿಪಡಿಸಿದ್ದಾರೆ.

ಜಗನ್ನಾಥ ಅವರ ಇನ್ನೋರ್ವ ಪುತ್ರಿ ಪಲ್ಲವಿ ನಾಯ್ಕ ಅವರಿಗೆ ಕಳೆದವಾರ ಪ್ರವಾಸೋದ್ಯಮ ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದಲ್ಲಿ ರಾಜ್ಯ ಸರ್ಕಾರ ನೌಕರಿ ನೀಡಿತ್ತು.



ಇದೇ ವರ್ಷ ಜುಲೈ 16 ರಂದು ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಶಿರೂರು ಗ್ರಾಮ ಬಳಿಯ ರಾಷ್ಟ್ರೀಯ ಹೆದ್ದಾರಿ 66ರಲ್ಲಿ ಗುಡ್ಡ ಕುಸಿತ ಸಂಭವಿಸಿತ್ತು. ಪುಟ 2

## ಮೊದಲ ಬಾರಿಗೆ ಟ್ರಂಪ್, ಕಮಲಾ ಮುಖಾಮುಖಿ
# ಆರ್ಥಿಕತೆ, ವಲಸೆ ಬಗ್ಗೆ ಚರ್ಚೆ

**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷೀಯ ಚುನಾವಣೆ ರಂಗೇರಿದ್ದು ಮಾಜಿ ಅಧ್ಯಕ್ಷ, ರಿಪಬ್ಲಿಕ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಮತ್ತು ಹಾಲಿ ಉಪಾಧ್ಯಕ್ಷೆ, ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿ ಕಮಲಾ ಹ್ಯಾರಿಸ್ ಮೊದಲ ಬಾರಿಗೆ ಮುಖಾಮುಖಿಯಾಗಿದ್ದಾರೆ. ಪುಟ 2



## ಬರ್ತ್ ಡೇ ಪಾರ್ಟಿಯಲ್ಲಿ ನೃತ್ಯ ಮಾಡಲು ನಿರಾಕರಿಸಿದ ನೃತ್ಯಗಾರ್ತಿಯರ ಮೇಲೆ
# ಸಾಮೂಹಿಕ ಅತ್ಯಾಚಾರ



**ಉತ್ತರ ಪ್ರದೇಶ:** ಬರ್ತ್ ಡೇ ಪಾರ್ಟಿಯಲ್ಲಿ ನೃತ್ಯ ಮಾಡಲು ನಿರಾಕರಿಸಿದ ಇಬ್ಬರು ನೃತ್ಯಗಾರ್ತಿಯರ ಮೇಲೆ 8 ಮಂದಿ ಸಾಮೂಹಿಕ ಅತ್ಯಾಚಾರವೆಸಗಿರುವ ಘಟನೆ ಉತ್ತರ ಪ್ರದೇಶದ ಖುಷಿನಗರದಲ್ಲಿ ನಡೆದಿದೆ. ಆರೋಪಿಗಳು ಆರ್ಕೆಸ್ಟ್ರಾ ನಡೆಯುತ್ತಿದ್ದ ಸಂದರ್ಭದಲ್ಲಿ ಇಬ್ಬರು ನೃತ್ಯಗಾರ್ತಿಯರನ್ನು ಹಣೆಗೆ ಬಂದೂಕಿಟ್ಟು ಅಪಹರಿಸಿ 10 ಕಿ.ಮೀ ದೂರಕ್ಕೆ ಕರೆದೊಯ್ದಿದ್ದಾರೆ.

ಆರೋಪಿಗಳಲ್ಲಿ ಒಬ್ಬನ ಮನೆಗೆ ಕರೆದೊಯ್ದಿದ್ದಾರೆ, ಬರ್ತ್ ಡೇ ಪಾರ್ಟಿಯಲ್ಲಿ ನೃತ್ಯ ಮಾಡುವಂತೆ ಆ ಇಬ್ಬರು ಯುವತಿಯರ ಬಳಿ ಕೇಳಿದ್ದಾರೆ. ಆದರೆ ಅವರು ನಿರಾಕರಿಸಿದ್ದಕ್ಕೆ ಕುಡಿದ ಮತ್ತಿನಲ್ಲಿ ಇಬ್ಬರ ಮೇಲೆ 8 ಮಂದಿ ಅತ್ಯಾಚಾರವೆಸಗಿದ್ದಾರೆ. ಪುಟ 2

## ಜಿಲ್ಲಾಸ್ಪತ್ರೆಯಲ್ಲಿ ಕರ್ತವ್ಯನಿರತ ವೈದ್ಯರ ಮೇಲೆ ಹಲ್ಲೆ
# ಆರೋಪಿಗಳ ಬಂಧನ

**ಚಿಕ್ಕಮಗಳೂರು:** ವೈದ್ಯರ ಮೇಲೆ ಹಲ್ಲೆ ಪ್ರಕರಣಗಳು ದೇಶಾದ್ಯಂತ ಪದೇಪದೇ ಸಂಭವಿಸುತ್ತಿದೆ. ವೈದ್ಯರ ಮೇಲಿನ ಹಲ್ಲೆ ಪ್ರಕರಣಗಳನ್ನು ಖಂಡಿಸಿ ಕೆಲ ದಿನಗಳ ಹಿಂದೆ ಇಡೀ ದೇಶಾದ್ಯಂತ ಆರೋಗ್ಯ ಸೇವೆಗಳನ್ನ ಸಂಪೂರ್ಣವಾಗಿ ಬಂದ್ ಮಾಡಿ ಮುಷ್ಕರ ಕೂಡ ನಡೆಸಲಾಗಿತ್ತು. ಇದೀಗ ಚಿಕ್ಕಮಗಳೂರು ನಗರದ ಮಲ್ಲೇಗೌಡ ಜಿಲ್ಲಾಸ್ಪತ್ರೆಯಲ್ಲಿ ವೈದ್ಯರ ಮೇಲೆ ಮಹಿಳೆಯೊಬ್ಬರು ಹಲ್ಲೆ ನಡೆಸಿದ್ದಾರೆ.

**ಚಿಕ್ಕಮಗಳೂರು ಜಿಲ್ಲಾಸ್ಪತ್ರೆಯಲ್ಲಿ ನಡೆದಿದ್ದೇನು?:** ಅರಳುಗುಪ್ಪೆ ಮಲ್ಲೇಗೌಡ ಜಿಲ್ಲಾಸ್ಪತ್ರೆಗೆ ಸಹೋದರನ ಚಿಕಿತ್ಸೆಗೆ ಚಿಕ್ಕಮಗಳೂರು ನಗರದ ಟಿಪ್ಪು ನಗರದ ನಿವಾಸಿ ತಸೀಮಾ ಮತ್ತು ಸಂಬಂಧಿಕರು ಬಂದಿದ್ದರು. ತುರ್ತು ಚಿಕಿತ್ಸಾ ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಮೂಳೆ ತಜ್ಞ ವೆಂಕಟೇಶ್ ಅವರು ತಪಾಸಣೆ ನಡೆಸುವಾಗ ರೋಗಿಯ ಸಂಬಂಧಿಕರು ಒಟ್ಟಿಗೇ ತುರ್ತು ಸೇವಾ ಘಟಕದ ವಾರ್ಡ್ ನ ಒಳಗೆ ಬಂದಿದ್ದು, ಹೊರ ಹೋಗುವಂತೆ ವೈದ್ಯರು ತಿಳಿಸಿದಾಗ ಮಾತಿಗೆ ಮಾತು ಬೆಳೆದಿದೆ. ಕೋಪಗೊಂಡ ಗಾಯಾಳು ಸಹೋದರಿ ತಸೀಮಾ ವೈದ್ಯರ ಕೊರಳ ಪಟ್ಟಿ ಹಿಡಿದು ಎಳೆದಿದ್ದಾರೆ. ಅಲ್ಲದೆ ಚಪ್ಪಲಿ ಬಿಚ್ಚಿ ಎಸೆದಿದದ್ದಾರೆ.



ಅಲ್ಲೇ ಇದ್ದ ಕೆಲವರು ಈ ಘಟನೆಯನ್ನು ತಮ್ಮ ಮೊಬೈಲ್ ಫೋನ್‌ನಲ್ಲಿ ವಿಡಿಯೊ ಚಿತ್ರೀಕರಿಸಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದೆ. ಕೂಡಲೇ ಹೊರರೋಗಿ ವಿಭಾಗ ಬಂದ್ ಮಾಡಿದ ವೈದ್ಯರು ಮತ್ತು ಸಿಬ್ಬಂದಿ, ಜಿಲ್ಲಾ ಶಸ್ತ್ರಚಿಕಿತ್ಸಕರ ಕಚೇರಿ ಎದುರು ಜಮಾಯಿಸಿದರು. ಏಕಾಏಕಿ ಹಲ್ಲೆ ನಡೆಸಿದ್ದರಿಂದಾಗಿ ವೈದ್ಯರು ಹಾಗೂ ಸಿಬ್ಬಂದಿಯ ಆತ್ಮಸ್ಥೈರ್ಯ ಕುಗ್ಗಿಸಿದಂತಾಗಿದೆ ಎಂದು ವೈದ್ಯರು ಹಾಗೂ ಆಸ್ಪತ್ರೆಯ ಸಿಬ್ಬಂದಿಗಳೆಲ್ಲರೂ ಕೂಡಾ ಸೇವೆಯನ್ನ ಸ್ಥಗಿತಗೊಳಿಸಿ ಆಸ್ಪತ್ರೆ ಬಂದ್ ಮಾಡಿ, ಪ್ರತಿಭಟನೆ ನಡೆಸಿದರು. ಪುಟ 2

## ಆಂಧ್ರದಲ್ಲಿ ಭೀಕರ ಅಪಘಾತ, ಲಾರಿ ಪಲ್ಟಿಯಾಗಿ 7 ಕೂಲಿ
# ಕಾರ್ಮಿಕರ ಸಾವು

**ದೇವರಪಲ್ಲಿ:** ಪೂರ್ವ ಗೋದಾವರಿ ಜಿಲ್ಲೆಯ ದೇವರಪಲ್ಲಿ ತಾಲೂಕಿನ ಚಿಲಕವಾರಿಪಾಕಲ ಎಂಬ ಗ್ರಾಮದ ಬಳಿ ಭೀಕರ ರಸ್ತೆ ಅಪಘಾತ ಸಂಭವಿಸಿದೆ. ಲಾರಿ ಪಲ್ಟಿಯಾಗಿ ಸ್ಥಳದಲ್ಲೇ 7 ಕೂಲಿ ಕಾರ್ಮಿಕರು ಮೃತಪಟ್ಟಿದ್ದಾರೆ. ಮೃತರ ಪೈಕಿ 6 ಕಾರ್ಮಿಕರು ತಾಡಿಮಳ್ಳ ಗ್ರಾಮದ ನಿವಾಸಿಗಳು. ಘಟನೆಯಲ್ಲಿ ಹಲವರಿಗೆ ಗಾಯಗಳಾಗಿದ್ದು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಗೋಡಂಬಿ ಲೋಡ್ ತುಂಬಿಕೊಂಡು ತೆರಳುತ್ತಿದ್ದ ಲಾರಿ, ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾಗಿ ದುರಂತ ಸಂಭವಿಸಿದೆ.




ಮಂಗಳವಾರ ರಾತ್ರಿ ಈ ರಸ್ತೆ ಅಪಘಾತ ಸಂಭವಿಸಿದೆ. ನರಸಾಪುರಂ ಮಂಡಲದ ಬೊರ್ರಂಪಾಲೆಂನಿಂದ ನಿಡದವೋಲು ಮಂಡಲದ ತಾಡಿಮಲ್ಲ ಕಡೆಗೆ ಲಾರಿ ಹೋಗುತ್ತಿದ್ದಾಗ ಅಪಘಾತ ಸಂಭವಿಸಿದೆ. ಚಿನ್ನಾಯಗುಡೆಂ ಉಪನಗರದಲ್ಲಿ ನಿಯಂತ್ರಣ ತಪ್ಪಿ ಕಾಲುವೆಗೆ ಉರುಳಿದೆ. ಅಪಘಾತವಾದ ಲಾರಿಯಲ್ಲಿ 10 ಮಂದಿ ಪ್ರಯಾಣಿಸುತ್ತಿದ್ದರು. ಏಳು ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಪುಟ 2

## ರಾಮೇಶ್ವರಂ ಕೆಫೆ ಸ್ಫೋಟ ಕೇಂದ್ರ, ಸರ್ಕಾರದ ವೈಫಲ್ಯ

**ಬೆಂಗಳೂರು:** ರಾಮೇಶ್ವರಂ ಕೆಫೆ ಬ್ಲಾಸ್ಟ್ ಕೇಂದ್ರ ಸರ್ಕಾರದ ವೈಫಲ್ಯ ಅಲ್ವಾ ಎಂದು ಕುಣಿಗಲ್ ಕಾಂಗ್ರೆಸ್ ಶಾಸಕ ರಂಗನಾಥ್ ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡಿದ್ದಾರೆ. ಬಿಜೆಪಿ ಕಚೇರಿ ಬ್ಲಾಸ್ಟ್ ಮಾಡಲು ಪ್ಲ್ಯಾನ್ ಆಗಿತ್ತು ಎಂಬ ಎನ್‌ಐಎ ಚಾರ್ಜ್ ಶೀಟ್ ವಿಚಾರ ಮತ್ತು ಕಾಂಗ್ರೆಸ್ ಆಡಳಿತದಲ್ಲಿ ಇಂತಹ ಪ್ರಕರಣಗಳು ಹೆಚ್ಚು ಆಗುತ್ತಿವೆ ಎಂಬ ಬಿಜೆಪಿ ನಾಯಕರ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು,



ಎನ್‌ಐಎ ಜಾರ್ಜ್ ಶೀಟ್ ನೋಡಿದರೆ ಭಾರತ ಸರ್ಕಾರ ಸರಿಯಾಗಿ ಕೆಲಸ ಮಾಡುತ್ತಿಲ್ಲ ಎಂದಾಯಿತು. ಇದು ಕೇಂದ್ರ ಸರ್ಕಾರದ ವೈಫಲ್ಯ ಆಗಿದೆ ಎಂದರು. ಎನ್‌ಐಎ ಕೇಂದ್ರದ ಅಧೀನದಲ್ಲಿ ಬರುತ್ತೆ. ಹಾಗಾದರೆ ಅವರಿಗೆ ಜವಾಬ್ದಾರಿ ಇರಲಿಲ್ಲವಾ? ಸುಮ್ಮನೆ ಆರೋಪ ಮಾಡುವುದು ಸರಿಯಲ್ಲ. ಮುಂದೆ ಇಂತಹ ಘಟನೆ ಆಗದಂತೆ ನಾವೆಲ್ಲ ಒಟ್ಟಾಗಿ ಕೆಲಸ ಮಾಡಬೇಕು ಎಂದು ಬಿಜೆಪಿ ನಾಯಕರಿಗೆ ತಿರುಗೇಟು ನೀಡಿದರು.

## ರೇಣುಕಾಸ್ವಾಮಿ ಕೊಲೆ ಕೇಸ್: ಫಾಸ್ಟ್ ಟ್ರ್ಯಾಕ್ ಕೋರ್ಟ್‌ಗೆ ವರ್ಗಾಯಿಸಲು ಚಿಂತನೆ

**ಬೆಂಗಳೂರು:** ಕಾನೂನು ತಜ್ಞರೊಂದಿಗೆ ಸಮಾಲೋಚಿಸಿ ರೇಣುಕಾಸ್ವಾಮಿ ಕೊಲೆ ಪ್ರಕರಣವನ್ನು ಫಾಸ್ಟ್ ಟ್ರ್ಯಾಕ್ ಕೋರ್ಟ್ ಅಥವಾ ಸ್ಪೆಷಲ್ ಕೋರ್ಟ್‌ಗೆ ಮನವಿ ಚಿಂತನೆ ನಡೆಸಲಾಗುತ್ತಿದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ತಿಳಿಸಿದ್ದಾರೆ.



ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾನೂನು ತಜ್ಞರೊಂದಿಗೆ ಸಮಾಲೋಚನೆ ನಡೆಸಲಾಗುತ್ತಿದೆ. ಫಾಸ್ಟ್ ಟ್ರ್ಯಾಕ್ ಕೋರ್ಟ್ ಅಥವಾ ಸ್ಪೆಷಲ್ ಕೋರ್ಟ್‌ಗೆ ಮನವಿ ಮಾಡಲು ಚಿಂತನೆ ನಡೆಸಲಾಗುತ್ತಿದೆ. ಬಹುಪಾಲು ರಿಪೋರ್ಟ್‌ಗಳು ಚಾರ್ಜ್‌ಶೀಟ್ ಸಲ್ಲಿಕೆಗೂ ಮುನ್ನವೇ ನಮ್ಮ ಕೈಸೇರಿದೆ. ಮತ್ತಷ್ಟು ರಿಪೋರ್ಟ್ ಬರಬೇಕಿದೆ, ಆ ಬಳಿಕ ಕೋರ್ಟ್‌ಗೆ ಸಲ್ಲಿಸುತ್ತೇವೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಪರಪ್ಪನ ಅಗ್ರಹಾರದಲ್ಲಿ ದರ್ಶನ್‌ಗೆ ರಾಜಾತಿಥ್ಯ ವಿಚಾರಕ್ಕೆ ಪ್ರತಿಕ್ರಿಯಿ, ಆಗ್ನೇಯ ವಿಭಾಗ ಡಿಸಿಪಿ ಸಾರಾ ಫಾತೀಮಾ ನೇತೃತ್ವದಲ್ಲಿ ತನಿಖೆ ನಡೆಯುತ್ತಿದೆ. ಸಿಸಿಬಿ ಜಂಟಿ ಪೊಲೀಸ್ ಡಾ.ಚಂದ್ರಗುಪ್ತ ನೇತೃತ್ವದಲ್ಲಿ ಅಧಿಕಾರಿಗಳ ಪಾತ್ರದ ಬಗ್ಗೆ ತನಿಖೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಇನ್ನೂ ನಟ ಧ್ರುವ ಸರ್ಜಾ ಮ್ಯಾನೇಜರ್ ಬಂಧನ ಪ್ರಕರಣದ ಕುರಿತು ಮಾತನಾಡಿ, ಧ್ರುವ ಸರ್ಜಾಗೆ ಹತ್ತಿರವಾಗುವ ವಿಚಾರಕ್ಕೆ ಗಲಾಟೆ ಮಾಡಿಕೊಂಡಿದ್ದಾರೆ. ಹಾಗಾಗಿ ಸರ್ಜಾ ಮ್ಯಾನೇಜರ್ ಅಶ್ವಿನ್‌ನನ್ನ ಬಂಧನ ಮಾಡಲಾಗಿತ್ತು. ಬನಶಂಕರಿ ಪೊಲೀಸರು ಬಂಧನ ಮಾಡಿದ್ದರು ಅಷ್ಟೇ ಎಂದು ತಿಳಿಸಿದ್ದಾರೆ.

## 1,419 ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಇನ್ನೂ ಸಿಕ್ಕಿಲ್ಲ: ಇಂಗ್ಲಿಷ್ ಮೀಡಿಯಂ ಪಠ್ಯ ಪುಸ್ತಕಗಳು

**ಬೆಂಗಳೂರು:** ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 2024-25ನೇ ಸಾಲಿನಿಂದ ಸದ್ಯ ಇರುವ ಕನ್ನಡ/ಇತರೆ ಮಾಧ್ಯಮದ ಜೊತೆಗೆ ಆಂಗ್ಲ ದ್ವಿಭಾಷಾ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿದೆ. ರಾಜ್ಯದಲ್ಲಿ 75ಕ್ಕೂ ಹೆಚ್ಚು ಮಕ್ಕಳ ದಾಖಲಾತಿ ಇರುವ 1,419 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಂದನೇ ತರಗತಿಯಿಂದ ಹಾಲಿ ಇರುವ ಕನ್ನಡ ಮಾಧ್ಯಮದ ಜೊತೆಗೆ ಆಂಗ್ಲ ಮಾಧ್ಯಮದಲ್ಲಿ ತರಗತಿಗಳನ್ನು ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿದೆ. ಆದರೆ ಸರ್ಕಾರದ ಈ ಆದೇಶ ಬಂದಿರುವ ಸರ್ಕಾರಿ ಶಾಲೆಗಳು ತಮ್ಮದೇ ಆದ ಸಮಸ್ಯೆಗಳನ್ನು ಎದುರಿಸುತ್ತಿವೆ.



ಸದ್ಯ ಮಧ್ಯಾವಧಿ ಪರೀಕ್ಷೆಗಳಿಗೆ ಸಾವಿರಾರು ಮಕ್ಕಳು ತಯಾರಾಗುತ್ತಿದ್ದು, ಈ ವರ್ಷದ ಆರಂಭದಲ್ಲಿ ಆಂಗ್ಲ-ಮಾಧ್ಯಮ ವಿಭಾಗಗಳನ್ನು ಪರಿಚಯಿಸಿದ 1,419 ಶಾಲೆಗಳಿಗೆ ಇನ್ನೂ ಕೂಡ ಪಠ್ಯಪುಸ್ತಕಗಳು ಸಿಕ್ಕಿಲ್ಲ. ಇದರಿಂದ ಮಕ್ಕಳ ಓದಿಗೆ ಸಮಸ್ಯೆಗಳು ಎದುರಾಗಿವೆ. ಇದರ ಹೊರತಾಗಿಯೂ, ಸೆಪ್ಟೆಂಬರ್ 5 ರಂದು, ಸರ್ಕಾರವು 2,000 ಶಾಲೆಗಳಲ್ಲಿ ಹೆಚ್ಚು ಬೇಡಿಕೆಯಿರುವ ವಿಭಾಗಗಳನ್ನು ಸೇರಿಸುವ ತನ್ನ ಕಾರ್ಯಕ್ರಮದ ಭಾಗವಾಗಿ ವರ್ಷದ ಮಧ್ಯದಲ್ಲಿ ಇನ್ನೂ 373 ಶಾಲೆಗಳಲ್ಲಿ ಇಂಗ್ಲಿಷ್-ಮಾಧ್ಯಮ ವಿಭಾಗಗಳನ್ನು ಮಂಜೂರು ಮಾಡಲು ನಿರ್ಧರಿಸಿದೆ.

ಸರ್ಕಾರಿ ಶಾಲೆಗಳಿಗೆ ಪುಸ್ತಕಗಳನ್ನು ಪೂರೈಸುವ ಕರ್ನಾಟಕ ಪಠ್ಯಪುಸ್ತಕ ಸೊಸೈಟಿಯು ಈ ತಿಂಗಳ ಅಂತ್ಯದೊಳಗೆ ಅಗತ್ಯ ಅಧ್ಯಯನ ಸಾಮಗ್ರಿಗಳನ್ನು ಪೂರೈಸುವ ಸಾಧ್ಯತೆ ಇದ್ದು, ಕೆಲವು ತಜ್ಞರು ಹಿಂದಿನ ವರ್ಷದ ಪುಸ್ತಕಗಳನ್ನು ಬಳಸಿ ಅಥವಾ ಬೇರೆ ವ್ಯವಸ್ಥೆ ಮಾಡುವವರೆಗೆ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಸಲಹೆ ನೀಡಿದ್ದಾರೆ. 2019ರಲ್ಲಿ ಹೆಚ್‌ಡಿ ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದಾಗ ಸರ್ಕಾರಿ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ವಿಭಾಗ ಆರಂಭಿಸಲಾಗಿತ್ತು. ಅಂದಿನಿಂದ, 285 ಕರ್ನಾಟಕ ಸಾರ್ವಜನಿಕ ಶಾಲೆಗಳು ಸೇರಿದಂತೆ 2,403 ಶಾಲೆಗಳು ಇಂಗ್ಲಿಷ್-ಮಾಧ್ಯಮ ವಿಭಾಗಗಳನ್ನು ಆರಂಭಿಸಿವೆ. ಇದೀಗ ಸಾರ್ವಜನಿಕ ಬೇಡಿಕೆಯಿಂದ ಉತ್ತೇಜಿತವಾಗಿರುವ ರಾಜ್ಯ ಸರ್ಕಾರವು 2024-25ರ ಬಜೆಟ್‌ನಲ್ಲಿ 2,000 ಆಂಗ್ಲ-ಮಾಧ್ಯಮ ವಿಭಾಗಗಳನ್ನು ಸೇರಿಸುವುದಾಗಿ ಘೋಷಿಸಿತ್ತು. ಇನ್ನೂ 1,419 ಶಾಲೆಗಳಿಗೆ ಪಠ್ಯಪುಸ್ತಕಗಳ ಕೊರತೆ ಇದ್ದು ಇತ್ತ ಪುಸ್ತಕಗಳಿಲ್ಲದಿರುವ ಕಾರಣ ಪೋಷಕರು ಆಕ್ರೋಶ ಹೊರ ಹಾಕಿದ್ದಾರೆ.

## ಬಹುಕೋಟಿ ಹಗರಣದ ಮಾಸ್ಟರ್ ಮೈಂಡ್ ನಾಗೇಂದ್ರ: ಇಡಿ ಚಾರ್ಜ್‌ಶೀಟ್ ಸಲ್ಲಿಕೆ

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣದ ಮಾಸ್ಟರ್ ಮೈಂಡ್ ಮಾಜಿ ಸಚಿವ ನಾಗೇಂದ್ರ ಎಂದು ಆರೋಪ ಹೊರಿಸಿ ಜಾರಿ ನಿರ್ದೇಶನಾಲಯ ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದೆ.



ಈ ಪ್ರಕರಣದ ಬಗ್ಗೆ ತನಿಖೆ ನಡೆಸಿದ ಇಡಿ 82ನೇ ಜನಪ್ರತಿನಿಧಿಗಳ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿದೆ. ನಾಗೇಂದ್ರ ಸೇರಿ 5 ಆರೋಪಿಗಳ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಯಾಗಿದ್ದು ನಾಗೇಂದ್ರ ಅಣತಿಯಂತೆ 187 ಕೋಟಿ ರೂ. ಹಗರಣ ನಡೆದಿದೆ ಎಂದು ಇಡಿ ಉಲ್ಲೇಖಿಸಿದೆ.

**ಚಾರ್ಜ್‌ಶೀಟ್‌ನಲ್ಲಿ ಏನಿದೆ?:** ಹೈದರಾಬಾದ್‌ನಲ್ಲಿದ್ದ ಮಧ್ಯವರ್ತಿ ಸತ್ಯನಾರಾಯಣ ವರ್ಮಾ ಜೊತೆ ನಾಗೇಂದ್ರಗೆ ನಿಕಟ ಸಂಪರ್ಕ ಇತ್ತು. ನಾಗೇಂದ್ರನ ಅಣತಿಯಂತೆಯೇ ಸಂಪೂರ್ಣ ಹಣದ ವಹಿವಾಟು ನಡೆದಿದೆ. 21 ಕೋಟಿ ರೂ. ಹಣವನ್ನು ಲೋಕಸಭಾ ಚುನಾವಣೆಗೆ ಬಳಸಿದ್ದಾರೆ. ಬೆಂಗಳೂರು ಮತ್ತು ಬಳ್ಳಾರಿಯಲ್ಲಿ ಅಕ್ರಮ ಹಣ ವರ್ಗಾವಣೆ ನಡೆದಿದೆ ಎಂದು ಉಲ್ಲೇಖಿಸಲಾಗಿದೆ.

**ನಾಗೇಂದ್ರ, ದದ್ದಲ್ ಹೆಸರು ಇರಲಿಲ್ಲ:** ವಾಲ್ಮೀಕಿ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ನೇಮಿಸಿದ್ದ ವಿಶೇಷ ತನಿಖಾ ತಂಡ ಪೊಲೀಸರು 12 ಮಂದಿ ಆರೋಪಿಗಳ ವಿರುದ್ಧ 3ನೇ ಎಸಿಎಂಎಂ ಕೋರ್ಟ್‌ನಲ್ಲಿ ಆಗಸ್ಟ್ ತಿಂಗಳಿನಲ್ಲಿ ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದ್ದರು. ಈ ದೋಷಾರೋಪಪಟ್ಟಿಯಲ್ಲಿ ಮಾಜಿ ಸಚಿವ ನಾಗೇಂದ್ರ, ಬಸನಗೌಡ ದದ್ದಲ್ ಅವರ ಹೆಸರನ್ನು ಉಲ್ಲೇಖಿಸಿರಲಿಲ್ಲ.

ಸತ್ಯಾರಾಯಣ ವರ್ಮಾ, ಸತ್ಯನಾರಾಯಣ ಇಟ್ಕಾರಿ, ವಾಲ್ಮೀಕಿ ನಿಗಮ ಎಂಡಿ ಪದ್ಮನಾಭ, ಲೆಕ್ಕಾಧಿಕಾರಿ ಪರಶುರಾಮ, ನೆಕ್ಕುಂಟಿ ನಾಗರಾಜ್, ನಾಗೇಶ್ವರ್, ಸಾಯಿ ತೇಜ ಸೇರಿ 12 ಜನರ ಮೇಲೆ ಚಾರ್ಜ್ ಶೀಟ್ ಸಲ್ಲಿಕೆ ಮಾಡಲಾಗಿತ್ತು.

## ಭಯೋತ್ಪಾದನಾ ಚಟುವಟಿಕೆ ನಿಯಂತ್ರಣಕ್ಕೆ ಟಾಸ್ಕ್ ಫೋರ್ಸ್ ರಚಿಸಿ

**ಬೆಂಗಳೂರು:** ಭಯೋತ್ಪಾದಕರು ಬಿಜೆಪಿ ಕಚೇರಿಯಲ್ಲಿ ಬಾಂಬ್ ಸ್ಫೋಟಿಸುವ ಸಂಚು ಮಾಡಿದ್ದು ಅತ್ಯಂತ ಖಂಡನೀಯ. ಉಗ್ರ ಚಟುವಟಿಕೆ ನಿಯಂತ್ರಣಕ್ಕೆ ಕಾಂಗ್ರೆಸ್ ಸರ್ಕಾರ ವಿಶೇಷ ಟಾಸ್ಕ್ ಫೋರ್ಸ್ ರಚಿಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹಿಸಿದರು.



ಬೆಂಗಳೂರಿನಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಐಟಿ, ಬಿಟಿ ರಾಜಧಾನಿ ಬೆಂಗಳೂರಿನಲ್ಲಿ ಭಯದ ವಾತಾವರಣ ಸೃಷ್ಟಿಸಿ ಆರ್ಥಿಕತೆಯನ್ನು ನಾಶ ಮಾಡಬೇಕೆಂದು ಭಯೋತ್ಪಾದಕರು ಯೋಜನೆ ರೂಪಿಸಿದ್ದರು. ಇದಕ್ಕೆ ಪೂರಕವಾಗಿ ಕಾಂಗ್ರೆಸ್‌ನ ವಿಧಾನಪರಿಷತ್ ಸದಸ್ಯರೊಬ್ಬರು, ಬಾಂಗ್ಲಾ ಮಾದರಿ ಹಲ್ಲೆ ಮಾಡಲಾಗುವುದು ಎಂದು ಬೆದರಿಕೆ ಹಾಕಿದ್ದರು. ಬಾಂಗ್ಲಾದೇಶದಿಂದಲೂ ಹಲವರು ಆಧಾರ್ ಕಾರ್ಡ್ ಪಡೆದು ಬೆಂಗಳೂರಿಗೆ ಬರುತ್ತಿದ್ದಾರೆ. ಇದರಿಂದ ಭಯೋತ್ಪಾದನಾ ಚಟುವಟಿಕೆ ಹೆಚ್ಚುತ್ತಿದೆ. ರಾಜ್ಯ ಗೃಹ ಇಲಾಖೆ ಇದರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಇದಕ್ಕಾಗಿ ವಿಶೇಷ ಟಾಸ್ಕ್ ಫೋರ್ಸ್ ರಚಿಸಬೇಕು ಎಂದರು.

ರಾಜ್ಯಕ್ಕೆ ನುಸುಳುವ ಬಾಂಗ್ಲಾ ಪ್ರಜೆಗಳನ್ನು ಕೂಡಲೇ ಪತ್ತೆ ಮಾಡಿ ಅವರನ್ನು ಹೊರಕ್ಕೆ ಹಾಕುವ ಕೆಲಸವನ್ನು ರಾಜ್ಯ ಸರ್ಕಾರ ಮಾಡಬೇಕಿದೆ. ಇಲ್ಲವಾದರೆ ಪಶ್ಚಿಮ ಬಂಗಾಳ ಮತ್ತು ಅಸ್ಸಾಂನ ಸ್ಥಿತಿಯೇ ರಾಜ್ಯಕ್ಕೂ ಬರಲಿದೆ. ನಮ್ಮ ರಾಜ್ಯದ ಜನರ ಬದುಕು ಭಯೋತ್ಪಾದಕರ ನಿಯಂತ್ರಣಕ್ಕೆ ಹೋಗಬಾರದು. ಸ್ಲೀಪರ್ ಸೆಲ್‌ಗಳನ್ನು ಪತ್ತೆ ಮಾಡುವ ಕೆಲಸವನ್ನು ಸರ್ಕಾರ ಮಾಡಬೇಕು ಎಂದು ಅಶೋಕ್ ಒತ್ತಾಯಿಸಿದರು. ವಿಧಾನಸೌಧದಲ್ಲೇ ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗಿದ್ದನ್ನು ಕಾಂಗ್ರೆಸ್ ಸಚಿವರು ನಿರಾಕರಿಸಿದ್ದರು. ಪದೇ ಪದೆ ಭಯೋತ್ಪಾದಕರಿಗೆ ಪ್ರೇರಣೆಯಾಗುವ ಹೇಳಿಕೆಗಳನ್ನು ಕಾಂಗ್ರೆಸ್ ನಾಯಕರು ನೀಡಿದ್ದಾರೆ. ಇದರಿಂದಾಗಿ ಭಯೋತ್ಪಾದನೆಗೆ ಕುಮ್ಮಕ್ಕು ದೊರೆತಿದೆ. ಕರ್ನಾಟಕದಲ್ಲೇ ಭಯೋತ್ಪಾದನೆ ಮಾಡಿದರೆ ಏನೂ ತೊಂದರೆ ಇಲ್ಲ ಎಂದು ಭಯೋತ್ಪಾದಕರಿಗೆ ಅನ್ನಿಸಿದೆ. ಇದಕ್ಕಾಗಿ ಇಲ್ಲಿ ಹೆಚ್ಚು ಉಗ್ರ ಚಟುವಟಿಕೆ ನಡೆಯುತ್ತಿದೆ ಎಂದು ಹೇಳಿದರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಭಯೋತ್ಪಾದಕರಿಗೆ ಭಯವೇ ಇಲ್ಲ. ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟವಾದಾಗ, ಇದು ವ್ಯಾಪಾರ ವ್ಯಾಜ್ಯ ಎಂದು ಸಚಿವರು ಹೇಳಿದ್ದರು. ಇದರಿಂದಾಗಿಯೇ ಭಯೋತ್ಪಾದನಾ ಚಟುವಟಿಕೆ ವ್ಯವಸ್ಥಿತವಾಗಿ ನಡೆಯುತ್ತಿದೆ. ರಾಮೇಶ್ವರಂ ಕೆಫೆ ಬದಲಾಗಿ ಬಿಜೆಪಿ ಕಚೇರಿಯಲ್ಲಿ ಬಾಂಬ್ ಸ್ಫೋಟಿಸಬೇಕೆಂದು ಯೋಜನೆ ರೂಪಿಸಲಾಗಿತ್ತು. ಈ ಪ್ರಕರಣದಲ್ಲಿ ಹಿಂದೂಗಳ ಮೇಲೆ ದಾಳಿ ನಡೆಸಲು ಪ್ಲಾನ್ ಮಾಡಲಾಗಿತ್ತು ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವ ವಿಚಾರದಲ್ಲಿ ಬಿಜೆಪಿಗಿಂತಲೂ ಕಾಂಗ್ರೆಸ್ ನಾಯಕರಿಗೆ ಹೆಚ್ಚಿನ ವಿಶ್ವಾಸವಿದೆ. ಅದಕ್ಕಾಗಿ ಸಿಎಂ ಕುರ್ಚಿಗೆ ಸ್ಪರ್ಧೆ ಹೆಚ್ಚಿದ್ದು, ಎಲ್ಲರೂ ಮುಖ್ಯಮಂತ್ರಿಯಾಗುತ್ತೇನೆಂದು ಹೇಳುತ್ತಿದ್ದಾರೆ. ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ ಎಂದು ದೂರಿದರು.

## ಸ್ಫೋಟಕ್ಕೆ ಉಗ್ರರ ಸಂಚು: ಮಲ್ಲೇಶ್ವರ ಬಿಜೆಪಿ ಕಚೇರಿಗೆ ಪೊಲೀಸ್ ಭದ್ರತೆ ಹೆಚ್ಚಳ

**ಬೆಂಗಳೂರು:** ಸುರಕ್ಷತೆ ದೃಷ್ಟಿಯಿಂದ ಮಲ್ಲೇಶ್ವರದಲ್ಲಿರುವ ಬಿಜೆಪಿ ಕಚೇರಿಗೆ ಪೊಲೀಸ್ ಭದ್ರತೆಯನ್ನು ಹೆಚ್ಚಿಸಲಾಗಿದೆ.



ಮಲ್ಲೇಶ್ವರ ಬಿಜೆಪಿ ಕಚೇರಿ ಸ್ಫೋಟಕ್ಕೆ ಉಗ್ರರ ಸಂಚು ರೂಪಿಸಿದ ವಿಚಾರ ರಾಷ್ಟ್ರೀಯ ತನಿಖಾ ದಳ ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖವಾದ ಬೆನ್ನಲ್ಲೇ ಬಿಜೆಪಿ ಕಚೇರಿ ಎದುರು ಮೆಟಲ್ ಡಿಟೆಕ್ಟರ್ ಅಳವಡಿಕೆ ಮಾಡಲಾಗಿದೆ.

ಮೆಟಲ್ ಡಿಟೆಕ್ಟರ್ ಮೂಲಕವೇ ಬಿಜೆಪಿ ಕಚೇರಿಗೆ ಭೇಟಿಗೆ ಬರುವವರ ಒಳ ಪ್ರವೇಶ ಕಡ್ಡಾಯ ಮಾಡಲಾಗಿದೆ. ಇದರ ಜತೆಗೆ ಪ್ರವೇಶ ದ್ವಾರದ ಎದುರು 3-4 ಜನ ಹೆಚ್ಚುವರಿ ಪೊಲೀಸರನ್ನು ನಿಯೋಜಿಲಾಗಿದೆ.

ನಿತ್ಯ ಬಿಜೆಪಿ ಕಚೇರಿಗೆ ಮಲ್ಲೇಶ್ವರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್, ಸಬ್ ಇನ್ಸ್‌ಪೆಕ್ಟರ್ ಭೇಟಿ ಮಾಡಿ ಭದ್ರತೆ ಪರಿಶೀಲನೆ ಮಾಡಲಿದ್ದಾರೆ.

**ಯಾಕೆ ಭದ್ರತೆ?:** ಅಯೋಧ್ಯೆಯಲ್ಲಿ ಬಾಲ ಶ್ರೀರಾಮದೇವರ ಪ್ರಾಣ ಪ್ರತಿಷ್ಠಾಪನೆ ದಿನವೇ ಬಿಜೆಪಿ ಕಚೇರಿಯಲ್ಲಿ ಬಾಂಬ್ ಸ್ಫೋಟಿಸುವ ಸಂಚನ್ನು ಐಸಿಸ್ ಶಂಕಿತ ಉಗ್ರರು ರೂಪಿಸಿದ್ದರು ಎಂಬ ಶಾಕಿಂಗ್ ವಿಚಾರ ಎನ್‌ಐಎ ತನಿಖೆಯಲ್ಲಿ ಬಯಲಾಗಿತ್ತು.

ಬ್ರೂಕ್‌ಫೀಲ್ಡ್‌ನ ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣದ ಆರೋಪಿಗಳಾದ ಮುಸ್ಸಾವಿರ್ ಹುಸೇನ್ ಶಾಜಿದ್, ಅಬ್ದುಲ್ ಮತೀನ್ ತಾಹ, ಮಾಜ್ ಮುನೀರ್ ಅಹಮದ್, ಮುಜಾಮಿಲ್ ಷರೀಫ್ ವಿರುದ್ಧ ಎನ್‌ಐಎ ಅಧಿಕಾರಿಗಳು ಬೆಂಗಳೂರಿನ ವಿಶೇಷ ನ್ಯಾಯಾಲಯಕ್ಕೆ ಸೋಮವಾರ ಆರೋಪಪಟ್ಟಿ ಸಲ್ಲಿಸಿದ್ದಾರೆ.

## ಬೆಂ.ವಿವಿ ಘಟಿಕೋತ್ಸವ

**ಸಂಗೀತ ನಿರ್ದೇಶಕ ಗುರು ಕಿರಣ್ ಗೆ ಗೌರವ ಡಾಕ್ಟರೇಟ್:** 59ನೇ ಬೆಂಗಳೂರು ವಿವಿ ಘಟಿಕೋತ್ಸವದಲ್ಲಿ 31,382 ವಿದ್ಯಾರ್ಥಿಗಳಿಗೆ ಪದವಿ ಪ್ರಧಾನ ಮಾಡಲಾಯ್ತು. ಮ್ಯೂಸಿಕ್ ಡೈರೆಕ್ಟರ್ ಗುರು ಕಿರಣ್ ಅವರಿಗೆ ಗೌರವ ಡಾಕ್ಟರೇಟ್ ಪದವಿ ಪ್ರಧಾನಿಸಲಾಯ್ತು. ಜೊತೆಗೆ ರಾಜ್ಯ ಅಂಗವಿಕಲ ವ್ಯಕ್ತಿಗಳ ಅಧಿನಿಯಮದ ಮಾಜಿ ಆಯುಕ್ತ ಕೆ.ಎಸ್.ರಾಜಣ್ಣ ರಿಗೆ ಗೌರವ ಡಾಕ್ಟರೇಟ್ ಪದವಿ ನೀಡಲಾಯ್ರು. ಈ ವೇಳೆ ಮಾತನಾಡಿದ ಸಂಗೀತ ನಿರ್ದೇಶಕ ಗುರು ಕಿರಣ್, ನನ್ನ ತಂದೆತಾಯಿ ನಾನು ಡಾಕ್ಟರ್ ಆಗಬೇಕೆಂಬ ಕನಸ್ಸು ಕಂಡಿದ್ರು. ಆದ್ರೆ ಇವತ್ತು ಮ್ಯೂಸಿಕ್ ನಲ್ಲಿ ನಾನು ಡಾಕ್ಟರ್ ಆದೆ ಎಂದು ಸಂತಸ ವ್ಯಕ್ತಪಡಿಸಿದ್ರು. ಘಟಿಕೋತ್ಸವ ಕಾರ್ಯಕ್ರಮಕ್ಕೆ ಅಶ್ವಿನಿ ಪುನಿತ್ ರಾಜ್ ಕುಮಾರ್, ನಟಿ ಪ್ರಿಯಾಂಕ ಉಪೇಂದ್ರ ಭಾಗವಹಿಸಿದ್ದರು.

**9 ಚಿನ್ನದ ಪದಕ ಬಾಚಿದ ಅನ್ನಪೂರ್ಣ:** ಈ ಬಾರಿ ಒಟ್ಟು 168 ವಿದ್ಯಾರ್ಥಿಗಳು ಚಿನ್ನದ ಪದಕ ಗೆದಿದ್ದಾರೆ. ಪ್ರತಿ ಸಲದಂತೆ ಈ ವರ್ಷವೂ ವಿದ್ಯಾರ್ಥಿನಿಯರು ಮೇಲುಗೈ ಸಾಧಿಸಿದ್ದಾರೆ. ಕೆಮಿಸ್ಟ್ರಿ ವಿಭಾಗದ ವಿದ್ಯಾರ್ಥಿನಿ ಅನ್ನಪೂರ್ಣ ಎಂಬುವವರು 9 ಗೋಲ್ಡ್ ಮೆಡಲ್ ಪಡೆದು ಚಿನ್ನದ ನಗೆ ಬೀರಿದ್ರು. 140 ಜನರಿಗೆ ಪಿಹೆಚ್‌ಡಿ ಪದವಿ ಪ್ರಧಾನಿಸಲಾಯ್ತು.

ಘಟಿಕೋತ್ಸವ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಕಾರ್ಯಕ್ರಮದಲ್ಲಿ ವಿವಿ ವಿಚಾರ ಬಿಟ್ಟು ಎಸ್ ಇಪಿ ನೀತಿ ಜಾರಿ ಮಾಡುವ ವಿಚಾರ ಪ್ರಸ್ತಾಪಿಸಿದ್ರು. ಎನ್ ಇಪಿ ಕರ್ನಾಟಕ ವಿರೋಧಿಸಿದೆ, ನಾವು ಈ ವರ್ಷ ಎಸ್ ಇಪಿ ಜಾರಿ ಮಾಡ್ತಾ ಇದ್ದೀವಿ ಎಂದರು.

## ಪ್ರಧಾನಿ ಜತೆ ಮಾತುಕತೆ

ಹೆಚ್‌ಎಂಟಿ ಪುನಶ್ಚೇತನಕ್ಕೆ ಹೆಚ್‌ಡಿಕೆ ಐಡಿಯಾಗಳೇನು?: ಹೆಚ್‌ಎಂಟಿ ಪುನಶ್ಚೇತನಕ್ಕೆ ಕುಮಾರಸ್ವಾಮಿ ಈಗಾಗಲೇ ನೀಲನಕ್ಷೆ ಸಿದ್ಧಪಡಿಸಿದ್ದಾರೆ. ಕೃತಕ ಬುದ್ಧಿಮತ್ತೆ ಮತ್ತು ರೋಬೋಟಿಕ್ ತಂತ್ರಜ್ಞಾನ ಬಳಸಿ ಹೊಸ ಮಾದರಿ ವಾಚ್ ತಯಾರಿಕೆಗೆ ಪ್ಲಾನ್ ರೂಪಿಸಲಾಗಿದೆ. ಇದರೊಂದಿಗೆ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಬ್ರ್ಯಾಂಡಿಂಗ್‌ಗೆ ಕೂಡ ಕೇಂದ್ರ ಸರ್ಕಾರ ಚಿಂತನೆ ನಡೆಸಿದೆ.

**ಸ್ಥಳೀಯ ತಂತ್ರಜ್ಞರಿಗೇ ಆದ್ಯತೆ:** ಸ್ಥಳೀಯ ತಂತ್ರಜ್ಞರನ್ನೇ ಬಳಸಿ ಆಧುನಿಕ ಮಾದರಿ ವಾಚ್ ತಯಾರಿಕೆ ಒತ್ತು ನೀಡಲು ಕೇಂದ್ರ ಸರ್ಕಾರ ಉದ್ದೇಶಿಸಿದೆ. ವಿಕಸಿತ ಭಾರತ ಯೋಜನೆ ಅಡಿ ಭಾರಿ ಮೊತ್ತದ ಹಣ ಹೂಡಿಕೆಗೆ ಕೇಂದ್ರ ನಿರ್ಧಾರ ಕೈಗೊಂಡಿದೆ. ಈ ಬಗ್ಗೆ ತಜ್ಞರ ಜತೆ ಈಗಾಗಲೇ ಕುಮಾರಸ್ವಾಮಿ ಹಲವು ಸುತ್ತಿನ ಮಾತುಕತೆ ನಡೆಸಿದ್ದಾರೆ.

**ಕರ್ನಾಟಕದಲ್ಲಿ ಉದ್ಯೋಗಾವಕಾಶ:** ಕೇಂದ್ರ ಸರ್ಕಾರದ ಬಂಡವಾಳ ಹೂಡಿಕೆಯಿಂದ ಕರ್ನಾಟಕದ ಯುವಕರಿಗೆ, ತಂತ್ರಜ್ಞರಿಗೂ ಉದ್ಯೋಗ ಅವಕಾಶ ದೊರೆಯಲಿದೆ. ಮಾರ್ಕೆಂಟಿಂಗ್ ಹಾಗೂ ಸೇಲ್ಸ್ ವಿಭಾಗಕ್ಕೂ ಮರು ಜೀವ ಕೊಡಲು ಚಿಂತನೆ ನಡೆಸಲಾಗಿದೆ. ಇದು ಉದ್ಯೋಗಾವಕಾಶ ಹೆಚ್ಚಿಸಲಿದೆ.

ಹೆಚ್‌ಎಂಟಿ ವಾಚ್‌ಗೆ ಜಾಗತಿಕ ಮನ್ನಣೆ ದೊರಕಿಸುವ ನಿಟ್ಟಿನಲ್ಲಿ ಉತ್ಪಾದನೆ ಗುಣಮಟ್ಟಕ್ಕೆ ಒತ್ತು ನೀಡಲೂ ಕೇಂದ್ರ ಸರ್ಕಾರ ಆದ್ಯತೆ ನೀಡಲಿದೆ.

ಗೌರಿಹಬ್ಬದಂದು ಪುತ್ರ ನಿಖಿಲ್ ಕುಮಾರಸ್ವಾಮಿಗೆ ಹೆಚ್‌ಎಂಟಿ ವಾಚ್ ಉಡುಗೊರೆ ಕೊಡುವ ಮೂಲಕ ಕುಮಾರಸ್ವಾಮಿ ಗಮನ ಸೆಳೆದಿದ್ದರು. ಇಷ್ಟೇ ಅಲ್ಲದೆ, ಉಡುಗೊರೆ ನೀಡಲು ಹೆಚ್‌ಎಮ್‌ಟಿ ವಾಚನ್ನೇ ಆಯ್ಕೆ ಮಾಡಿ ಎಂದು ಜೆಡಿಎಸ್ ಸೇರಿದಂತೆ ಕರ್ನಾಟಕದ ಶಾಸಕರು, ಸಂಸದರಿಗೆ ಕುಮಾರಸ್ವಾಮಿ ಕೆಲವು ದಿನಗಳ ಹಿಂದೆ ಕರೆ ನೀಡಿದ್ದರು.

## ಹೈಕೋರ್ಟ್‌ನತ್ತ ಎಲ್ಲರ ಚಿತ್ತ

ಈ ಮಧ್ಯೆ, ರಾಜ್ಯ ಕಾಂಗ್ರೆಸ್‌ನಲ್ಲಿ ಸಿಎಂ ರೇಸ್ ಬಗ್ಗೆ ಹೇಳಿಕೆ ನೀಡದಂತೆ ಹಿರಿಯ ಸಚಿವರಿಗೆ ಕಡಿವಾಣ ಹಾಕಬೇಕು ಎಂದು ರಾಹುಲ್ ಗಾಂಧಿಗೆ 15ಕ್ಕೂ ಹೆಚ್ಚು ಕಾಂಗ್ರೆಸ್ ನಾಯಕರು ಪತ್ರ ಬರೆದಿದ್ದಾರೆ.

ನಾವು ಹೋರಾಡಬೇಕಾಗಿರುವುದು ಬಿಜೆಪಿ-ಜೆಡಿಎಸ್ ವಿರುದ್ಧ. ಅದರ ಬದಲು ಸಿಎಂ ಸ್ಥಾನದ ಕುರಿತು ಹೇಳಿಕೆ ನೀಡುತ್ತಿರುವುದಕ್ಕೆ, ಸಚಿವರ ಗೊಂದಲಕಾರಿ ಹೇಳಿಕೆಗೆ ಕಡಿವಾಣ ಹಾಕಿ ಎಂದು ಬಿ.ಎಲ್.ಶಂಕರ್, ವಿ.ಎಸ್.ಉಗ್ರಪ್ಪ, ಬಿ.ಎನ್. ಚಂದ್ರಪ್ಪ, ಎಲ್.ಹನುಮಂತಯ್ಯ, ರಾಣಿ ಸತೀಶ್, ವಿ.ಆರ್. ಸುದರ್ಶನ್, ಎಚ್.ಎಂ ರೇವಣ್ಣ, ಹೆಚ್.ಡಿ ಅಮರನಾಥ್,

### ಮೊದಲನೇ ಪುಟದಿಂದ...

ಸಿ.ಎಸ್.ದ್ವಾರಕನಾಥ್, ಪಿ.ಆರ್.ರಮೇಶ್ ಸೇರಿ 15ಕ್ಕೂ ಹೆಚ್ಚು ನಾಯಕರು ರಾಹುಲ್ ಗಾಂಧಿಗೆ ಪತ್ರ ಬರೆದಿದ್ದಾರೆ.

**ಅಮೆರಿಕದಲ್ಲಿ ರಾಹುಲ್ ಭೇಟಿಯಾದ ಡಿಕೆಶಿ!:** ಒಂದೆಡೆ ಸಿಎಂಗೆ ಪ್ರಾಸಿಕ್ಯೂಷನ್ ಟೆನ್ಷನ್. ಮತ್ತೊಂದೆಡೆ ಹಲವು ಸಚಿವರು ಸಿಎಂ ಕುರ್ಚಿಗೆ ಟವೆಲ್ ಹಾಕುತ್ತಿದ್ದಾರೆ. ಇದರ ನಡುವೆ ಅಮೆರಿಕ ಪ್ರವಾಸದಲ್ಲಿರುವ ಡಿಸಿಎಂ ಡಿಕೆ ಶಿವಕುಮಾರ್ ಮಂಗಳವಾರ ವಾಷಿಂಗ್ಟನ್‌ನಲ್ಲಿ ರಾಹುಲ್ ಗಾಂಧಿ ಅವರನ್ನು ಅನೌಪಚಾರಿಕವಾಗಿ ಭೇಟಿ ಮಾಡಿದ್ದು ಕುತೂಹಲಕ್ಕೆ ಕಾರಣವಾಗಿದೆ.

## ಬಿಚ್ಚಿಟ್ಟ ಇಡಿ ಚಾರ್ಜ್ ಶೀಟ್

**ನಾಗೇಂದ್ರ, ಮಾಸ್ಟರ್ ಮೈಂಡ್, ಅಣತಿಯಂತೆಯೇ ಹಣಕಾಸು ವಹಿವಾಟು:** ಬಹುಕೋಟಿ ವಾಲ್ಮೀಕಿ ಅಭಿವೃದ್ಧಿ ನಿಗಮ ಅವ್ಯವಹಾರದ ಮಾಸ್ಟರ್ ಮೈಂಡ್ ಮಾಜಿ ಸಚಿವ ನಾಗೇಂದ್ರ ಎಂಬುದನ್ನು ಸಾಕ್ಷಿ ಸಮೇತ ಜನಪ್ರತಿನಿಧಿಗಳ ಕೋರ್ಟ್ ಗೆ ಸಲ್ಲಿಸಿರುವ ಚಾರ್ಜ್ ಶೀಟ್ ನಲ್ಲಿ ಇಡಿ ಉಲ್ಲೇಖಿಸಿದೆ. ಆರೋಪಿ ಸತ್ಯನಾರಾಯಣವರ್ಮಾ ಜೊತೆ ನಿಕಟ ಸಂಪರ್ಕ ಹೊಂದಿದ್ದ ಬಗ್ಗೆ ಚಾರ್ಜ್ ಶೀಟ್ ನಲ್ಲಿ ಉಲ್ಲೇಖಿಸಿದ್ದು, ನಾಗೇಂದ್ರನ ಅಣತಿಯಂತೆಯೇ ಸಂಪೂರ್ಣ ಹಣದ ವಹಿವಾಟು ನಡೆದಿದೆ ಎಂದು ಉಲ್ಲೇಖಿಸಲಾಗಿದೆ.

**ಲೋಕಸಭಾ ಚುನಾವಣೆಗೆ ಹಣ ಬಳಕೆ:** ಅವ್ಯವಹಾರದ 21 ಕೋಟಿ ರೂಪಾಯಿ ಹಣವನ್ನು ಲೋಕಸಭಾ ಚುನಾವಣೆಗೆ ಬಳಸಿದ್ದಾರೆ. ಬೆಂಗಳೂರು ಮತ್ತು ಬಳ್ಳಾರಿಯಲ್ಲಿ ಮನಿಟ್ರಯಲ್ ನಡೆದಿದೆ ಎಂದು ಚಾರ್ಜ್ ಶೀಟ್ ನಲ್ಲಿ ಉಲ್ಲೇಖಿಸಲಾಗಿದೆ. ನಾಗೇಂದ್ರ ಸೇರಿ 5 ಆರೋಪಿಗಳ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಕೆಯಾಗಿದೆ.

**ಇ.ಡಿ ತನಿಖೆಯಿಂದ ಬಯಲಾದ ಅಸಲಿಯತ್ತು:** ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಅವ್ಯವಹಾರ ಪ್ರಕರಣ ರಾಜ್ಯ ಸರ್ಕಾರವನ್ನು ತೀವ್ರ ಮುಜುಗರಕ್ಕೆ ಈಡು ಮಾಡಿತ್ತು. ಮಾಜಿ ಸಚಿವ ನಾಗೇಂದ್ರ ತಲೆದಂಡಕ್ಕೆ ಕಾರಣವಾದ ಹಗರಣದಲ್ಲಿ ರಾಜಕಾರಣಿಗಳ ಕೈವಾಡದ ಶಂಕೆ ವ್ಯಕ್ತವಾಗಿತ್ತು. ಹೈಗ್ರೌಂಡ್ಸ್ ಹೋಟೆಲ್ ನ ಮೀಟಿಂಗ್ ನಿಂದ ನಿಗಮದ ಲೆಕ್ಕ ಪರಿಶೋಧಕ ಚಂದ್ರಶೇಖರ್ ಆತ್ಮಹತ್ಯೆ ನಡೆದು ವಿಡಿಯೋ ವೈರಲ್ ಆಗುವವರೆಗೆ ಷಡ್ಯಂತ್ರ, ಅಕೌಂಟ್ ಟ್ರಾನ್ಸ್ ಕ್ಷನ್, ಎಂಜಿ ರಸ್ತೆಯ ಯೂನಿಯನ್ ಬ್ಯಾಂಕ್ ಅಕೌಂಟ್ ಓಪನ್ ಮಾಡಿದ್ದು, ತೆಲಂಗಾಣದ ಬ್ಯಾಂಕ್ ಗೆ ಹಣ ವರ್ಗಾವಣೆ, ಆಮೂಲಕ ಇತರರಿಗೆ ಹಣ ವರ್ಗಾವಣೆಗಳು ಒಂದಕ್ಕೊಂದು ಇಡೀ ಅವ್ಯವಹಾರದ ಚಿತ್ರಣ ಬಿಚ್ಚಿಟ್ಟದ್ದವು. ಇ.ಡಿ. ತನಿಖೆ ವೇಳೆ ಒಂದೊಂದೇ ಅಸಲಿಯತ್ತು ಅನಾವರಣಗೊಂಡಿತ್ತು.

**ಹಣ ಲಪಟಾಯಿಸಲು ಸಂಚು ಹೂಡಿದ್ದೇಗೆ ನಾಗೇಂದ್ರ, :** ವಾಲ್ಮೀಕಿ ನಿಗಮಕ್ಕೆ ಪದ್ಮನಾಭರನ್ನು ವ್ಯವಸ್ಥಾಪ ನಿರ್ದೇಶಕರನ್ನಾಗಿ ನೇಮಿಸಿ ಹಣ ಲಪಟಾಯಿಸಲು ನಾಗೇಂದ್ರ ಸಂಚು ಹೂಡಿದ್ದರು. ನಾಗೇಂದ್ರ ಆಪ್ತ ಸಹಾಯಕ ವಿಜಯ್ ಕುಮಾರ್ ಮೊಬೈಲ್‌ನಲ್ಲಿ ಹಣದ ಬಂಡಲ್ ಫೋಟೋಗಳ ಜತೆಗೆ ಎಲ್ಲೆಲ್ಲಿಗೆ ನಗದು ಪೂರೈಸಬೇಕೆಂದು ಉಲ್ಲೇಖಿಸಿದ್ದ ಚೀಟಿಯ ಚಿತ್ರಗಳು ಪತ್ತೆಯಾಗಿವೆ ಎಂದು ಇಡಿ ಚಾರ್ಜ್ ಶೀಟ್ ನಲ್ಲಿ ಉಲ್ಲೇಖವಾಗಿದೆ.

ಲೋಕಸಭೆ ಚುನಾವಣೆ ಸಂದರ್ಭದಲ್ಲಿ 20.19 ಕೋಟಿ ರೂ.ಗಳನ್ನು ಪ್ರತಿ ಬೂತ್‌ಗೂ ಹಂಚಿರುವುದಕ್ಕೆ ಸಾಕ್ಷ್ಯಗಳು ಸಿಕ್ಕಿವೆ. ಅಂದಿನ ಸಚಿವ ಬಿ. ನಾಗೇಂದ್ರ ಖುದ್ದು 5.26 ಕೋಟಿ ರೂ. ಬಳಸಿರುವುದನ್ನು 15 ಸಾಕ್ಷಿಗಳಿಂದ ದೃಢಪಡಿಸಿಕೊಳ್ಳಲಾಗಿದೆ ಎಂದು ಚಾರ್ಜ್ ಶೀಟ್ ನಲ್ಲಿ ಇ.ಡಿ ಉಲ್ಲೇಖಿಸಿದೆ.

**ಇಡಿ ಇಕ್ಕಳಕ್ಕೆ ಇನ್ನಷ್ಟು ಆರೋಪಿಗಳು:** ನಾಗೇಂದ್ರ ಅಪ್ತವಲಯದಲ್ಲಿದ್ದ ನೆಕ್ಕುಂಟೆ ನಾಗರಾಜ್, ಸತ್ಯನಾರಾಯಣ ವರ್ಮಾ ನಿಕಟ ಸಂಪರ್ಕದಲ್ಲಿದ್ದ ಮಾಜಿ ಸಚಿವ ಬಿ. ನಾಗೇಂದ್ರ ಸೇರಿ ಐವರ ವಿರುದ್ಧ ಚಾರ್ಜ್ ಶೀಟ್ ಸಲ್ಲಿಕೆಯಾಗಿದ್ದು, ಮುಂದಿನ ದಿನಗಳಲ್ಲಿ ಮಹರ್ಷಿ ವಾಲ್ಮೀಕಿ ನಿಗಮದ ಬಹುಕೋಟಿ ಅವ್ಯವಹಾರದ ಆಳ-ಅಗಲ ಭೇದಿಸುತ್ತಿರುವ ಇಡಿ ಇಕ್ಕಳದಲ್ಲಿ ಮತ್ತಷ್ಟು ಆರೋಪಿಗಳ ಸಿಕ್ಕಿಹಾಕಿಕೊಳ್ಳುವ ಸಾಧ್ಯತೆಗಳಿವೆ.

## ನೌಕರಿ ಕೊಡಿಸಿದ ಹೆಚ್‌ಡಿಕೆ

ಗುಡ್ಡ ಕುಸಿತದಲ್ಲಿ 11 ಮಂದಿ ಕಾಣೆಯಾಗಿದ್ದು, ಎಂಟು ಜನರ ಶವ ಪತ್ತೆಯಾಗಿದ್ದರು.

**ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ಮಾಡಿದ್ದ ಕುಮಾರಸ್ವಾಮಿ:** ಶಿರೂರು ಗುಡ್ಡ ಕುಸಿತದ ಬಳಿಕ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದ ಹೆಚ್ ಡಿ ಕುಮಾರಸ್ವಾಮಿ ಅವರು ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ಮಾಡಿದ್ದರು. 2018 ರಲ್ಲಿ ನಾನು ಸಿಎಂ ಆಗಿದ್ದಾಗ ಕೊಡಗಿನಲ್ಲಿ ಭೂ ಕುಸಿತ ಆಗಿತ್ತು. ಆಗ ಮನೆ ಕಳೆದುಕೊಂಡವರಿಗೆ ಹತ್ತು ಲಕ್ಷ ಹಣ ಕೊಟ್ಟಿದ್ದೆ. ಆದರೆ, ಇಂತಹ ಘಟನೆಯಲ್ಲಿ ರಾಜ್ಯ ಸರ್ಕಾರ ರಾಜಕಾರಣ ಮಾಡುವುದು ತರವಲ್ಲ ಎಂದು ವಾಗ್ದಾಳಿ ಮಾಡಿದ್ದರು.

## ಸಚಿವರ ಸಮಿತಿ ನೇಮಕ

**ಸಚಿವರ ಸಮಿತಿಯ ಸದಸ್ಯರು**

- **ಎಚ್.ಕೆ. ಪಾಟೀಲ** ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು.
- **ಕೃಷ್ಣ ಬೈರೇಗೌಡ ಕಂದಾಯ ಸಚಿವರು.**
- **ಪ್ರಿಯಾಂಕ್ ಖರ್ಗೆ** ಗ್ರಾಮೀಣಾಭೀವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.
- **ಸಂತೋಷ್ ಎಸ್ ಲಾಡ್** ಕಾರ್ಮಿಕ ಸಚಿವರು

ಸದರಿ ಸಮಿತಿಯು ಮುಂದಿನ ಎರಡು ತಿಂಗಳಲ್ಲಿ ತನಗೆ ವಹಿಸಿರುವ ಜವಾಬ್ದಾರಿಯನ್ನು ಪೂರ್ಣಗೊಳಿಸುವಂತೆ ಕೋರಿದೆ ಎಂದು ಆದೇಶದಲ್ಲಿ ಸಿಎಂ ಉಲ್ಲೇಖಿಸಿದ್ದಾರೆ.

ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ ಮತ್ತು ಮುಡಾ ಹಗರಣ ವಿಚಾರವಾಗಿ ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಸರ್ಕಾರದ ವಿರುದ್ಧ ಮುಗಿಬಿದ್ದ ಬೆನ್ನಲ್ಲೇ ಆಡಳಿತಾರೂಢ ಕಾಂಗ್ರೆಸ್ ಹಳೆಯ ಹಗರಣಗಳನ್ನು ಮುನ್ನೆಲೆಗೆ ತರಲು ಯತ್ನಿಸುತ್ತಿದೆ. ಈಗಾಗಲೇ ಮಾಜಿ ಸಚಿವರು, ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ಕಾಂಗ್ರೆಸ್ ನಾಯಕರು ರಾಜ್ಯಪಾಲರನ್ನು ಆಗ್ರಹಿಸಿದ್ದಾರೆ.

ಈ ಎಲ್ಲ ಬೆಳವಣಿಗೆಗಳ ಬೆನ್ನಲ್ಲೇ ಹಿಂದಿನ ಸರ್ಕಾರಗಳ ಹಗರಣಗಳ ತನಿಖೆಗೆ ಸಮಿತಿ ರಚಿಸುವುದಾಗಿ ಕಾಂಗ್ರೆಸ್ ಸರ್ಕಾರ ಹೇಳಿತ್ತು.

## ಆರ್ಥಿಕತೆ, ವಲಸೆ ಬಗ್ಗೆ ಚರ್ಚೆ

ಪೆನ್ಸಿಲ್ವೇನಿಯಾದಲ್ಲಿ ಎಬಿಸಿ ವಾಹಿನಿ ಆಯೋಜಿಸಿದ್ದ ಬಹಿರಂಗ ಚರ್ಚೆಯಲ್ಲಿ ಬಹಿರಂಗ ಚರ್ಚೆಯಲ್ಲಿ ಆರ್ಥಿಕತೆ, ವಲಸೆ ನೀತಿ, ಕ್ಯಾಪಿಟಲ್ ಹಿಲ್ ಗಲಭೆ ಇತ್ಯಾದಿ ವಿಚಾರಗಳ ಬಗ್ಗೆ ಇಬ್ಬರು ನಾಯಕರು ಮಾತನಾಡಿದರು.

ಕಮಲಾ ಹ್ಯಾರಿಸ್ ಮಾರ್ಕ್ಸ್‌ವಾದಿಯಾಗಿದ್ದಾರೆ. ಅವರ ತಂದೆ ಮಾರ್ಕ್ಸ್‌ವಾದವನ್ನು ಕಲಿಸಿಕೊಟ್ಟಿದ್ದಾರೆ. ಅವರ ಹುಚ್ಚು ನೀತಿಯಿಂದ ದೇಶ ನಾಶವಾಗಿದೆ ಎಂದು ಟ್ರಂಪ್ ಟೀಕಿಸಿದರು.

ಡೊನಾಲ್ಡ್ ಟ್ರಂಪ್ ಲಕ್ಷಾಂತರ ಜನರನ್ನು ವಜಾಗೊಳಿಸಿದ್ದಾರೆ. ಕೆಟ್ಟ ಉದ್ಯೋಗ ನೀತಿಯಿಂದ ದೇಶ ಸಮಸ್ಯೆಗೆ ಸಿಲುಕಿತ್ತು. ಟ್ರಂಪ್ ಅವಧಿಯಲ್ಲಿ ಆಗಿದ್ದ ಅವ್ಯವಸ್ಥೆಯನ್ನು ನಮ್ಮ ಅವಧಿಯಲ್ಲಿ ನಾವು ಸ್ವಚ್ಛ ಮಾಡಿದ್ದೇವೆ ಎಂದು ಹ್ಯಾರಿಸ್ ತಿರುಗೇಟು ನೀಡಿದರು.

**ಟ್ರಂಪ್ ವಾದ ಏನು?:** ಕಮಲಾ ಹ್ಯಾರಿಸ್ ಅಧಿಕಾರಕ್ಕೆ ಬಂದರೆ ಅಮೆರಿಕ ವೆನೆಜುವೆಲಾ ಆಗಲಿದೆ. ನನ್ನ ಯೋಜನೆ ಉತ್ತಮ ಯೋಜನೆಯಾಗಿದೆ. ಅವರ ಬಳಿ ಯಾವುದೇ ಯಾವುದೇ ಯೋಜನೆ ಇಲ್ಲ ಮತ್ತು ಬೈಡೆನ್ ಅವರ ಯೋಜನೆಯನ್ನು ನಕಲು ಮಾಡಿದ್ದಾರೆ.

ಸಾಕುಪ್ರಾಣಿಗಳನ್ನು ಸೇವಿಸುವ ಹೈಟಿ ವಲಸಿಗರು ಅಮೆರಿಕ ಜನರು ಸಾಕಿದ್ದ ನಾಯಿ, ಬೆಕ್ಕುಗಳನ್ನು ತಿನ್ನುತ್ತಿದ್ದಾರೆ. ಬೈಡನ್ ಅವಧಿಯಲ್ಲಿ ಲಕ್ಷಾಂತರ ಕ್ರಿಮಿನಲ್‌ಗಳಿಗೆ ದೇಶಕ್ಕೆ ಬರಲು ಅವಕಾಶ ಸಿಕ್ಕಿದೆ. ಭಯೋತ್ಪಾದಕರು, ಡ್ರಗ್ ಡೀಲರ್‌ಗಳಿಗೆ ಬರಲು ಅವಕಾಶ ನೀಡಿ ಅವರ ಮತಗಳನ್ನು ಪಡೆಯುತ್ತಿದ್ದಾರೆ. ಅಕ್ರಮ ವಲಸಿಗರಿಂದ ದೇಶ ನಾಶವಾಗಲಿದೆ.

ನಾವು ಭಯಾನಕ ಆರ್ಥಿಕತೆಯನ್ನು ಹೊಂದಿದ್ದೇವೆ. ಹಣದುಬ್ಬರ ವಿಪರೀತ ಏರಿಕೆಯಾಗಿದೆ. ಬಹುಶಃ ಅಮೆರಿಕದ ಇತಿಹಾಸದಲ್ಲಿ ಇಷ್ಟೊಂದು ಕೆಟ್ಟ ಆರ್ಥಿಕತೆ ನೋಡೇ ಇಲ್ಲ. ನಾನು ಕ್ಯಾಪಿಟಲ್ ಹಿಲ್ ಮೇಲೆ ದಾಳಿಗೆ ಯಾವುದೇ ಪ್ರಚೋದನೆ ನೀಡಿಲ್ಲ. ಬೆಂಬಲಿಗರನ್ನು ಉದ್ದೇಶಿಸಿ ಭಾಷಣ ಮಾತ್ರ ಮಾಡಿದ್ದೇನೆ.

**ಕಮಲಾ ಹ್ಯಾರಿಸ್ ಹೇಳಿದ್ದೇನು?:** ಟ್ರಂಪ್ ಪ್ರಚಾರ ಸಭೆಗೆ ಆಗಮಿಸುತ್ತಿರುವ ಜನರು ಕಾರ್ಯಕ್ರಮದ ಮಧ್ಯೆ ಬೇಸರದಿಂದ ತೊರೆಯುತ್ತಿದ್ದಾರೆ. ಇದನ್ನು ನೋಡಿದಾಗಲೇ ಜನರಿಗೆ ಅವರ ಮೇಲೆ ಇರುವ ನಂಬಿಕೆ ಏನು ಎನ್ನುವುದು ತಿಳಿಯುತ್ತೆ. ಟ್ರಂಪ್ ಯಾವುದೇ ಯೋಜನೆಯನ್ನು ಹೊಂದಿಲ್ಲ. ಸಮರ್ಥಿಸಿಕೊಳ್ಳಲು ಯೋಜನೆ ಬಗ್ಗೆ ಮಾತನಾಡುತ್ತಾರೆ.

ದೇಶದ ರಾಜಧಾನಿಯಲ್ಲಿ ಗಲಾಟೆ ನಡೆಸಲು ಟ್ರಂಪ್ ಭಾಷಣ ಮಾಡಿ ಹಿಂಸಾತ್ಮಕ ಗುಂಪನ್ನು ಪ್ರಚೋದಿಸಿದರು. ಟ್ರಂಪ್‌ಗೆ ರಿಪಬ್ಲಿಕನ್ ಪಕ್ಷದಲ್ಲೇ ಬೆಂಬಲ ಸಿಗುತ್ತಿಲ್ಲ. ಟ್ರಂಪ್ ಅವಧಿಯಲ್ಲಿ ಕೆಲಸ ಮಾಡಿದ 200 ಕ್ಕೂ ಹೆಚ್ಚು ರಿಪಬ್ಲಿಕನ್‌ಗಳು ನನ್ನನ್ನು ಬೆಂಬಲಿಸಿದ್ದಾರೆ. ವಿಶ್ವದ ನಾಯಕರು ಟ್ರಂಪ್ ನೋಡಿ ನಗುತ್ತಿದ್ದಾರೆ. ಟ್ರಂಪ್ 81 ಮಿಲಿಯನ್ ಜನರನ್ನು ತೆಗೆದು ಹಾಕಿ ದೇಶದ ಆರ್ಥಿಕತೆಯನ್ನು ಹಾಳು ಮಾಡಿದ್ದಾರೆ.

## ಕಾರ್ಮಿಕರ ಸಾವು

ದೇವರಪಲ್ಲಿ ಪೊಲೀಸರು ಸ್ಥಳೀಯರ ನೆರವಿನಿಂದ ಮೃತದೇಹಗಳನ್ನು ಹೊರತೆಗೆದಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಕೊವ್ವೂರು ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ. ಮೃತರೆಲ್ಲರೂ ನೀಡದವೋಲು ಮಂಡಲದ ತಾಡಿಮಲ್ಲ ಗ್ರಾಮದವರು. ತಮ್ಮಿ ರೆಡ್ಡಿ ಸತ್ಯನಾರಾಯಣ (45), ದೇಶಭಟ್ಟುಲ ವೆಂಕಟರಾವ್ (40), ಬೊಕ್ಕ ಪ್ರಸಾದ್ (32), ಪೆನುಗುರ್ತಿ ಚಿನ್ನ ಮುಸಲಯ್ಯ (35), ಕತ್ತಿವ ಕೃಷ್ಣ (40), ಕತ್ತಿವ ಸತ್ತಿಪಂಡು (40), ತಾಡಿ ಕೃಷ್ಣ (45) ಮೃತರು ಎಂದು ಪೊಲೀಸರು ತಿಳಿಸಿದ್ದಾರೆ.

ಇನ್ನು ಮತ್ತೊಂದೆಡೆ ಕರ್ನೂಲ್ ಜಿಲ್ಲೆಯ ಆಲೂರು ವಿಧಾನಸಭಾ ಕ್ಷೇತ್ರದ ಹುಲೇಬೀಡು ಗ್ರಾಮದಲ್ಲಿ ಭಾನುವಾರ ತಡರಾತ್ರಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಒಂದೇ ಕುಟುಂಬದ ಮೂವರು ಮೃತಪಟ್ಟು, ನಾಲ್ವರು ಗಾಯಗೊಂಡಿದ್ದರು. ಮೃತರನ್ನು ಸಬೀರಾ (60), ಮೇಸ್ತ್ರಿ ಗೌಸ್ (45) ಮತ್ತು ನಸ್ರೀನ್ (32) ಎಂದು ಗುರುತಿಸಲಾಗಿದೆ. ಮೃತರು ಮತ್ತು ಗಾಯಗೊಂಡವರೆಲ್ಲರೂ ಆದೋನಿಯ ಫರೀಶಾ ಮೊಹಲ್ಲಾ ನಿವಾಸಿಗಳು. ಮಾಹಿತಿಯ ಪ್ರಕಾರ, ಭಾನುವಾರ ಬೆಳಿಗ್ಗೆ ಒಂಬತ್ತು ಸದಸ್ಯರ ಕುಟುಂಬವು ತಮ್ಮ ಸಂಬಂಧಿಕರ ಸಮಾರಂಭದಲ್ಲಿ ಪಾಲ್ಗೊಳ್ಳಲು ಕರ್ನಾಟಕ ರಾಜ್ಯದ ಬಳ್ಳಾರಿಗೆ ಕಾರಿನಲ್ಲಿ ತೆರಳಿದ್ದರು.

ಅದೇ ದಿನ ಸಂಜೆ ಹಿಂತಿರುಗುತ್ತಿದ್ದಾಗ ಹುಲೇಬೀಡು ಗ್ರಾಮದ ಬಳಿ ಕಾರು ಪಲ್ಟಿಯಾಗಿದೆ. ಈ ಅಪಘಾತದಲ್ಲಿ ಮೂವರು ಸ್ಥಳದಲ್ಲೇ ಮೃತಪಟ್ಟರೆ, ಸೀಮಾ, ಅಹಮದ್ ರಾಜಾ, ಚಾಲಕ ಕಾದರ್ ಮತ್ತು ಶಬಾನಾ ಬೇಗಂ ಗಂಭೀರವಾಗಿ ಗಾಯಗೊಂಡಿದ್ದಾರೆ. ಇಬ್ಬರು ಮಕ್ಕಳಿಗೆ ಸಣ್ಣಪುಟ್ಟ ಗಾಯಗಳಾಗಿವೆ.

## ಆರೋಪಿಗಳ ಬಂಧನ

**ವೈದ್ಯರ ಮೇಲೆ ಹಲ್ಲೆ: ಇಬ್ಬರ ಬಂಧನ:** ಆಸ್ಪತ್ರೆ ಬಂದ್ ಮಾಡಿ ಪ್ರತಿಭಟನೆ ನಡೆಸುತ್ತಿದ್ದಂತೆ ಎಚ್ಚೆತ್ತುಕೊಂಡ ಚಿಕ್ಕಮಗಳೂರು ಪೊಲೀಸ್ ಇಲಾಖೆ ತಸೀಮಾ ಇರ್ಫಾನ್ ವಿರುದ್ಧ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ಎಫ್ ಐ ಆರ್ ದಾಖಲಿಸಿದ್ದಾರೆ. ತಸೀಮಾ ಹಾಗೂ ಆಕೆಯ ಸಹೋದರನನ್ನು ಬಂಧಿಸಿದ್ದಾರೆ.

ಕಳೆದ ತಿಂಗಳೂ ಸಹ ಕೊಲ್ಕತ್ತಾದಲ್ಲಿ ನಡೆದಿದ್ದ ವೈದ್ಯರ ಮೇಲಿನ ಹಲ್ಲೆ ಹಾಗೂ ಅತ್ಯಾಚಾರವನ್ನ ಖಂಡಿಸಿ ದೇಶಾದ್ಯಂತ ಪ್ರತಿಭಟನೆ ನಡೆಸಲಾಗಿತ್ತು. ಇಂದೂ ಕೂಡಾ ಆಸ್ಪತ್ರೆಯಲ್ಲಿ ವೈದ್ಯರ ಮೇಲೆ ಹಲ್ಲೆಯಾಗಿದ್ದರಿಂದಾಗಿ ಚಿಕ್ಕಮಗಳೂರು ಮಲ್ಲೇಗೌಡ ಜಿಲ್ಲಾಸ್ಪತ್ರೆಯಲ್ಲಿನ ವೈದ್ಯರು, ಸಿಬ್ಬಂದಿಗಳು ಪ್ರತಿಭಟನೆ ನಡೆಸಿದರು.

**ವೈದ್ಯರ ಪ್ರತಿಭಟನೆಯಿಂದ ರೋಗಿಗಳಿಗೆ ಪರದಾಟ:** ಜಿಲ್ಲಾಸ್ಪತ್ರೆಯ ಸಿಬ್ಬಂದಿಯ ದಿಢೀರ್ ಪ್ರತಿಭಟನೆಯಿಂದಾಗಿ ಚಿಕಿತ್ಸೆಗೆಂದು ಬಂದ ರೋಗಿಗಳು ಪರದಾಟ ಪಡುವಂತಾಯಿತು. ಒಂದೆಡೆ ರೋಗಿಗಳ ಗೋಳು ನೋಡಲಾಗದೆ ಅವರ ಕಡೆಯವರು ಬಂದು ಆಸ್ಪತ್ರೆ ಸಿಬ್ಬಂದಿಗಳ ಬಳಿ ಆಕ್ರೋಶ ವ್ಯಕ್ತಪಡಿಸಿದ್ದರು.

ಸದಾ ರೋಗಿಗಳಿಂದಲೇ ತುಂಬಿ ತುಳುಕುತ್ತಿದ್ದ ಚಿಕ್ಕಮಗಳೂರಿನ ಅರಳಗುಪ್ಪೆ ಮಲ್ಲೇಗೌಡ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳ ಪ್ರತಿಭಟನೆಯಿಂದಾಗಿ ಆಸ್ಪತ್ರೆಗೆ ಬಂದ ರೋಗಿಗಳು ಪರದಾಟ ನಡೆಸಿದರೆ, ಇತ್ತ ವೈದ್ಯ ವೆಂಕಟೇಶ್ ಮೇಲೆ ಹಲ್ಲೆ ನಡೆಸಿದವರನ್ನ ಬಂಧಿಸೋವರೆಗೂ ನಾವುಗಳ್ಯಾರೂ ಕರ್ತವ್ಯಕ್ಕೆ ಹಾಜರಾಗಲ್ಲ ಎಂದು ಜಿಲ್ಲಾಸ್ಪತ್ರೆಯ ಸಿಬ್ಬಂದಿ ಪಟ್ಟು ಹಿಡಿದಿದ್ದಾರೆ.

## ಸಾಮೂಹಿಕ ಅತ್ಯಾಚಾರ

ಇದೀಗ ಪೊಲೀಸರು ಅಪರಾಧಕ್ಕೆ ಬಳಸಿದ್ದ ಎರಡು ಎಸ್‌ಯುವಿ ಕಾರುಗಳನ್ನು ವಶಪಡಿಸಿಕೊಂಡಿದ್ದಾರೆ. ಎಲ್ಲಾ ಎಂಟು ಆರೋಪಿಗಳ ವಯಸ್ಸು 30 ವರ್ಷಕ್ಕಿಂತ ಕಡಿಮೆ. ಆರೋಪಿಗಳನ್ನು ಖುಷಿನಗರ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಯುವತಿಯರ ವೈದ್ಯಕೀಯ ಪರೀಕ್ಷೆ ಮುಗಿದಿದ್ದು ವರದಿಗಾಗಿ ಕಾಯಲಾಗುತ್ತಿದೆ.

ಸೆಪ್ಟೆಂಬರ್ 8ರ ರಾತ್ರಿ ಘಟನೆ ಕುರಿತು ಪೊಲೀಸರಿಗೆ ದೂರು ಬಂದಿತ್ತು. ಆರೋಪಿಗಳನ್ನು ನಾಗೇಂದ್ರ ಯಾದವ್, ಅಸನ್ ಸಿಂಗ್, ಕ್ರಿಶ್ ತಿವಾರಿ, ಅರ್ಥಕ್ ಸಿಂಗ್, ಅಜಿತ್ ಸಿಂಗ್ ಮತ್ತು ವಿವೇಕ್ ಸೇಠ್ ಎಂದು ಗುರುತಿಸಲಾಗಿದೆ. ಇತರ ಇಬ್ಬರು ಆರೋಪಿಗಳು ನಿಸಾರ್ ಅನ್ಸಾರಿ ಮತ್ತು ಆದಿತ್ಯ ಸಾಹ್ನಿ, ಸೆಪ್ಟೆಂಬರ್ 10 ರಂದು ಪೊಲೀಸರು ನಡೆಸಿದ ಎನ್ ಕೌಂಟರ್ ನಲ್ಲಿ ಸಿಕ್ಕಿಬಿದ್ದಿದ್ದರು.

ಇಬ್ಬರ ಕಾಲಿಗೆ ಗುಂಡು ತಗುಲಿದ್ದು, ಪ್ರಥಮ ಚಿಕಿತ್ಸೆ ಬಳಿಕ ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿದೆ. ವಿಚಾರಣೆ ವೇಳೆ ಆರೋಪಿಗಳು ತಮ್ಮ ಎಲ್ಲಾ ಮಾಹಿತಿಯನ್ನು ಬಹಿರಂಗಪಡಿಸಿದ್ದಾರೆ. ತಡರಾತ್ರಿಯಾಗಿದ್ದರಿಂದ ಯುವತಿಯರು ನೃತ್ಯ ಮಾಡಲು ನಿರಾಕರಿಸಿದ್ದರು. ಬಂದೂಕು ತೋರಿಸಿ ಅಪಹರಿಸಿ ಅಪಹರಿಸಿದ್ದರು.

## ಮುಲಾಮು

ನಮಗೆ ಯಾರೂ ಆಹ್ವಾನ ನೀಡಿಲ್ಲ ಎನ್ನುತ್ತಿದ್ದಾರೆ. ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಟೀಮ್ ಈಗಾಗಲೇ ರಾಷ್ಟ್ರೀಯ ಮಟ್ಟದ ಹಿರಿಯ ಆರ್‌ಎಸ್‌ಎಸ್ ನಾಯಕರನ್ನು ಭೇಟಿಯಾಗಿದೆ. ಈ ವೇಳೆ ಆರ್‌ಎಸ್‌ಎಸ್ ನಾಯಕರು ಒಂದು ತಿಂಗಳು ಸುಮ್ಮನಿರಿ, ಎಲ್ಲ ಸಮಸ್ಯೆ ಬಗೆಹರಿಸುವುದಾಗಿ ಹೇಳಿದ್ದಾರೆ. ಇದಾದ ಬಳಿಕ ಬಸನಗೌಡ ಪಾಟೀಲ್ ಯತ್ನಾಳ ಟೀಮ್ ಬಿಎಲ್ ಸಂತೋಷರನ್ನು ಸಹ ಭೇಟಿಯಾಗಿತ್ತು. ಈ ಸಂದರ್ಭದಲ್ಲಿಯೂ ಬಿಎಲ್ ಸಂತೋಷ್ ಕೆಲ ದಿನಗಳ ಕಾಲ ಶಾಂತವಾಗಿ ಇರುವಂತೆ ಸೂಚನೆ ನೀಡಿದ್ದಾರೆ.

**ರಾಜ್ಯ ಬಿಜೆಪಿಯಲ್ಲಿ ಒಡಕು:** ವಿಧಾನಸಭೆ ಚುನಾವಣೆ ಸೋಲಿನ ಬಳಿಕ ರಾಜ್ಯ ಬಿಜೆಪಿಯಲ್ಲಿ ನಾಯಕರ ನಡುವೆ ಬಿರುಕು ಮೂಡಿತು. ನಂತರ, ಬಿವೈ ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷರನ್ನಾಗಿ ಮಾಡಿದ ಬಳಿಕ ಕೆಲ ಹಿರಿಯ ನಾಯಕರು ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸಿದರು. ಇದಕ್ಕೆ ಮುಲಾಮು ಹಚ್ಚಲಾಯ್ತು. ಆದರೂ, ಪೂರ್ಣ ಪ್ರಮಾಣದಲ್ಲಿ ಗಾಯ ವಾಸಿಯಾಗಲಿಲ್ಲ.

ನಂತರ, ಲೋಕಸಭೆ ಚುನಾವಣೆಗೆ ಟಿಕೆಟ್ ಕೈ ತಪ್ಪುತ್ತಿದ್ದಂತೆ ನಿರೀಕ್ಷೆಯಲ್ಲಿದ್ದ ಮಾಜಿ ಸಂಸದ ಪ್ರತಾಪ್ ಸಿಂಹ ಸೇರಿದಂತೆ ಕೆಲ ನಾಯಕರು ಹತಾಶೆಯಿಂದ ಬಹಿರಂಗವಾಗಿ ಅಸಮಾಧಾನ ಹೊರ ಹಾಕಿದರು. ಆಗಲೂ ಕೂಡ ತೇಪೆ ಹಚ್ಚಲಾಯಿತಾದರೂ ಬಿರುಕು ಮತ್ತೆ ಮೂಡಿತು.

ಇತ್ತೀಚಿಗೆ ಬಿಜೆಪಿ ನಡೆಸಿದ ಮೈಸೂರು ಚಲೋ ಪಾದಯಾತ್ರೆಯಲ್ಲಿ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ ಕಾಣಿಸಿಕೊಳ್ಳಲಿಲ್ಲ, ಬದಲಿಗೆ ನಾವು ಬಳ್ಳಾರಿವರೆಗೆ ಪ್ರತ್ಯೇಕ ಪಾದಯಾತ್ರೆ ಮಾಡುತ್ತೇವೆ. ಹೈಕಮಾಂಡ್ ಒಪ್ಪಿಗೆಗಾಗಿ ಕಾಯುತ್ತಿದ್ದೇವೆ ಎಂದು ಘೋಷಿಸಿದರು. ಬಳಿಕ, ಬಸನಗೌಡ ಪಾಟೀಲ್ ಯತ್ನಾಳ್, ಮಾಜಿ ಸಂಸದ ಪ್ರತಾಪ್ ಸಿಂಹ, ಕುಮಾರ್ ಬಂಗಾರಪ್ಪ ಸೇರಿದಂತೆ ಇನ್ನಿತರ ಕೆಲ ನಾಯಕರು ನಡೆಸಿದ ಸಭೆ ಚರ್ಚೆಗೆ ಕಾರಣವಾಯ್ತು.

ತೀರ ಇತ್ತೀಚಿಗೆ ಮಾಜಿ ಸಂಸದ ಪ್ರತಾಪ್ ಸಿಂಹ ಸಭಾ ಕಾರ್ಯಕ್ರಮವೊಂದರಲ್ಲಿ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ಮಾಡಿದ್ದರು. ಹರ್ಷ ಮತ್ತು ನೆಟ್ಟಾರು ಕೊಲೆ ಆರೋಪಿಗಳನ್ನು ಎನ್‌ಕೌಂಟರ್? ಮಾಡಲು ಪೊಲೀಸರಿಗೆ ಸರ್ಕಾರ ಅನುಮತಿ ನೀಡಲಿಲ್ಲ ಎಂದು ಬಹಿರಂಗವಾಗಿಯೇ ಹೇಳಿದ್ದರು. ಈ ಎಲ್ಲ ಘಟನೆಗಳು ರಾಜ್ಯ ಬಿಜೆಪಿಯಲ್ಲಿನ ಬಂಡಾಯಕ್ಕೆ ಕೈಗನ್ನಡಿಯಾಗಿವೆ.

ಇದರ ನಡುವೆ, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ವಿಪಕ್ಷ ನಾಯಕ ಆರ್. ಅಶೋಕ್ ದೆಹಲಿಗೆ ತೆರಳಿದ್ದು, ವರಿಷ್ಠರ ಜೊತೆ ಸಭೆ ನಡೆಸಲಿದ್ದಾರೆ. ಸಭೆಯಲ್ಲಿ ಏನು ನಿರ್ಧಾರ ಕೈಗೊಳ್ಳಲಾಗುತ್ತದೆ ಎಂಬುವುದನ್ನು ಕಾದು ನೋಡಬೇಕು.

## ವ್ಯಕ್ತಿತ್ವ ವಿಕಾಸನ ಕಾರ್ಯಕ್ರಮಕ್ಕೆ ಚಾಲನೆ

**ರಾಮನಗರ:** ಇಲ್ಲಿನ ನಗರಸಭಾ ಕಾರ್ಯಾಲಯದಲ್ಲಿ ಪೌರಕಾರ್ಮಿಕರ ಆರೋಗ್ಯದ ಹಿತದೃಷ್ಟಿಗಾಗಿ ತಜ್ಞರಿಂದ ಪೌಷ್ಠಿಕ ಹಾಗೂ ಸಮತೋಲಿತ ಆಹಾರ ಸೇವನೆ ಹಾಗೂ ವ್ಯಕ್ತಿತ್ವ ವಿಕಸನದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಲಾಗಿತ್ತು. ತುಮಕೂರು ವಿಶ್ವವಿದ್ಯಾಲಯದ ಸಹ ಪ್ರಾಧ್ಯಾಪಕ ಡಾ. ದೇವರಾಜು ಅವರು ಪೌರಕಾರ್ಮಿಕರ ಪೌಷ್ಠಿಕ ಆಹಾರ ಹಾಗೂ ಆರೋಗ್ಯದ ಬಗ್ಗೆ ಉಪನ್ಯಾಸ ನೀಡಿದರು. ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜಿನ ಆಹಾರ ತಜ್ಞರು ಮತ್ತು ಗೃಹ ವಿಜ್ಞಾನದ ಸಹಾಯಕ ಪ್ರಾಧ್ಯಾಪಕ ರಮೇಶ್ ಕೆ.ಎಲ್ ಅವರು ಮಿತ ಆಹಾರ, ದುಶ್ಚಟಗಳ ಪರಿಣಾಮ ಇತ್ಯಾದಿ ವಿಷಯಗಳ ಕುರಿತು ಉಪನ್ಯಾಸ ನೀಡಿದರು. ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜಿನ ಸಹ ಪ್ರಾಧ್ಯಾಪಕರು ಮತ್ತು ದೈಹಿಕ ಶಿಕ್ಷಣ ನಿರ್ದೇಶಕ ಡಾ. ಭಾಸ್ಕರ್ ಕೆ.ಎಸ್ ಆರೋಗ್ಯ, ವ್ಯಕ್ತಿತ್ವ ವಿಕಸನ, ಕ್ರೀಡೆ, ಮನರಂಜನೆ ಇತ್ಯಾದಿಗಳಿಗೆ ಹೆಚ್ಚು ಒತ್ತು ನೀಡಿದಲ್ಲಿ ಉತ್ತಮ ಭವಿಷ್ಯವನ್ನು ನಿರ್ಮಾಣ ಮಾಡಿಕೊಳ್ಳುವ ಬಗ್ಗೆ ಮಾಹಿತಿ ನೀಡಿದರು. ರಾಮನಗರ ನಗರಸಭೆಯ ಪೌರಾಯುಕ್ತ ಡಾ. ಜಯಣ್ಣ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಈ ಕಾರ್ಯಕ್ರಮದಲ್ಲಿ ತಿಳಿಸಲಾದ ಮಾಹಿತಿಗಳಂತೆ ಉತ್ತಮ ಆರೋಗ್ಯದ ಜೊತೆಗೆ ಸುಂದರ ನಗರವನ್ನು ನಿರ್ಮಾಣ ಮಾಡಲು ಕಾರ್ಯಪ್ರವೃತ್ತರಾಗಬೇಕೆಂದು ಕರೆ ನೀಡಿದರು. ಇದೇ ಸಂದರ್ಭದಲ್ಲಿ ಶೇ. 24.10ರ ಯೋಜನೆಯಡಿ ಪೌರಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಧನದ ಚೆಕ್ ಅನ್ನು ವಿತರಿಸಿದರು.

## ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನ

**ರಾಮನಗರ:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಎಸ್.ಎಸ್.ಎಲ್.ಸಿ, ಪದವಿ ಮತ್ತು ಸ್ನಾತಕೋತ್ತರ ಪದವಿ ಹಾಗೂ ಇತರೆ ಕೋರ್ಸ್‌ಗಳ ಅಂತಿಮ ಪರೀಕ್ಷೆಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆ ಹೊಂದಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ. ಪ್ರೋತ್ಸಾಹ ಧನಕ್ಕೆ ಸಂಬಂಧಿಸಿದಂತೆ ಅರ್ಹ ವಿದ್ಯಾರ್ಥಿಗಳು ವೆಬ್‌ಸೈಟ್ https://swdservices.karnataka.in/prizemoneyclientapp ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು (ಗ್ರೇಡ್-1) ರವರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಕನಕಪುರ ತಾಲ್ಲೂಕು, ಕನಕಪುರ ಈ ಕಚೇರಿಯನ್ನು ಸಂಪರ್ಕಿಸುವಂತೆ ಕನಕಪುರ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಕೃಷಿ ಪಂಡಿತ ಪ್ರಶಸ್ತಿಗೆ ಅರ್ಜಿ

**ರಾಮನಗರ:** ಕೃಷಿ ಕ್ಷೇತ್ರದಲ್ಲಿ ವಿನೂತನ ಅನ್ವೇಷಣೆ ಮತ್ತು ಸೃಜನಾತ್ಮಕ ಕಾರ್ಯಗಳಿಂದ ಗಮನಾರ್ಹ ಸಾಧನೆ ಮಾಡಿರುವ ರೈತ ಸಮುದಾಯದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿರುವ ಹಾಗೂ ಕೃಷಿ ವಲಯಕ್ಕೆ ಅನ್ವಯಿಸುವಂತೆ ಗಮನಾರ್ಹ, ಗಣನೀಯವಾದ, ವಿಭಿನ್ನವಾದ ಮೂಲರೂಪದ ಸಾಧನೆ ಮಾಡಿರುವ ರೈತರಿಗೆ ಕೃಷಿ ಪಂಡಿತ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆ. 30 ಕೊನೆಯ ದಿನ. ಅರ್ಜಿಯನ್ನು ತಾಲ್ಲೂಕು ಮಟ್ಟದ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಪ್ರಶಸ್ತಿಗೆ ಪ್ರತ್ಯೇಕವಾಗಿ ಮಹಿಳೆಯರಿಂದ ಸಹ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ. ಹೆಚ್ಚಿನ ಮಾಹಿತಿಗೆ ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರ, ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳ ಕಚೇರಿಯನ್ನು ಕೃಷಿ ಇಲಾಖೆಯ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪ್ರಸಕ್ತ ಸಾಲಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನವನ್ನು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, 2024-25ನೇ ಸಾಲಿಗೆ ಮೆಟ್ರಿಕ್ ಪೂರ್ವ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು https://ssp.karnataka.gov.in/ssp2425 ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು (ಗ್ರೇಡ್-1) ರವರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಕನಕಪುರ ತಾಲ್ಲೂಕು, ಕನಕಪುರ ಈ ಕಚೇರಿಯನ್ನು ಸಂಪರ್ಕಿಸುವಂತೆ ಕನಕಪುರ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ಮಾಗಡಿ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿಯಿರುವ ಗೌರವಧನ ಆಧಾರಿತ 12 ಅಂಗನವಾಡಿ ಕೇಂದ್ರಗಳ ಕಾರ್ಯಕರ್ತೆ ಹಾಗೂ 5 ಮಿನಿ ಕಾರ್ಯಕರ್ತೆ ಹಾಗೂ 35 ಸಹಾಯಕಿಯರ ತಾತ್ಕಾಲಿಕ ಹುದ್ದೆಗಳಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆನ್ಲೈನ್ ವಿಳಾಸ https://karnemakaone.kar.nic.in/abcd/ ಮೂಲಕ ಸೆ. 30 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಮಾಗಡಿಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಯುವಜನೋತ್ಸವ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಚಿಕ್ಕಬಳ್ಳಾಪುರ ಜಿಲ್ಲೆಯ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಸೆಪ್ಟೆಂಬರ್ 21 ರಂದು ಚಿಕ್ಕಬಳ್ಳಾಪುರ ನಗರದ ಸರ್.ಎಂ.ವಿ.ಜಿಲ್ಲಾ ಕ್ರೀಡಾಂಗಣದಲ್ಲಿ ಜಾನಪದ ನೃತ್ಯ (ಗ್ರೂಪ್), ಜಾನಪದ ನೃತ್ಯ (ಏಕವ್ಯಕ್ತಿ, ವೈಯಕ್ತಿಕ), ಜಾನಪದ ಸಂಗೀತ (ಗ್ರೂಪ್), ಜಾನಪದ ಸಂಗೀತ (ಏಕವ್ಯಕ್ತಿ, ವೈಯಕ್ತಿಕ), ಕಥೆ ಬರವಣಿಗೆ, ಪೋಸ್ಟರ್ ತಯಾರಿಕೆ, ಛಾಯಾಗ್ರಹಣ ಕಾರ್ಯಕ್ರಮವನ್ನು ಸಂಘಟಿಸಲಾಗುತ್ತಿದೆ. 15 ರಿಂದ 30 ವರ್ಷ ವಯೋಮಾನದವರು ಭಾಗವಹಿಸಬಹುದಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯ ಸಂಘ ಸಂಸ್ಥೆಗಳ ಯುವಕ/ಯುವತಿಯರು, ಶಾಲಾ ಕಾಲೇಜಿನ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಗೆ ಭೇಟಿ ನೀಡಿ ಅಥವಾ ದೂರವಾಣಿ ಸಂಖ್ಯೆ: 08156-270054 ರ ಮೂಲಕ ಹೆಸರುಗಳನ್ನು ನೊಂದಾಯಿಸಿಕೊಳ್ಳುವಂತೆ ಹಾಗೂ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಧಾರ್ ಕಾರ್ಡ್ ಕಡ್ಡಾಯವಾಗಿರುತ್ತದೆ .

### ಉನ್ನತ ಶಿಕ್ಷಣ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಹೇಳಿಕೆ

# ದೇಶ ಕಟ್ಟುವಂತಹ ಕಾರ್ಯ ಶಿಕ್ಷಕರಿಂದಗಾಬೇಕು

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳನ್ನು ಡಿಜಿಟಲ್ ಬೋರ್ಡ್, ಸ್ಮಾರ್ಟ್ ಟಿವಿ ಮತ್ತಿತರ ಅತ್ಯಾಧುನಿಕ ಸೌಲಭ್ಯಗಳನ್ನು ಒದಗಿಸಲು ಸ್ವಯಂ ಸೇವಾ ಸಂಸ್ಥೆಗಳು ಹಾಗೂ ವಿವಿಧ ಕಂಪನಿಗಳು, ಕೈಗಾರಿಕೆಗಳ ಸಾಮಾಜಿಕ ಹೊಣೆಗಾರಿಕೆ ನಿಧಿ ಸಹಕಾರದೊಂದಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ತಿಳಿಸಿದರು.



ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಆಯೋಜಿಸಿದ್ದ ಮಾಜಿ ರಾಷ್ಟ್ರಪತಿ ಡಾ.ಸರ್ವೆಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಶಿಕ್ಷಣ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯದ ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಮೂಲಸೌಕರ್ಯಗಳನ್ನು ಒದಗಿಸಲು ರಾಜ್ಯ ಸರ್ಕಾರ ವಿವಿಧ ಕಂಪನಿಗಳು,ಕೈಗಾರಿಕೆಗಳು ಮತ್ತು ಸ್ವಯಂಸೇವಾ ಸಂಸ್ಥೆಗಳ ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ 2 ಸಾವಿರ ಕೋಟಿ ರೂಪಾಯಿಗಳ ಒಡಂಬಡಿಕೆ ಮಾಡಿಕೊಂಡಿದೆ. ಅಲ್ಲದೇ, ಪ್ರೌಢಶಾಲಾ ಹಂತದಿಂದಲೇ ಭವಿಷ್ಯದಲ್ಲಿ ಉತ್ತಮ ಉದ್ಯೋಗವಕಾಶಗಳಿಗೆ ಪೂರಕವಾಗುವಂತೆ ಪ್ರತ್ಯೇಕ ಪಠ್ಯ ಕ್ರಮವನ್ನು ಪರಿಚಯಿಸಲು ಸಿದ್ದತೆಗಳು ನಡೆಯುತ್ತಿದ್ದು, ಈ ನಿಟ್ಟಿನಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆ ಕೆಲಸ ಮಾಡುತ್ತಿದೆ. ಚಿಕ್ಕಬಳ್ಳಾಪುರ ಜಿಲ್ಲೆ 26 ಸರ್ಕಾರಿ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳನ್ನು ಸ್ಮಾರ್ಟ್ ಆಗಿಸಲು ಬೆಂಗಳೂರಿನ ರೋಟರಿ ಸಂಸ್ಥೆ ಮುಂದಾಗಿದೆ. ಇತ್ತೀಗಷ್ಟೇ ರಾಜ್ಯ ಸರ್ಕಾರ ಸರ್ಕಾರಿ ನೌಕರರ ವೇತನ ಪರಿಷ್ಕರಣೆ ಮಾಡಿದ್ದು, ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಬೋಧಕೇತರ ಸಿಬ್ಬಂದಿ ನೇರ ನೇಮಕಾತಿಗೂ ಆದೇಶ ಹೊರಡಿಸಿದೆ. ರಾಜ್ಯದ ಶೈಕ್ಷಣಿಕ ಕ್ಷೇತ್ರಗಳಲ್ಲಿ ಮಹತ್ತರ ಬದಲಾವಣೆಗಳನ್ನು ತರುತ್ತಿದೆ. ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ಇದ್ದು, ಬೇಡಿಕೆಯೂ ಹೆಚ್ಚಾಗಿರುವುದರಿಂದ ಕರ್ನಾಟಕ ಪಬ್ಲಿಕ್ ಶಾಲೆಗಳ ಸಂಖ್ಯೆಯನ್ನು ಹೆಚ್ಚಿಸುವ ಉದ್ದೇಶ ಸರ್ಕಾರಕ್ಕಿದೆ. ಇದರಿಂದ ಬಡ ಮತ್ತು ಮಧ್ಯಮ ವರ್ಗಗಳ ಶೈಕ್ಷಣಿಕ ಪ್ರಗತಿಗೆ ಮತ್ತು ಸಬಲೀಕರಣಕ್ಕೆ ಹೆಚ್ಚು ಸಹಕಾರಿಯಾಗಲಿದೆ ಎಂದರು.

ಸುಸ್ಥಿರ ದೇಶವನ್ನು , ಸಮಾಜ ಕಟ್ಟುವಂತಹ ಮುಖ್ಯ ಕೆಲಸ ಶಿಕ್ಷಕರ ಮೇಲಿದೆ ಎಲ್ಲಾ ವೃತ್ತಿಗಿಂತ ಶಿಕ್ಷಕರ ವೃತ್ತಿಗೆ ಸಮಾಜದಲ್ಲಿ ಅಪಾರವಾದ ಗೌರವವಿದೆ. ಆ ಗೌರವ, ವೃತ್ತಿ ಧರ್ಮ, ಗುರು ಸಂಹಿತೆಯನ್ನು ಎಲ್ಲರೂ ಪಾಲಿಸುವಂತಹ ಶಿಕ್ಷಕರು, ಉಪನ್ಯಾಸಕರು ನೀವಾಗಬೇಕು. ಮಕ್ಕಳಿಗೆ ತಂದೆ ತಾಯಿಯ ನಂತರ ಶಿಕ್ಷಕರೇ ಹೆಚ್ಚು ಸಂಪರ್ಕಿತರಾಗಿರುತ್ತಾರೆ. ಜಿಲ್ಲೆಯಲ್ಲಿ 2023-24ನೇ ಸಾಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶ ಕಳೆಪೆಯಾಗುತ್ತಿದೆ. ಅದ್ದದರಿಂದ ಶಿಕ್ಷಕರು ಗುಣ ಮಟ್ಟದ ಫಲಿತಾಂಶವನ್ನು ಉತ್ತಮ ಪಡಿಸಲು ಹೆಚ್ಚು ಶ್ರಮವಹಿಸಬೇಕು,ಜೊತೆ ಜೊತೆಗೆ ಮೌಲ್ಯಯುತ ಶಿಕ್ಷಣ ನೀಡಬೇಕು.ತಮ್ಮ ವೃತ್ತಿ ಧರ್ಮ ಪಾಲಿಸಿ ತಮ್ಮ ವೃತ್ತಿಯ ಬಗ್ಗೆ ಹೆಮ್ಮೆ ಪಡಬೇಕು. ಸುಸ್ಥಿರ ದೇಶ, ಸಮಾಜ ಕಟ್ಟುವ ಕೆಲಸ ಮಾಡಬೇಕು. ಸಮಾಜದಲ್ಲಿ ಎಲ್ಲರಿಗೆ ಶಿಕ್ಷಣ ದೊರೆತರೆ ಇತರೆ ಸಮಸ್ಯೆಗಳನ್ನು ಪರಿಹರಿಸುವ ಅಗತ್ಯವಿಲ್ಲ ಎಂದು ತಿಳಿಸಿದರು.

ಶಾಸಕ ಪ್ರದೀಪ್ ಈಶ್ವರ್ ಮಾತನಾಡಿ,ನಾನು ಸಹ ಶಿಕ್ಷಕ ವೃತ್ತಿಯಿಂದಲೇ ಜೀವನವನ್ನು ವೃದ್ಧಿಸಿಕೊಂಡವನು. ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಪೋಷಕರು ಹೆಚ್ಚು ಶ್ರಮವಹಿಸುತ್ತಾರೆ. ಶಿಕ್ಷಕರು ಮಕ್ಕಳಲ್ಲಿ ಜ್ಞಾನವನ್ನು ಗುರುತಿಸುವ ಕಾರ್ಯವಾಗಬೇಕು. ತಮ್ಮ ಮಕ್ಕಳಿಗೆ ಉತ್ತಮವಾದ ನಿರ್ಧಾರ ತೆಗೆದು ಕೊಳ್ಳಲು ಸ್ವಾತಂತ್ರ್ಯವನ್ನು ಪೋಷಕರು ನೀಡಬೇಕು ಎಂದು ಎಲ್ಲಾ ಶಿಕ್ಷಕ ವರ್ಗಕ್ಕೆ ಶಿಕ್ಷಕರ ದಿನಾಚರಣೆಯ ಶುಭಾಶಯಗಳನ್ನು ಕೋರಿದರು.

ಇದೇ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಉತ್ತಮ ಸೇವೆ ಸಲ್ಲಿಸಿ ಶಿಕ್ಷಕರನ್ನು ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು(ಪಟ್ಟಿಯನ್ನು ಸುದ್ದಿಯೊಂದಿಗೆ ಲಗತ್ತಿಸಿದೆ). ಈ ವೇಳೆ ಮಾಜಿ ರಾಷ್ಟ್ರಪತಿ ಹಾಗೂ ತತ್ವಶಾಸ್ತ್ರಜ್ಞ ಸರ್ವೆಪಲ್ಲಿ ರಾಧಾಕೃಷ್ಣನ್ ರವರ ಭಾವ ಚಿತ್ರ ಅನಾವರಣಗೊಳಿಸಿ, ಪುಷ್ಪನಮನ ಸಲ್ಲಿಸಿ, ಗೌರವ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಪ್ರಕಾಶ್.ಜಿ.ಟಿ.ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್, ಸಾಕ್ಷರತಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಬೈಲಾಂಜಿನಪ್ಪ, ಉಪನಿರ್ದೇಶಕ (ಅಭಿವೃದ್ಧಿ) ಮುನಿಕೆಂಪೇಗೌಡ, ಕ್ಷೇತ್ರ ಶಿಕ್ಷಣಾಧಿಕಾರಿ ನರೇಂದ್ರಕುಮಾರ್, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಟಿ.ಶಶಿಧರ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎ.ನಾರಾಯಣಸ್ವಾಮಿ, ರೋಟರಿ ಕ್ಲಬ್ ನ ಗೌರ್ನರ್ ಮಹದೇವ ಪ್ರಸಾದ್, ಸುಂದರ್, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಜಿ.ಹರೀಶ್, ತಾ.ಪಂ.ಕಾರ್ಯನಿರ್ವಹಣಾಧಿಕಾರಿ ಮಂಜುನಾಥ್, ಪೆರೇಸಂದ್ರ ಎಂ.ವಿ.ಎಸ್.ಶಾಲೆಯ ನಾಗಭೂಷಣ್, ಪದಾಧಿಕಾರಿಗಳು, ಪ್ರಶಸ್ತಿ ಪುರಸ್ಕೃತ ಶಿಕ್ಷಕರು, ನಿವೃತ್ತ ಶಿಕ್ಷಕರು, ಶಿಕ್ಷಕರ ವಿವಿಧ ಸಂಘಗಳ ಪದಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಜರಿದ್ದರು.

### ಪ್ರಜಾಪ್ರಭುತ್ವ ದಿನ ಅರ್ಥ ಪೂರ್ಣವಾಗಿ ಆಚರಿಸಬೇಕು

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ನ ಸರ್. ಎಂ.ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಸೋಮವಾರ ನಡೆದ ''ಅಂತರಾಷ್ಟ್ರೀಯ ಪ್ರಜಾ ಪ್ರಭುತ್ವ ದಿನಾಚರಣೆ''ಯ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ವಹಿಸಿ ಮಾತನಾಡಿದರು. ಪ್ರಜಾಪ್ರಭುತ್ವ ದಿನದ ಪ್ರಯುಕ್ತ ಜಿಲ್ಲೆಯಲ್ಲಿ ಎಲ್ಲ ವರ್ಗದ ಸಾರ್ವಜನಿಕರು ಆಗಮಿಸಿ ಬೃಹತ್ ಮಾನವ ಸರಪಳಿ ನಿರ್ಮಿಸುವ ಮೂಲಕ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಸೆಪ್ಟೆಂಬರ್ 15 ರಂದು ಬೆಳಿಗ್ಗೆ 8:30 ರಿಂದ 9:30ರ ಸಮಯದಲ್ಲಿ ಭಾಗಿಯಾಗಿ ಆಚರಣೆ ಮಾಡಬೇಕು. ಈ ಮಹತ್ವದ ದಿನಾಚರಣೆಯನ್ನು ರಾಜ್ಯದಾದ್ಯಂತ ಏಕ ಕಾಲಕ್ಕೆ ಆಚರಣೆ ಮಾಡಲು ನಮ್ಮ ಸರ್ಕಾರ ಯೋಜಿಸಿದೆ . 2500 ಕಿಲೋ ಮೀಟರ್ ನ ಉದ್ದದ ಮಾನವ ಸರಪಳಿಯನ್ನು ಏಕ ಕಾಲಕ್ಕೆ 25 ಲಕ್ಷ ಜನರಿಂದ ನಿರ್ಮಿಸುವ ಗುರಿ ಇದೆ. ಈ ಬೃಹತ್ ಮಾನವ ಸರಪಳಿಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಮೊಡಕು ಹೊಸಹಳ್ಳಿ ಗ್ರಾಮದಿಂದ ಆರಂಭಗೊಂಡು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಗಡಿಯ ಭಾಗವಾದ ಹೆಗ್ಗಡಹಳ್ಳಿ ಬಳಿ ಮಾನವ ಸರಪಳಿ ಮುಕ್ತಾಯವಾಗುತ್ತದೆ. ಕೋಲಾರ ಜಿಲ್ಲೆಯ ಗಡಿಯ ಭಾಗವಾದ ಹೆಚ್ ಕ್ರಾಸ್ ಬಳಿ ಚಿಕ್ಕಗೊಂಡಹಳ್ಳಿಯ ವರಗೆ ಜಿಲ್ಲೆಯ 47 ಕಿಲೋ ಮೀಟರ್ ಬೃಹತ್ ಮಾನವ ಸರಪಳಿಯನ್ನು ನಿರ್ಮಿಸಬೇಕಿದೆ.ಪ್ರತಿ ಒಂದು ಕೀಲೋ ಮೀಟರ್ ಗೆ 800 ಜನಗಳಿಂದ ಮಾನವ ಸರಪಳಿ ನಿರ್ಮಿಸಲು ಸಿದ್ಧತೆ ಕೈಗೊಳ್ಳಲು ಪ್ರಭಾರ ವಹಿಸಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ನೇಮಿಸಲಾಗಿದೆ. ಅಂದು ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಕುಡಿಯುವ ನೀರು , ಮಜ್ಜಿಗೆ, ಪೊಲೀಸ್ ಬಂದೋಬಸ್ತ್, ಆರೋಗ್ಯ ಸೇವೆ,ಆಬುಲೆನ್ಸ್ ನಿಲುಗಡೆ, ವಿದ್ಯಾರ್ಥಿಗಳಿಗೆ ವಾಹನ ವ್ಯವಸ್ಥೆ ಹಾಗೂ ಮೂಲಭೂತ ಸೌರ್ಕಯಗಳನ್ನು ಒದಗಿಸಲು ಅಧಿಕಾರಿಗಳಿಗೆ ಸಚಿವರು ಸೂಚನೆ ನೀಡಿದರು. ಜನಪ್ರತಿನಿಧಿಗಳು, ಸಾರ್ವಜನಿಕರು, ಶಾಲಾ ಕಾಲೇಜು ವಿದ್ಯಾರ್ಥಿಗಳು, ಸರ್ಕಾರೇತರ ಸಂಸ್ಥೆಗಳು, ಸ್ವ-ಸಹಾಯ ಸಂಘಗಳ ಸದಸ್ಯರು ಪದಾಧಿಕಾರಿಗಳೆಲ್ಲರ ಸಹಕಾರ ಪಡೆದು ಆಚರಣೆ ಮಾಡಲು ಎಲ್ಲಾ ಇಲಾಖೆಗಳು ಸಮನ್ವಯ, ಸಹಕಾರದೊಂದಿಗೆ ಕಾರ್ಯ ನಿರ್ವಹಿಸಬೇಕು. ಅದಕ್ಕೆ ಬೇಕಾದ ಎಲ್ಲಾ ಸಿದ್ದತೆಗಳನ್ನು ಈಗಿನಿಂದಲೇ ಕೈಗೊಳ್ಳಬೇಕೆಂದು ಕಟ್ಟುನಿಟ್ಟಿನ ಸೂಚನೆಗಳನ್ನು ಸಚಿವರು ನೀಡಿದರು. ಶಾಸಕ ಪ್ರದೀಪ್ ಈಶ್ವರ್, ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್ ಹಾಗೂ ಅಪರ ಪೊಲೀಸ್ ವರಿಷ್ಠಾಧಿಕಾರಿ ಆರ್ ಐ ಕಾಸಿಂ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ತೇಜಾನಂದ ರೆಡ್ಡಿ ಉಪಸ್ಥಿತರಿದ್ದರು.

## ಹೂ ಮಾರುಕಟ್ಟೆ ನಿರ್ಮಿಸಲು ಉದ್ದೇಶಿಸಿರುವ ಜಾಗದ ಪರಿಶೀಲನೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟದಲ್ಲಿ 200 ಕೋಟಿ ರೂಪಾಯಿ ವೆಚ್ಚದಲ್ಲಿ ಅತ್ಯಾಧುನಿಕ ಸೌಕರ್ಯಗಳ ಸುಸಜ್ಜಿತ ಹೈಟೆಕ್ ಮಾರುಕಟ್ಟೆಯನ್ನು ನಿರ್ಮಿಸಲು ಆರ್ಥಿಕ ಇಲಾಖೆ ಒಪ್ಪಿಗೆ ನೀಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ ತಾಲ್ಲೂಕಿನ ನಂದಿ ಕ್ರಾಸ್ ನ ಯಲುವಳ್ಳಿ ಗ್ರಾಮದ ಬಳಿ ಇರುವ ತೋಟಗಾರಿಕೆ ಇಲಾಖೆಯ ಜಾಗದಲ್ಲಿ ಹೂ ಮಾರುಕಟ್ಟೆ ನಿರ್ಮಿಸಲು ನೀಡಿರುವ 20 ಎಕರೆ ಜಮೀನನ್ನು ಪರಿಶೀಲಿಸಿ ಹಾಗೂ



ರೈತರೊಂದಿಗೆ ಸಂವಾದ ನಡೆಸಿ ಮಾತನಾಡಿದರು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ ಮೊದಲ ಬಜೆಟ್ ನಲ್ಲಿ ಜಿಲ್ಲೆಯ ಶಿಡ್ಲಘಟ್ಟದಲ್ಲಿ 75 ಕೋಟಿ ರೂಪಾಯಿ ವೆಚ್ಚದಲ್ಲಿ ಎರಡು ಹಂತಗಳಲ್ಲಿ ಹೈಟೆಕ್ ರೇಷ್ಮೆ ಮಾರುಕಟ್ಟೆ ನಿರ್ಮಿಸಲು ಘೋಷಣೆ ಮಾಡಲಾಗಿತ್ತು. ಆದರೆ, ಭವಿಷ್ಯದ ಮತ್ತು ದೂರ ದೃಷ್ಟಿಯಿಂದ ಮತ್ತಷ್ಟು ಸೌಲಭ್ಯಗಳೊಂದಿಗೆ ಬೃಹತ್ ಹೈಟೆಕ್ ರೇಷ್ಮೆ ಮಾರುಕಟ್ಟೆ ನಿರ್ಮಿಸಲು 200 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿ ಹೊಸ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿತ್ತು. ಈ ಪ್ರಸ್ತಾವಕ್ಕೆ ಸರ್ಕಾರ ಒಪ್ಪಿಗೆ ನೀಡಿದ್ದು, 75 ಕೋಟಿ ರೂಪಾಯಿಗಳನ್ನು ನಬಾರ್ಡ್ ನೆರವಿನಿಂದ ಹಾಗೂ 125 ಕೋಟಿ ರೂಪಾಯಿಗಳನ್ನು ಸರ್ಕಾರದಿಂದ ಭರಿಸಲು ತೀರ್ಮಾನಿಸಲಾಗಿದೆ. ಇದಕ್ಕೆ ಆರ್ಥಿಕ ಇಲಾಖೆಯೂ ಒಪ್ಪಿಗೆ ನೀಡಿದೆ. 200 ಕೋಟಿ ರೂಪಾಯಿ ವೆಚ್ಚದಲ್ಲಿ ಎರಡು ಹಂತಗಳಲ್ಲಿ ಕಾಮಗಾರಿ ಪೂರ್ಣಗೊಂಡು ಜಿಲ್ಲೆಯ ರೇಷ್ಮೆ ಬೆಳೆಗಾರರು ಮತ್ತು ವ್ಯಾಪಾರಸ್ಥರಿಗೆ ಅನುಕೂಲವಾಗಲಿದೆ. ಮೂರು ವರ್ಷಗಳಲ್ಲಿ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದು ಸಚಿವರು ತಿಳಿಸಿದರು. ಶಾಸಕ ಪ್ರದೀಪ್ ಈಶ್ವರ್, ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಉಪವಿಭಾಗಾಧಿಕಾರಿ ಡಿ.ಎಚ್. ಅಶ್ವಿನ್, ತಹಸೀಲ್ದಾರ್ ಅನಿಲ್, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕಿ ಗಾಯಿತ್ರಿ,ರೈತರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು. ಇದೇ ವೇಳೆ ಸಚಿವರು ಜಿಲ್ಲೆಯ ಹೂ ಬೆಳೆಗಾರರು ಮತ್ತು ವ್ಯಾಪಾರಿಗಳೊಂದಿಗೆ ಸಂವಾದ ನಡೆಸಿ ಹೂ ಮಾರುಕಟ್ಟೆ ನಿರ್ಮಾಣದ ಕುರಿತು ಅಭಿಪ್ರಾಯ ಸಂಗ್ರಹಿಸಿದರು.

## ಪತ್ರಿಕೋದ್ಯಮ ಪ್ರಶಸ್ತಿಗೆ ನಾಮನಿರ್ದೇಶನಗಳ ಆಹ್ವಾನ

**ಬೆಂಗಳೂರು:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2017ನೇ ಸಾಲಿನಿಂದ 2023ನೇ ಸಾಲಿನವರೆಗೆ ಅಭಿವೃದ್ಧಿ ಪತ್ರಿಕೋದ್ಯಮ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಅರ್ಹ ಪತ್ರಕರ್ತರು / ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರಿಂದ ನಾಮನಿರ್ದೇಶನಗಳನ್ನು ಆಹ್ವಾನಿಸಿದೆ.

ಅಭಿವೃದ್ಧಿ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಾಗೂ ಪರಿಸರ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಅಪೂರ್ವ ಸಾಧನೆ ಮಾಡಿರುವ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ



ಮೂಲಕ ಅಭಿವೃದ್ಧಿ ಪತ್ರಿಕೋದ್ಯಮ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ನೀಡಲು 2001ರಲ್ಲಿ ರಾಜ್ಯ ಸರ್ಕಾರವು ಆದೇಶ ಹೊರಡಿಸಿತು. ಅದರಂತೆ 2001ರಿಂದ 2016ರ ವರೆಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಅರ್ಹ ಪತ್ರಕರ್ತರನ್ನು ಗುರುತಿಸಿ ಪ್ರಶಸ್ತಿಗಳನ್ನು ನೀಡುತ್ತಾ ಬಂದಿದೆ. 2017ನೇ ಸಾಲಿನಿಂದ 2023ನೇ ಸಾಲಿನವರೆಗೆ ಅರ್ಹ ಪತ್ರಕರ್ತರಿಗೆ ಈ ಪ್ರಶಸ್ತಿಗಳನ್ನು ನೀಡುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ಪರಿಸರ ಹಾಗೂ ಅಭಿವೃದ್ಧಿ ಪತ್ರಿಕೋದ್ಯಮ ಕ್ಷೇತ್ರಕ್ಕೆ ಅನುಪಮ ಕೊಡುಗೆ ನೀಡಿರುವ ಹಾಗೂ ಪತ್ರಿಕೋದ್ಯಮದಲ್ಲಿ ಕನಿಷ್ಠ 10 ವರ್ಷಗಳ ಅನುಭವ ಹೊಂದಿರುವ ಅರ್ಹ ಪತ್ರಕರ್ತರನ್ನು ಸಾರ್ವಜನಿಕರು, ಸಂಘ ಸಂಸ್ಥೆಗಳು ನಾಮನಿರ್ದೇಶನ ಮಾಡಬಹುದು ಅಥವಾ ವೈಯುಕ್ತಿಕವಾಗಿ ಸ್ವಯಂ ಅರ್ಜಿ ಸಲ್ಲಿಸಬಹುದು. 2017 ರಿಂದ 2023 ರ ಅವಧಿಯ ಎರಡೂ ವಿಭಾಗಗಳ ಪ್ರಶಸ್ತಿಗಳಿಗೆ ತಲಾ 7 ಅರ್ಹ ಪತ್ರಕರ್ತರನ್ನು ಆಯ್ಕೆ ಮಾಡಲಾಗುವುದು. ಈ ಪ್ರಶಸ್ತಿಯ ಮೊತ್ತ ಒಂದು ಲಕ್ಷ ರೂ. ನಗದು ಪುರಸ್ಕಾರ ಪ್ರಶಸ್ತಿ ಪತ್ರ ಹಾಗೂ ಸ್ಮರಣಿಕೆಯನ್ನು ಹೊಂದಿರುತ್ತದೆ. ಅರ್ಜಿಗಳು / ನಾಮನಿರ್ದೇಶನಗಳನ್ನು ಮಾನ್ಯ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾಸೌಧ, ಭಗವಾನ್ ಮಹಾವೀರ ರಸ್ತೆ, (ಇನ್ಫೆಂಟ್ರಿ ರಸ್ತೆ), ಬೆಂಗಳೂರು 560001 ಇಲ್ಲಿಗೆ ಅಥವಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಧಿಕಾರಿಗಳಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಅಥವಾ ಇ-ಮೇಲ್ ವಿಳಾಸ tsraward@gmail.com ಗೆ ದಿನಾಂಕ:30-09-2024ರ ಸಂಜೆ 5.00 ಗಂಟೆಯ ಒಳಗಾಗಿ ಸಲ್ಲಿಸಬಹುದು ಎಂದು ಇಲಾಖೆ ಆಯುಕ್ತ ಹೇಮಂತ್ ಎಂ. ನಿಂಬಾಳ್ಕರ್ ತಿಳಿಸಿದ್ದಾರೆ.

## ಕಲಬುರಗಿಯಲ್ಲಿ ಮುಖ್ಯಮಂತ್ರಿಗಳಿಂದ 23ರಂದು ಜನಸ್ಪಂದನ ಕಾರ್ಯಕ್ರಮ

**ಬೆಂಗಳೂರು:** ಮುಖ್ಯಮಂತ್ರಿಯವರು ಸೆಪ್ಟೆಂಬರ್ 23 ರಂದು ಕಲಬುರಗಿಯಲ್ಲಿ ಕಲಬುರಗಿ ವಿಭಾಗ ಮಟ್ಟದ ಜನಸ್ಪಂದನ ಕಾರ್ಯಕ್ರಮ ನಡೆಸಲಿದ್ದಾರೆ.

ಮೊದಲ ಬಾರಿಗೆ ಬೆಂಗಳೂರಿನಿಂದಾಚೆಗೆ ನಡೆಸಲಿರುವ ಈ ಕಾರ್ಯಕ್ರಮದಲ್ಲಿ ಕಲಬುರಗಿ ವಿಭಾಗದ ಬೀದರ್. ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಗಳ ನಾಗರಿಕರು ಮುಖ್ಯಮಂತ್ರಿಯವರನ್ನು ಖುದ್ದಾಗಿ ಭೇಟಿ ಮಾಡಿ ಅಹವಾಲು ಸಲ್ಲಿಸಬಹುದು. ಇದಕ್ಕಾಗಿ ಅವರು ಗ್ರಾಮ ಒನ್, ಬಾಪೂಜಿ ಸೇವಾಕೇಂದ್ರ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ಮುಂಚಿತವಾಗಿಯೇ ಪೂರಕ ದಾಖಲೆಗಳೊಂದಿಗೆ ಅಹವಾಲು ಸಲ್ಲಿಸಿ. ಸ್ವೀಕೃತಿ ಪಡೆದುಕೊಂಡು ನೋಂದಾಯಿಸಿಕೊಳ್ಳಬಹುದು. ಹೀಗೆ ನೋಂದಾಯಿಸಿಕೊಂಡವರು ಕಲಬುರಗಿಯಲ್ಲಿ ತಮ್ಮ ಅಹವಾಲಿನ ಸ್ವೀಕೃತಿ ಪತ್ರದೊಂದಿಗೆ ಜನಸ್ಪಂದನ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಯವರನ್ನು ಖುದ್ದಾಗಿ ಭೇಟಿಯಾಗಿ ಸಮಸ್ಯೆಗೆ ಪರಿಹಾರ ಪಡೆಯಬಹುದಾಗಿದೆ.

ಒಂದು ವೇಳೆ ಕಾರಣಾಂತರಗಳಿಂದ ನೋಂದಾಯಿಸಿಕೊಳ್ಳಲು ಸಾಧ್ಯವಾಗದಿದ್ದರೆ, ನೇರವಾಗಿ ಕಾರ್ಯಕ್ರಮ ನಡೆಯು ದಿನ ಸ್ಥಳದಲ್ಲಿಯೇ ನಿಗದಿತ ಕೌಂಟರುಗಳಲ್ಲಿ ನೋಂದಾಯಿಸಿಕೊಳ್ಳಬಹುದು. ಈ ಜನಸ್ಪಂದನ ಕಾರ್ಯಕ್ರಮದ ಪ್ರಯೋಜನವನ್ನು ಕಲಬುರಗಿ ವಿಭಾಗದ ನಾಗರೀಕರು ಪಡೆದುಕೊಳ್ಳಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## 6ನೇ ತರಗತಿ ದಾಖಲಾತಿಗೆ ಅರ್ಜಿ

**ಬೆಂಗಳೂರು:** ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಗಳು, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳಲ್ಲಿ 2024-25 ನೇ ಶೈಕ್ಷಣಿಕ ಸಾಲಿನಲ್ಲಿ 6ನೇ ತರಗತಿ ದಾಖಲಾತಿಗೆ ಅರ್ಜಿ ಆಹ್ವಾನಿಸಿದೆ. ಹಾಸನ, ಕೊಡಗು, ತುಮಕೂರು, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ಮಂಡ್ಯ, ದಾವಣಗೆರೆ ಹಾಗೂ ದಕ್ಷಿಣಕನ್ನಡ ಜಿಲ್ಲೆಗಳಲ್ಲಿ ಅಲ್ಪಸಂಖ್ಯಾತ ಸಮುದಾಯದ ಮುಸ್ಲಿಂ, ಜೈನ್, ಕ್ರಿಸ್ಚಿಯನ್, ಬೌದ್ಧ, ಪಾರ್ಸಿ ಮತ್ತು ಸಿಖ್ ಸಮುದಾಯದ ವಿದ್ಯಾರ್ಥಿಗಳ ಪೋಷಕರು ಈ ಜಿಲ್ಲೆಗಳ ಜಿಲ್ಲಾ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ / ಸದರಿ ಜಿಲ್ಲೆಗಳ ವಸತಿ ಶಾಲೆಗಳ ಪ್ರಾಂಶುಪಾಲರು / ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ನಿರ್ದೇಶನಾಲಯದ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಬೆಂಗಳೂರು :** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಪ್ರತಿ ವರ್ಷ ನವೆಂಬರ್-14 ರಂದು ಮಕ್ಕಳ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಈ ಪ್ರಯುಕ್ತ ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ 6 ರಿಂದ 18 ವರ್ಷದೊಳಗಿನ ಬಾಲಕರಿಗೆ ಹೊಯ್ಸಳ ಮತ್ತು ಬಾಲಕಿಯರಿಗೆ ''ಕೆಳದಿ ಚೆನ್ನಮ್ಮ ಪ್ರಶಸ್ತಿಗಳನ್ನು ನೀಡುವ ಸಲುವಾಗಿ ಅರ್ಹರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.



ಮಕ್ಕಳ ದಿನಾಚರಣೆ-2024ನೇ ಸಾಲಿಗೆ ''ಹೊಯ್ಸಳ'' ಮತ್ತು ''ಕೆಳದಿ ಚೆನ್ನಮ್ಮ'' ಶೌರ್ಯ ಪ್ರಶಸ್ತಿಗಾಗಿ ಅರ್ಹ ಮಕ್ಕಳನ್ನು ಹಾಗೂ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳನ್ನು ಸಂಸ್ಥೆಗಳನ್ನು ಗುರುತಿಸಿ ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಲಾಗುವುದು.

ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 05 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ ರೂ.25,000/- ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ, ಹಾಗೂ ಸಂಸ್ಥೆಗಳಿಗೆ ತಲಾ ರೂ.1,00,000/- ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಧ ಕೆಜಿ ಚಿನ್ನ, 20 ಲಕ್ಷ ರೂ. ದೋಚಿದ ಕಳ್ಳರು

» **ಹನೂರಿನಲ್ಲಿ ತಡರಾತ್ರಿ ಮನೆಗೆ ನುಗ್ಗಿದ ಕಳ್ಳರು**

**ಚಾಮರಾಜನಗರ :** ಮನೆಯಲ್ಲಿ ಯಾರೂ ಇಲ್ಲದನ್ನು ಗಮನಿಸಿದ ಕಳ್ಳರು ಮನೆಯೊಳಗೆ ನುಗ್ಗಿ , ಮನೆಯಲ್ಲಿ ಇಟ್ಟಿದ್ದ 500 ಗ್ರಾಂ ಚಿನ್ನಾಭರಣ ಹಾಗೂ 20 ಲಕ್ಷರೂ ನಗದನ್ನು ದೋಚಿ ಪರಾಗಿರಾಗಿರುವ ಘಟನೆ ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣದ ಡಾಲರ್ಸ್ ಕಾಲೋನಿಯಲ್ಲಿ ತಡರಾತ್ರಿ ನಡೆದಿದೆ. ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣದ ಅಂಚೆ ಕೇಚೆರಿ ಸಮೀಪದ ಡಾಲರ್ಸ್ ಕಾಲೋನಿಯಲ್ಲಿ ವಾಸವಾಗಿದ್ದ ಚಿನ್ನದೊರೆ ಮನೆಯಲ್ಲಿ ತಡರಾತ್ರಿ ಕಳ್ಳತನವಾಗಿದ್ದು, ಮಂಗಳವಾರ ಬೆಳಗ್ಗೆ ಬೆಳಕಿಗೆ ಬಂದಿದೆ. ಮನೆಯಲ್ಲಿರುವವರು ತಮಿಳುನಾಡಿನ ಸಂಬಂಧಿಕರ ಮದುವೆಗೆ ತೆರಳಿದ್ದರು, ಇದನ್ನು ಸೂಕ್ಷ್ಮವಾಗಿ ಗಮನಿಸಿದ ಕಳ್ಳರು ಮನೆಯೊಳಗೆ ನುಗ್ಗಿ ಮನೆಯ ಬೀರುವಿನಲ್ಲಿ ಭದ್ರವಾಗಿಟ್ಟಿದ್ದ ಚಿನ್ನಾಭರಣ ಹಾಗೂ ನಗದನ್ನು ಕದ್ದು ಹೋಗಿದ್ದಾರೆ. ಮನೆಯ ಮಾಲೀಕ ಚಿನ್ನದೊರೆ ಕಳೆದ 40 ವರ್ಷಗಳಿಂದ ತಮಿಳುನಾಡಿನಿಂದ ಬಂದು ನೆಲೆಸಿದ್ದಾರೆ. ಮಕ್ಕಳ ಮದುವೆಗಾಗಿ ಜಮೀನು ಮಾಡಿ ನಗದು ಇಟ್ಟು, ಚಿನ್ನಾಭರಣ ಮಾಡಿಸಿದ್ದರು ಎನ್ನಲಾಗಿದ್ದು. ಸ್ಥಳಕ್ಕೆ ಹನೂರು ಪೊಲೀಸರ ಆಗಮಿಸಿ ಪರಿಶೀಲನೆ ನಡೆಸುತ್ತಿದ್ದಾರೆ.

## ಜಿಮ್, ಫಿಟ್ನೆಸ್, ಬ್ಯೂಟೀಷಿಯನ್, ಚಾಟ್ಸ್ ತಯಾರಿಕೆ ತರಬೇತಿ ಶಿಬಿರ

**ಬೆಂಗಳೂರು:** ಯುವ ಸಬಲೀಕರಣಮತ್ತು ಕ್ರೀಡಾ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಯುವಕ / ಯುವತಿಯರಿಗೆ ಸ್ವಯಂ ಉದ್ಯೋಗ ಒದಗಿಸಿಕೊಡುವ ನಿಟ್ಟಿನಲ್ಲಿ ಜಿಮ್, ಫಿಟ್ನೆಸ್, ಬ್ಯೂಟೀಷಿಯನ್, ಚಾಟ್ಸ್ ತಯಾರಿಕೆ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಜಿಮ್/ ಫಿಟ್ನೆಸ್ ತರಬೇತಿಯು ಸೆಪ್ಟೆಂಬರ್ 19 ರಿಂದ ಅಕ್ಟೋಬರ್ 3 ರವರೆಗೆ 15 ದಿನಗಳ ಅವಧಿಯಾಗಿರುತ್ತದೆ. ತರಬೇತಿ ಪಡೆಯಲಿಚ್ಚಿಸುವವರು ದ್ವಿತೀಯ ಪಿಯುಸಿ ವಿದ್ಯಾರ್ಹತೆ ಹೊಂದಿರಬೇಕು. ಕನಿಷ್ಠ ವಯೋಮಿತಿ 18 ವರ್ಷ, ಗರಿಷ್ಠ 40 ವರ್ಷದೊಳಗಿರಬೇಕು. ತರಬೇತಿಯು ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ನಡೆಯಲಿದೆ.

ಬ್ಯೂಟಿಷಿಯನ್ ತರಬೇತಿಯು ಸೆಪ್ಟೆಂಬರ್ 21 ರಿಂದ ಅಕ್ಟೋಬರ್ 3 ರವರೆಗೆ, 13 ದಿನಗಳ ಅವಧಿಯಾಗಿರುತ್ತದೆ ಹಾಗೂ ಚಾಟ್ಸ್ ತಯಾರಿಕೆ ತರಬೇತಿಯು ಅಕ್ಟೋಬರ್ 4 ರಿಂದ 9 ರವರೆಗೆ 06 ದಿನಗಳ ಅವಧಿಯಾಗಿರುತ್ತದೆ. ತರಬೇತಿ ಪಡೆಯಲಿಚ್ಚಿಸುವವರು ಎಸ್ಎಸ್ಎಲ್ಸಿ ಉತ್ತೀರ್ಣ ಅಥವಾ ಅನುತ್ತೀರ್ಣವಾಗಿರುವವರು ಕನಿಷ್ಠ ವಯೋಮಿತಿ 18 ವರ್ಷ, ಗರಿಷ್ಟ 40 ವರ್ಷದೊಳಗಿರಬೇಕು. ತರಬೇತಿಯು ಕೋರಮಂಗಲದ ಒಳಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ತರಬೇತಿಯು ಬೆಳಿಗ್ಗೆ 10 ಗಂಟೆಯಿಂದ 5.30 ಗಂಟೆಯವರೆಗೆ ನಡೆಯಲಿದ್ದು, ತರಬೇತಿ ಶಿಬಿರದಲ್ಲಿ ಭಾಗವಹಿಸುವ ಯುವಕ / ಯುವತಿಯರಿಗೆ ಲಘು ಉಪಹಾರ ಒದಗಿಸಲಾಗುವುದು. ಶಿಬಿರಾರ್ಥಿಗಳಿಗೆ ಪ್ರಯಾಣ ಭತ್ಯೆ ನೀಡಲಾಗುವುದು. ಅಲ್ಲದೇ ಹೊರ ಜಿಲ್ಲೆಗಳಿಂದ ಆಗಮಿಸುವ ಶಿಭಿರಾರ್ಥಿಗಳಿಗೆ ಸಾಮಾನ್ಯ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು.

ಆಸಕ್ತ ಯುವಕ / ಯುವತಿಯರು ತಮ್ಮ ಜನ್ಮ ದಿನಾಂಕದ ದಾಖಲೆಯೊಂದಿಗೆ ಸಹಾಯವಾಣಿ ಸಂಖ್ಯೆ 155265 ಹಾಗೂ ಉಪನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ ಬೆಂಗಳೂರು -560001 ಗೆ ಅಥವಾ ಮೊಬೈಲ್ ದೂರವಾಣಿ ಸಂಖ್ಯೆ 9731251411 ಇಲ್ಲಿ ನೋಂದಾಯಿಸಿಕೊಳ್ಳಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಎಸ್ಸಿಎಸ್ಪಿ / ಟಿಎಸ್ಪಿ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೂಕ್ಷ್ಮ ನೀರಾವರಿ ಘಟಕಕ್ಕೆ ಅರ್ಜಿ

**ಬೆಂಗಳೂರು ಗ್ರಾಮಾಂತರ:** ಕೃಷಿ ಇಲಾಖೆ ವತಿಯಿಂದ ನೀರಿನ ಮಿತಿ ಬಳಕೆಯಿಂದ ಅಧಿಕ ಇಳುವರಿ ಪಡೆಯಲು ಹಾಗೂ ಜಿಲ್ಲೆಯಲ್ಲಿ ಲಘು ನೀರಾವರಿ ಪದ್ಧತಿಯನ್ನು ಜನಪ್ರಿಯಗೊಳಿಸಲು ರಾಜ್ಯಾದ್ಯಂತ ಕೃಷಿ ಚಟುವಟಿಕೆಗಳಿಗೆ ಸಹಾಯವಾಗುವಂತೆ ಸೂಕ್ಷ್ಮ ನೀರಾವರಿ (ಹನಿ ನೀರಾವರಿ ಮತ್ತು ತುಂತುರು ನೀರಾವರಿ) ಘಟಕಗಳನ್ನು ಅಳವಡಿಸಿಕೊಳ್ಳಲು ಎಲ್ಲಾ ವರ್ಗದ ರೈತರಿಗೆ ಕೃಷಿ ಇಲಾಖೆಯಿಂದ ಶೇ.90ರ ರಿಯಾಯಿತಿಯಲ್ಲಿ ಸೌಲಭ್ಯ ಒದಗಿಸಲಾಗುತ್ತಿದ್ದು ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.



**ಸೌಲಭ್ಯ ಪಡೆಯಲು ಷರತ್ತುಗಳು:** ಹನಿ ಮತ್ತು ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 5.0 ಹೆಕ್ಟೇರ್ ಪ್ರದೇಶದವರೆಗೆ ಸಹಾಯಧನ ನೀಡಲಾಗುತ್ತದೆ. ಮೊದಲ ಎರಡು ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಸಹಾಯಧನ ಮತ್ತು ಎರಡು ಹೆಕ್ಟೇರ್ ಗಿಂತ ಮೇಲ್ಪಟ್ಟು 5.0 ಹೆಕ್ಟೇರ್ ವರೆಗೆ ಶೇ.45 ರಷ್ಟು ಸಹಾಯಧನವನ್ನು ಸಾಮಾನ್ಯ ವರ್ಗದ ರೈತರಿಗೆ ಮತ್ತು ಶೇ.55 ರಷ್ಟು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ರೈತರಿಗೆ ನೀಡಲು ಅವಕಾಶವಿದೆ. ಸರ್ಕಾರದಿಂದ ಅನುಮೋದನೆಗೊಂಡಿರುವ ಸಂಸ್ಥೆಗಳಿಂದ ಘಟಕಗಳನ್ನು ಅಳವಡಿಸಿಕೊಂಡಲ್ಲಿ ಮಾತ್ರ ಸಹಾಯಧನ ದೊರೆಯುತ್ತದೆ.

ಸೂಕ್ಷ್ಮ ನೀರಾವರಿ ಘಟಕವನ್ನು ಸಹಾಯಧನದಡಿ ಪಡೆಯಲು ಸಾಮಾನ್ಯ ವರ್ಗದ ರೈತರಿಗೆ ಒಮ್ಮೆ ಮಾತ್ರ ಹಾಗೂ ಪರಿಶಿಷ್ಟ ಜಾತಿ ರೈತರಿಗೆ ಏಳು ವರ್ಷಗಳಿಗೊಮ್ಮೆ ಮಾತ್ರ ಅವಕಾಶವಿರುತ್ತದೆ. ಏಳು ವರ್ಷಗಳ ಹಿಂದೆ, ಸೂಕ್ಷ್ಮ ನೀರಾವರಿ ಸವಲತ್ತು ಪಡೆದ ಪರಿಶಿಷ್ಟ ಜಾತಿ ರೈತರಿಗೆ ಮತ್ತೊಮ್ಮೆ ಸವಲತ್ತು ಪಡೆಯಲು ರೈತರಿಗೆ ಆದ್ಯತೆ ಮೇಲೆ ನೀಡಲಾಗುವುದು.

ರೈತರು ಸಹಾಯಧನದಡಿ ಸವಲತ್ತನ್ನು ಪಡೆಯಲು ನಿಗದಿತ ನಮೂನೆಯಲ್ಲಿ ಸಂಬಂಧಿಸಿದ ದಾಖಲೆಗಳೊಂದಿಗೆ-ಪಹಣಿ/ಹಿಡುವಳಿ ಪತ್ರ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ರೈತರಿಗೆ ಜಾತಿ ಪ್ರಮಾಣ ಪತ್ರ. ಮೊಬೈಲ್ ಸಂಖ್ಯೆ, ಚೆಕ್ಕುಬಂದಿ, ನೀರಿನ ಲಭ್ಯತೆ ಪ್ರಮಾಣ ಪತ್ರ ಆಧಾರ ಕಾರ್ಡ್ ಪ್ರತಿ, ಮತದಾರರ ಗುರುತಿನ ಚೀಟಿ, ತೋಟಗಾರಿಕೆ/ರೇಷ್ಮೆ ಇಲಾಖೆಯಿಂದ ಸಹಾಯಧನ ಪಡೆದಿರುವುದಿಲ್ಲ ಎಂಬ ಪ್ರಮಾಣ ಪತ್ರ, ಬ್ಯಾಂಕ್ ಖಾತೆ ಸಂಖ್ಯೆ, ಐ.ಎಫ್.ಎಸ್.ಸಿ.ಕೋಡ್ ಸಂಖ್ಯೆ, 100/- ರೂ ಛಾಪಾ ಕಾಗದದ ಮೇಲೆ ಮುಚ್ಚಳಿಕೆ ಪತ್ರ, ರೈತ ಸಂಪರ್ಕ ಕೇಂದ್ರದ ಮುಖ್ಯಸ್ಥರಿಗೆ ಸಲ್ಲಿಸುವುದು. ಸೂಕ್ಷ್ಮ ನೀರಾವರಿ ಘಟಕಗಳನ್ನು ಕೃಷಿಗೆ ಮಾತ್ರ ಉಪಯೋಗಿಸಲಾಗುವುದು ಎಂದು ರೈತರು ಘೋಷಣಾ ಪತ್ರ ನೀಡಬೇಕು. ರೈತರು ಕಡ್ಡಾಯವಾಗಿ ಈಖಆ ಹೊಂದಿರತಕ್ಕದ್ದು.

ಇಲಾಖೆಯಿಂದ ಸೂಕ್ಷ್ಮ ನೀರಾವರಿ ಘಟಕಗಳನ್ನು ಪಡೆಯಲು ಹೆಚ್ಚಿನ ವಿವರಗಳಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದೆ.

## ಸಂಚಾರಿ ಕುರಿಗಾಹಿಗಳಿಗೆ ಗುರುತಿನ ಚೀಟಿ ವಿತರಣೆ

**ಬೆಂಗಳೂರು ಗ್ರಾಮಾಂತರ:** ಕರ್ನಾಟಕ ರಾಜ್ಯ ಸರ್ಕಾರವು 2024-25 ಸಾಲಿನ ಆಯವ್ಯಯದಲ್ಲಿ ಸಂಚಾರಿ ಕುರಿಗಾಹಿಗಳು ಇರುವ ಜಾಗದಲ್ಲೇ ಅವರ ಕುರಿ/ಮೇಕೆಗಳಿಗೆ ಸರ್ಕಾರಿ ಪಶುವೈದ್ಯರಿಂದ ಲಸಿಕೆ ಹಾಕುವ ಸಲುವಾಗಿ ಸಂಚಾರಿ ಕುರಿಗಾಹಿಗಳಿಗೆ ಗುರುತಿನ ಚೀಟಿ ವಿತರಿಸುವ ಕಾರ್ಯಕ್ರಮವನ್ನು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಪೂರಕ ಅಂಗ ಸಂಸ್ಥೆಯಾದ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಆದ್ದರಿಂದ ಸಂಚಾರಿ ಕುರಿಗಾಹಿಗಳು ಸ್ಥಳೀಯ ಪಶುವೈದ್ಯಾಧಿಕಾರಿಗಳಿಂದ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಸಂಚಾರಿ ಕುರಿಗಾಹಿಗಳು ಸ್ಥಳೀಯ ಪಶುವೈದ್ಯಾಧಿಕಾರಿಗಳಿಂದ ಜಾನುವಾರು ಗಣತಿ/ಇಲಾಖೆಯ ದಾಖಲಾತಿ ಆಧಾರದ ಮೇಲೆ ವಲಸೆ ಕುರಿಗಾರನು ಕನಿಷ್ಠ 20 ಕುರಿಗಳನ್ನು ಹೊಂದಿರುವ ಬಗ್ಗೆ ದೃಢೀಕರಣ ಪತ್ರ, ವಲಸೆ ಕುರಿಗಾರನಾಗಿ ಕುರಿಗಳೊಂದಿಗೆ ವಲಸೆ ಹೋಗುವುದಕ್ಕೆಸಂಬಂಧಪಟ್ಟಂತೆಸ್ಥಳೀಯಗ್ರಾಮಲೆಕ್ಕಾಧಿಕಾರಿಗಳಿಂದ ಪಡೆದ ಮಹಜರ್ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಪ್ರತಿ, ಫ್ರೂಟ್ಸ್ ಐಡಿ, ಪಡಿತರ ಚೀಟಿಯ ಪ್ರತಿ ಮತ್ತು ಅರ್ಜಿಯಲ್ಲಿ ತಿಳಿಸಿದ ಇನ್ನಿತರ ಅಗತ್ಯ ದಾಖಲಾತಿಗಳನ್ನು ಸಲ್ಲಿಸಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಜೆ ಟಿಪ್ಸ್

## ಎಚ್‌ಎಸ್‌ಬಿಸಿ ಮ್ಯೂಚುವಲ್ ಫಂಡ್ ಹೊಸ ಫಂಡ್ ಆಫರ್ ಎಚ್‌ಎಸ್‌ಬಿಸಿ ಇಂಡಿಯಾ ರಫ್ತು ಅವಕಾಶಗಳ ನಿಧಿ ಪ್ರಾರಂಭ

ಎಚ್‌ಎಸ್‌ಬಿಸಿ ಮ್ಯೂಚುವಲ್ ಫಂಡ್ ಇಂದು ಎಚ್‌ಎಸ್‌ಬಿಸಿ ಇಂಡಿಯಾ ಎಕ್ಸ್ಪೋರ್ಟ್ ಆಪರ್ಚುನಿಟೀಸ್ ಫಂಡ್ ಅನ್ನು ಪ್ರಾರಂಭಿಸುವುದಾಗಿ ಘೋಷಿಸಿತು, ಇದು ರಫ್ತು ಥೀಮ್ ಅನ್ನು ಅನುಸರಿಸಿ ಓಪನ್ ಎಂಡೆಡ್ ಈಕ್ವಿಟಿ ಯೋಜನೆಯಾಗಿದೆ. ಹೊಸ ಫಂಡ್ ಆಫರ್ ಸೆಪ್ಟೆಂಬರ್ 5, 2024 ರಂದು ಪ್ರಾರಂಭವಾಗುತ್ತದೆ ಮತ್ತು ಸೆಪ್ಟೆಂಬರ್ 19, 2024 ರಂದು ಕೊನೆಗೊಳ್ಳುತ್ತದೆ. ಎಚ್‌ಎಸ್‌ಬಿಸಿ ಇಂಡಿಯಾ ರಫ್ತು ಅವಕಾಶಗಳ ನಿಧಿ (ಯೋಜನೆ) ಸರಕುಗಳು ಅಥವಾ ಸೇವೆಗಳ ರಫ್ತಿನಲ್ಲಿ ತೊಡಗಿರುವ ಅಥವಾ ಲಾಭ ಪಡೆಯುವ ನಿರೀಕ್ಷೆಯಿರುವ ಕಂಪನಿಗಳ ಈಕ್ವಿಟಿ ಮತ್ತು ಈಕ್ವಿಟಿ ಸಂಬಂಧಿತ ಸೆಕ್ಯುರಿಟಿಗಳ ಸಕ್ರಿಯವಾಗಿ ನಿರ್ವಹಿಸುವ ಪೋರ್ಟ್ಫೋಲಿಯೊದಿಂದ ದೀರ್ಘಕಾಲೀನ ಬಂಡವಾಳ ಬೆಳವಣಿಗೆಯನ್ನು ಉತ್ಪಾದಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯು ಮಾರುಕಟ್ಟೆ ಬಂಡವಾಳೀಕರಣದಾದ್ಯಂತ ರಫ್ತು ವಿಷಯದ ಭಾಗವಾಗಿರುವ ಕಂಪನಿಗಳಲ್ಲಿ ಹೂಡಿಕೆ ಮಾಡುವ ನಮ್ಯತೆಯನ್ನು ಹೊಂದಿದೆ - ಲಾರ್ಜ್ ಕ್ಯಾಪ್, ಮಿಡ್ ಕ್ಯಾಪ್ ಮತ್ತು ಸ್ಮಾಲ್ ಕ್ಯಾಪ್ ಕಂಪನಿಗಳು. ಈ ಯೋಜನೆಯು ನಿಫ್ಟಿ 500 ಟೋಟಲ್ ರಿಟರ್ನ್ ಇಂಡೆಕ್ಸ್ ಅನ್ನು ಟ್ರ್ಯಾಕ್ ಮಾಡುತ್ತದೆ. ಎಚ್‌ಎಸ್‌ಬಿಸಿ ಮ್ಯೂಚುವಲ್ ಫಂಡ್ನ ಈಕ್ವಿಟಿಗಳ ಹಿರಿಯ ಉಪಾಧ್ಯಕ್ಷ ಅಭಿಷೇಕ್ ಗುಪ್ತಾ ಮತ್ತು ಎಚ್‌ಎಸ್‌ಬಿಸಿ ಮ್ಯೂಚುವಲ್ ಫಂಡ್ನ ಸಂಶೋಧನಾ ಷೇರುಗಳ ಮುಖ್ಯಸ್ಥ ಸೋನಾಲ್ ಗುಪ್ತಾ (ಓವರ್ಸೀಸ್ ಸೆಕ್ಯುರಿಟೀಸ್) ಈ ಯೋಜನೆಯನ್ನು ನಿರ್ವಹಿಸಲಿದ್ದಾರೆ. ಎಚ್‌ಎಸ್‌ಬಿಸಿ ಇಂಡಿಯಾ ರಫ್ತು ಅವಕಾಶಗಳ ನಿಧಿಯು ವಿಭಿನ್ನ ಹಂಚಿಕೆ ರಚನೆಯನ್ನು ಹೊಂದಿರುವ ಉದ್ಯಮದಲ್ಲಿ ಒಂದು ವಿಶಿಷ್ಟ ಕೊಡುಗೆಯಾಗಿದೆ. ಈ ವಿಷಯಾಧಾರಿತ ನಿಧಿಯು ರಫ್ತುಗಳಲ್ಲಿನ ಬೆಳವಣಿಗೆಯನ್ನು ಸೆರೆಹಿಡಿಯುವ ಗುರಿಯನ್ನು ಹೊಂದಿದೆ. ಸರಕುಗಳು ಅಥವಾ ಸೇವೆಗಳ ರಫ್ತಿನಲ್ಲಿ ತೊಡಗಿರುವ ಅಥವಾ ಲಾಭ ಪಡೆಯುವ ನಿರೀಕ್ಷೆಯಿರುವ ಕಂಪನಿಗಳ ಈಕ್ವಿಟಿ ಮತ್ತು ಈಕ್ವಿಟಿ ಸಂಬಂಧಿತ ಸೆಕ್ಯುರಿಟಿಗಳಲ್ಲಿ ಒಟ್ಟು ಆಸ್ತಿಯ 80% ರಿಂದ 100% ರಷ್ಟು ಹೂಡಿಕೆ ಮಾಡುವ ಗುರಿಯನ್ನು ಈ ಫಂಡ್ ಹೊಂದಿದೆ. ಭಾರತದ ಹೊರಗಿನಿಂದ 20% ಕ್ಕಿಂತ ಹೆಚ್ಚು ರಫ್ತು ಆದಾಯವನ್ನು ಹೊಂದಿರುವ ವಲಯಗಳು / ಉದ್ಯಮದ ಕಂಪನಿಗಳ ಈಕ್ವಿಟಿಗಳು ಮತ್ತು ಈಕ್ವಿಟಿ ಸಂಬಂಧಿತ ಸೆಕ್ಯುರಿಟಿಗಳಲ್ಲಿ ಹೂಡಿಕೆ ಮಾಡಲು ಈ ಫಂಡ್ ಉದ್ದೇಶಿಸಿದೆ. ಈ ಫಂಡ್ ಒಟ್ಟು ಆಸ್ತಿಯ 20% ವರೆಗೆ ಇತರ ಈಕ್ವಿಟಿ ಮತ್ತು ಈಕ್ವಿಟಿ ಸಂಬಂಧಿತ ಸೆಕ್ಯುರಿಟಿಗಳಲ್ಲಿ ಹೂಡಿಕೆ ಮಾಡುವ ನಮ್ಯತೆಯನ್ನು ಹೊಂದಿದೆ.

## ಬೀಟ್ರೂಟ್ ಪರೋಟ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಬೀಟ್ರೂಟ್ ಪ್ಯೂರಿ-1/2 ಕಪ್, ಗೋಧಿ ಹಿಟ್ಟು-2 ಕಪ್, ಉಪ್ಪು ರುಚಿಗೆ ತಕ್ಕಷ್ಟು, ತುಪ್ಪ-ಸ್ವಲ್ಪ, ಪನ್ನೀರ್-1 ಕಪ್ ತುರಿದದ್ದು, ಬೆಳ್ಳುಳ್ಳಿ-2 ಎಸಳು, ಒಣಮೆಣಸು-2, ಜೀರಿಗೆ ಪುಡಿ-1 ಟೀ ಸ್ಪೂನ್,

### ಮಾಡುವ ವಿಧಾನ

ಗೋಧಿ ಹಿಟ್ಟಿಗೆ ಸ್ವಲ್ಪ ಉಪ್ಪು ಸೇರಿಸಿ ಅದಕ್ಕೆ ಬೀಟ್ರೂಟ್ ಪ್ಯೂರಿ ಸೇರಿಸಿ ಚೆನ್ನಾಗಿ ನಾದಿಕೊಳ್ಳಿ. ನಂತರ ಒಂದು ಬೌಲ್ ಗೆ ಪನ್ನೀರ್ ತುರಿ, ಚಿಕ್ಕದಾಗಿ ಕತ್ತರಿಸಿಕೊಂಡ ಬೆಳ್ಳುಳ್ಳಿ, ಜೀರಿಗೆ ಪುಡಿ, ಒಣಮೆಣಸು ಸ್ವಲ್ಪ, ಮಿಕ್ಸಿಯಲ್ಲಿ ತರಿ ತರಿಯಾಗಿ ರುಬ್ಬಿಕೊಂಡ ಮಿಶ್ರಣವನ್ನು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿಕೊಳ್ಳಿ. ನಂತರ ನಾದಿ ಇಟ್ಟುಕೊಂಡ ಬೀಟ್ರೂಟ್ ಮಿಶ್ರಣದಿಂದ ಪರೋಟ ತಯಾರಿಸಿ ಅದರ ಒಳಗೆ ಪನ್ನೀರ್ ಮಿಶ್ರಣ ಸೇರಿಸಿ ಮತ್ತೊಮ್ಮೆ ನಾದಿಕೊಳ್ಳಿ. ನಂತರ ಕಾದ ಪ್ಯಾನಿಗೆ ತುಪ್ಪ ಸವರಿ ಈ ಪರೋಟವನ್ನು ಎರಡು ಕಡೆ ಚೆನ್ನಾಗಿ ಬೇಯಿಸಿಕೊಳ್ಳಿ.

## ದೇವರ ಸಿನಿಮಾದ ಟ್ರೇಲರ್ ನೋಡಿ ಅಭಿಮಾನಿಗಳು ಫುಲ್ ಕುಶ್



ಜೂನಿಯರ್ ಎನ್ಟಿಆರ್ ಅವರ ಬಹುನಿರೀಕ್ಷಿತ ಪ್ಯಾನ್-ಇಂಡಿಯನ್ ದೇವರ ಸಿನಿಮಾದ ಟ್ರೇಲರ್ ಇಂದು ರಿಲೀಸ್ ಆಗಿದೆ. ಅದ್ದೂರಿ ಮೇಕಿಂಗ್ ನೋಡಿದ ಜೂ ಎನ್ಟಿಆರ್ ಅಭಿಮಾನಿಗಳು ಫುಲ್ ಫಿದಾ ಆಗಿದ್ದಾರೆ.

ಮುಂಬೈನಲ್ಲಿ ನಡೆದ ಭವ್ಯ ಸಮಾರಂಭದಲ್ಲಿ ತೆಲುಗು, ತಮಿಳು, ಹಿಂದಿ, ಕನ್ನಡ ಹಾಗೂ ಮಲಯಾಳಂ ಭಾಷೆಯ ಟ್ರೇಲರ್ ಬಿಡುಗಡೆ ಮಾಡಲಾಯಿತು.

ಹೊಸ ಪ್ರಯತ್ನದ ದೇವರ ಚಿತ್ರದ ಟ್ರೈಲರ್ ಲಾಂಚ್ ಮುಂಬೈನಲ್ಲಿ ನಡೆದಿದೆ. ಚಿತ್ರದ ನಾಯಕ ನಟರಾದ ಎನ್ಟಿಆರ್, ಜಾನ್ವಿ ಕಪೂರ್ ಮತ್ತು ಸೈಫ್ ಅಲಿ ಖಾನ್ ಜೊತೆಗೆ ನಿರ್ದೇಶಕ ಕೊರಟಾಲ ಶಿವ ಅವರು ಯೂಟ್ಯೂಬ್ಗೆ ಟ್ರೇಲರ್ ಬಿಡುಗಡೆ ಮಾಡಿದರು.

ಈ ವೇಳೆ ಮಾತನಾಡಿದ ಸೈಫ್ ಅಲಿ ಖಾನ್ ಅವರು, ನಾವು ಒಂದೇ ದೇಶದಿಂದ ಬಂದಿದ್ದೇವೆ ಆದರೆ ನಮ್ಮ ರಾಜ್ಯಗಳು ಬೇರೆ ಬೇರೆ. ಸೌತ್ ಚಿತ್ರಗಳು ಉತ್ತಮ ಪ್ರದರ್ಶನ ನೀಡುತ್ತಿವೆ ಮತ್ತು ನಾನು ದೇವರ ಬಗ್ಗೆ ಉತ್ಸುಕನಾಗಿದ್ದೇನೆ. ನನಗೆ ಎನ್ಟಿಆರ್ ಜಿ ಎಂದರೆ ತುಂಬಾ ಇಷ್ಟ.ಜಾನ್ವಿ ಕಪೂರ್ ಮಾತನಾಡಿ, ಇದು ತೆಲುಗಿನಲ್ಲಿ ನನ್ನ ಚೊಚ್ಚಲ ಚಿತ್ರ ಮತ್ತು ನಾನು ಮನೆಯಲ್ಲಿದ್ದಂತೆ ಭಾಸವಾಗುತ್ತಿದೆ. ದೇವರ ನನ್ನ ಪಾಲಿಗೆ ವಿಶೇಷ ಚಿತ್ರ. ತಾರಕ್ ಜೊತೆ ಪ್ರತಿ ಸಿನಿಮಾ ಮಾಡಬೇಕೆಂಬ ಆಸೆ ನನಗಿದೆ. ಅವರಿಂದ ನಾನು ತುಂಬಾ ಕಲಿತಿದ್ದೇನೆ. ತಾರಕ್ ಜೊತೆ ಕೆಲಸ ಮಾಡಿದ ನಂತರ ಅವರ ದೊಡ್ಡ ಅಭಿಮಾನಿಯಾದೆ.

ಜೂ. ಎನ್ಟಿಆರ್ ಮಾತನಾಡಿ, ನಾನು ಪ್ರಾರಂಭಿಸಲು ತುಂಬಾ ನರ್ವಸ್ ಆಗಿದ್ದೇನೆ. ಆರ್‌ಆರ್‌ಆರ್ ನಂತರ, ಇದು ನನ್ನ ಮುಂದಿನ ಬಿಡುಗಡೆಯಾಗಿದೆ. ಮುಂಬೈ ನಗರದಲ್ಲಿ ದೇವರ ಟ್ರೇಲರ್ ಅನ್ನು ಬಿಡುಗಡೆ ಮಾಡಲು ನನಗೆ ತುಂಬಾ ಸಂತೋಷವಾಗಿದೆ. ನಾವು ನಗರದಲ್ಲಿ ಆರ್‌ಆರ್‌ಆರ್ ಅನ್ನು ಪ್ರಚಾರ ಮಾಡಿದಾಗ ಉತ್ತರದಲ್ಲಿ ಸ್ವಿಕಾರವು ನನ್ನನ್ನು ಆಘಾತಗೊಳಿಸಿದೆ. ಇದು ದೇವರ ಜೊತೆ ಪುನರಾವರ್ತನೆಯಾಗುತ್ತದೆ ಎಂದು ಭಾವಿಸುತ್ತೇವೆ. ಆರು ವರ್ಷಗಳ ನಂತರ ಇದು ನನ್ನ ಸೋಲೋ ಬಿಡುಗಡೆಯಾಗಿದೆ.

## ಅನವಶ್ಯಕ ಕೂದಲಿಗೆ ಹೇಳಿ ಗುಡ್ ಬೈ



### ಹೆಲ್ತ್ ಟಿಪ್ಸ್

ಮುಖದ ಮೇಲಿರುವ ಅನವಶ್ಯಕ ಕೂದಲು ಸೌಂದರ್ಯವನ್ನು ಹಾಳು ಮಾಡುತ್ತದೆ. ಅನೇಕರು ಬ್ಯೂಟಿ ಪಾರ್ಲರ್ ಗೆ ಹೋಗಿ ಕೂದಲು ತೆಗೆಸಿಕೊಂಡು ಬರ್ತಾರೆ. ವ್ಯಾಕ್ಸಿಂಗ್ ಅಸಹನೀಯ ನೋವು ನೀಡುತ್ತದೆ. ಕೆಲವರ ಚರ್ಮದ ಮೇಲೆ ಅಡ್ಡಪರಿಣಾಮ ಬೀರುತ್ತದೆ. ಮನೆಯಲ್ಲಿಯೇ ಸುಲಭವಾಗಿ ಫೇಸ್ಪ್ಯಾಕ್ ಹಾಕಿ ನೋವಿಲ್ಲದೆ ಈ ಕೂದಲನ್ನು ತೆಗೆಯಬಹುದು.

ಫೇಸ್ ಪ್ಯಾಕ್ ಹಚ್ಚುವ ಮೊದಲು ಮುಖವನ್ನು ಚೆನ್ನಾಗಿ ತೊಳೆದುಕೊಳ್ಳಿ. ಈ ಪೇಸ್ಟ್ ಗಳನ್ನು ಹಚ್ಚುವಾಗ ಯಾವುದೇ ಅಲರ್ಜಿ ಅಥವಾ ತುರಿಕೆ ಕಂಡುಬಂದಲ್ಲಿ ತಕ್ಷಣ ನೀರಿನಿಂದ ಮುಖವನ್ನು ತೊಳೆಯಿರಿ.

**ಕಿತ್ತಳೆ ಸಿಪ್ಪೆ ಪುಡಿ ಸ್ಕ್ರಬ್:** ಶ್ರೀಗಂಧದ ಪುಡಿ 1 ಚಮಚ, ಕಿತ್ತಳೆ ಸಿಪ್ಪೆ ಪುಡಿ - 1 ಚಮಚ, ರೋಸ್ ವಾಟರ್ 1 ಚಮಚ, ನಿಂಬೆ ರಸ 1 ಚಮಚ ಇವೆಲ್ಲವನ್ನೂ ಒಟ್ಟಿಗೆ ಬೆರೆಸಿ ಪೇಸ್ಟ್ ಮಾಡಿ. ನಂತರ ಅದನ್ನು ನಿಮ್ಮ ಮುಖಕ್ಕೆ ಹಚ್ಚಿಕೊಳ್ಳಿ. 15 ನಿಮಿಷಗಳ ನಂತರ ನಿಧಾನವಾಗಿ ಬೆಚ್ಚಗಿನ ನೀರಿನಲ್ಲಿ ತೊಳೆಯಿರಿ.

ಕಾಮಕಸ್ತೂರಿ ಬೀಜಗಳನ್ನು ಬಳಸಿ ಸಹ ಫೇಸ್ ಪ್ಯಾಕ್ ತಯಾರಿಸಬಹುದು.

ಅಗತ್ಯವಿರುವ ಸಾಮಗ್ರಿಗಳು, ಕೆನೆರಹಿತ ಹಾಲು 2 ಚಮಚ, ಕಾಮಕಸ್ತೂರಿ ಬೀಜಗಳು 1 ಚಮಚ, ಹನಿ ಮತ್ತು ಓಟ್ಸ್ ಪೌಡರ್ - 1 ಚಮಚ.

ಮೊದಲು ಕಾಮಕಸ್ತೂರಿ ಬೀಜಗಳನ್ನು ಹಾಲಿನಲ್ಲಿ 10 ನಿಮಿಷಗಳ ಕಾಲ ನೆನೆಸಿ. ಕಾಮಕಸ್ತೂರಿ ಬೀಜಗಳು ಮೃದುವಾಗುತ್ತವೆ. ನಂತರ ಇದಕ್ಕೆ ಓಟ್ಸ್ ಪುಡಿ ಮತ್ತು ಜೇನುತುಪ್ಪ ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಇದನ್ನು ಮುಖದ ಮೇಲೆ ಹಚ್ಚಿ ಒಣಗಲು ಬಿಡಿ. ಒಣಗಿದ ನಂತರ ಅದನ್ನು ಕೈಯಿಂದ ನಿಧಾನವಾಗಿ ಮಸಾಜ್ ಮಾಡಿ ನಂತರ ಸ್ಕ್ರಬ್ ತೆಗೆದು ಮುಖವನ್ನು ತೊಳೆದುಕೊಳ್ಳಿ. ಇದನ್ನು ವಾರಕ್ಕೊಮ್ಮೆ ಬಳಸುವುದರಿಂದ ಮುಖದ ಮೇಲೆ ಕಲೆಗಳು ಕ್ರಮೇಣ ಕಡಿಮೆಯಾಗುತ್ತದೆ ಮತ್ತು ಮುಖ ಹೆಚ್ಚು ಕಾಂತಿಯುಕ್ತವಾಗಿ ಕಾಣಿಸುತ್ತದೆ.

## ಆಕರ್ಷಕ ಉಗುರು ಪಡೆಯಲು ಇಲ್ಲಿದೆ ಟಿಪ್ಸ್

### ಬ್ಯೂಟಿ ಟಿಪ್ಸ್



ಸಾಮಾನ್ಯವಾಗಿ ಉದ್ದನೆಯ ಉಗುರು ಬೆಳೆಸಿ ಅದನ್ನು ಅಂದಗೊಳಿಸುವ ಕನಸು ಎಲ್ಲಾ ಮಹಿಳೆಯರಿಗೂ ಇರುತ್ತದೆ. ಆದರೆ ಅದು ಗೃಹಿಣಿಯರಿಗೆ ಮರೀಚಿಕೆಯಾಗಿ ಉಳಿಯುವುದೇ ಹೆಚ್ಚು. ಮನೆಯೊಳಗಿನ ಕೆಲಸದ ಗಡಿಬಿಡಿಯಲ್ಲಿ ಉಗುರು ತುಂಡಾಗುವುದೇ ಹೆಚ್ಚು. ಅಥವಾ ಒಗರಿನಂಥ ಬಣ್ಣಗಳಿಂದ ಅವುಗಳ ರೂಪ ಕೆಡುವುದೇ ಹೆಚ್ಚು.

**ಇದರ ನಿವಾರಣೆಗೆ ಹೀಗೆ ಮಾಡಿ:** ಬೀಟ್ ರೂಟ್, ಬಾಳೆಕಾಯಿಯಂಥ ತರಕಾರಿಗಳನ್ನು ಕತ್ತರಿಸುವಾಗ ಕೈಗೆ ಹ್ಯಾಂಡ್ ಗ್ಲೌಸ್ ಬಳಸಿ. ಆರಂಭದ ಕೆಲ ದಿನಗಳಲ್ಲಿ ಇದು ಕಷ್ಟ ಎನಿಸಿದರೂ ಕ್ರಮೇಣ ಅಭ್ಯಾಸವಾಗುತ್ತದೆ. ಮನೆ ಕೆಲಸ ಮುಗಿದ ಬಳಿಕ ಗ್ಲೌಸ್ ತೆಗೆದು ಕೈಗಳನ್ನು ಸ್ವಚ್ಛವಾಗಿ ತೊಳೆಯಿರಿ. ಕೈ ತೊಳೆಯುವಾಗ ಅತಿ ಬಿಸಿ ಅಥವಾ ತೀರಾ ತಣ್ಣಗಾದ ನೀರಿನ ಬಳಕೆ ಬೇಡ. ಉಗುರು ಬೆಚ್ಚಗಿನ ನೀರಿನಲ್ಲಿ ಕೈತೊಳೆದು ಹ್ಯಾಂಡ್ ಕ್ರೀಮ್ ಹಚ್ಚಿ. ಅಡುಗೆ ಮನೆಯಲ್ಲಿ ಲಿಂಬೆಹಣ್ಣು ಹಿಂಡಿದ ಬಳಿಕ ಉಳಿಯುವ ತುಂಡಿನಿಂದ ಉಗುರುಗಳಿಗೆ ಮಸಾಜ್ ಮಾಡಿ. ಇದರಿಂದ ಉಗುರಿನ ಸಂದಿನಲ್ಲಿ ಉಳಿದ ಕೊಳೆ ತೊಲಗಿ ಸ್ವಚ್ಛವಾಗುತ್ತದೆ. ನೈಲ್ ಪಾಲಿಶ್ ಖರೀದಿಸುವಾಗ ಗುಣಮಟ್ಟದ ಕಡೆಗೂ ಗಮನ ಕೊಡಿ. ಉತ್ತಮ ಬ್ರಾಂಡ್ ನ ಬಣ್ಣಗಳು ನಿಮ್ಮ ಉಗುರು ಮತ್ತಷ್ಟು ಆಕರ್ಷಕವಾಗಿ ಕಾಣುವಂತೆ ಮಾಡುತ್ತವೆ. ಬಣ್ಣ ಹಚ್ಚುವ ಮುನ್ನ ಉಗುರಿಗೆ ಬೇಸ್ ಕೋಟ್ ಹಾಕಿ. ಇವು ಉಗುರಿನ ಬಣ್ಣ ಬದಲಾಗಿದ್ದರೆ ಅದನ್ನು ಮರೆಮಾಚುತ್ತದೆ. ನೇಲ್ ಪಾಲಿಶ್ ರಿಮೂವರ್ ಬಳಸಿಯೇ ಹಳೆಯ ಬಣ್ಣ ತೆಗೆಯಿರಿ. ಕೆಲವೊಮ್ಮೆ ಪ್ರೊಟೀನ್ ಮತ್ತು ಕ್ಯಾಲ್ಸಿಯಂ ಕೊರತೆಯಿಂದ ಉಗುರು ತುಂಡಾಗುತ್ತಿರಬಹುದು. ಹೀಗಾಗಿ ಸೇವಿಸುವ ಆಹಾರದಲ್ಲಿ ಎಲ್ಲಾ ರೀತಿಯ ಪೌಷ್ಟಿಕಾಂಶಗಳು ಮತ್ತು ವಿಟಮಿನ್ ಗಳು ಇರುವಂತೆ ನೋಡಿಕೊಳ್ಳಿ.

## ರಾಷ್ಟ್ರೀಯ ನೇತ್ರದಾನ ಪಾಕ್ಷಿಕದ ಬಗ್ಗೆ ಜಾಗೃತಿ ಮೂಡಿಸಲು ವಾಕಥಾನ್




ರಾಷ್ಟ್ರೀಯ ನೇತ್ರದಾನ ಪಾಕ್ಷಿಕದ ಆಚರಣೆಯ ಸಂದರ್ಭದಲ್ಲಿ, ಡಾ.ಅಗರ್ವಾಲ್ಸ್ ಐ ಹಾಸ್ಪಿಟಲ್ ಇಂದು ಜೀವನವನ್ನು ಬದಲಾಯಿಸಬಹುದಾದ ನೇತ್ರದಾನದ ಪರಿಣಾಮದ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಒಂದು ವಾಕಥಾನ್ ಅನ್ನು ಆಯೋಜಿಸಿತ್ತು. ರಾಜಾಜಿನಗರದ ಅರಬಿಂದೋ ಶಾಲೆಯ 150ಕ್ಕೂ ಹೆಚ್ಚು ವಿದ್ಯಾರ್ಥಿಗಳು, ವೈದ್ಯರು ಮತ್ತು ಸಿಬ್ಬಂದಿಯೊಂದಿಗೆ ಮೆರವಣಿಗೆಯಲ್ಲಿ ಭಾಗವಹಿಸಿ ಸಮುದಾಯವನ್ನು ತಮ್ಮ ಕಣ್ಣುಗಳನ್ನು ದಾನ ಮಾಡಲು ಮತ್ತು ಅಗತ್ಯವಿರುವವರಿಗೆ ಅಮೂಲ್ಯವಾದ ದೃಷ್ಟಿಯ ಉಡುಗೊರೆಯನ್ನು ಒದಗಿಸಲು ಪ್ರೋತ್ಸಾಹಿಸಿದರು.

ಈ ಕಾರ್ಯಕ್ರಮವು ತಪ್ಪು ಕಲ್ಪನೆಗಳನ್ನು ತೊಡೆದುಹಾಕಲು ಮತ್ತು ವ್ಯಕ್ತಿಗಳು ತಮ್ಮ ಕಣ್ಣುಗಳನ್ನು ದಾನ ಮಾಡುವುದನ್ನು ತಡೆಯುವ ಅಡೆತಡೆಗಳನ್ನು ಪರಿಹರಿಸಲು ಪ್ರಯತ್ನಿಸಿತು. ವಿದ್ಯಾರ್ಥಿಗಳು ನೇತ್ರದಾನವನ್ನು ಉತ್ತೇಜಿಸುವ ಈ ಉದಾತ್ತ ಉದ್ದೇಶಕ್ಕಾಗಿ ಅವರ ಬದ್ಧತೆಯ ಸಂಕೇತವಾದ ಶಕ್ತಿಯುತ ಸಂದೇಶಗಳನ್ನು ಹೊಂದಿರುವ ಫಲಕಗಳನ್ನು ಹಿಡಿದಿದ್ದರು. ವಾಕಥಾನ್ ಗೆ ಬೆಂಗಳೂರು ಕೇಂದ್ರ ಬಿಜೆಪಿ ಜಿಲ್ಲಾಧ್ಯಕ್ಷರಾದ ಎ.ಆರ್.ಸಪ್ತಗಿರಿಗೌಡ, ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದ ಜಂಟಿ ನಿರ್ದೇಶಕಿಯಾದ (ವೈದ್ಯಕೀಯ) ಡಾ.ರಜನಿ ಎಂ.ರಜನಿ ಚಾಲನೆ ನೀಡಿದರು. ಎ.ಆರ್. ಸಪ್ತಗಿರಿ ಗೌಡ ಅವರು ಈ ಉಪಕ್ರಮದ ಮಹತ್ವವನ್ನು ಒತ್ತಿ ಹೇಳುತ್ತ, ಡಾ.ಅಗರ್ವಾಲ್ಸ್ ಕಣ್ಣಿನ ಆಸ್ಪತ್ರೆಯ ಈ ಉದಾತ್ತ ಪ್ರಯತ್ನದ ಭಾಗವಾಗಿರುವುದು ನಿಜವಾಗಿಯೂ ಗೌರವವಾಗಿದೆ. ನೇತ್ರದಾನವು ದೃಷ್ಟಿಯ ಅಮೂಲ್ಯ ಉಡುಗೊರೆಯನ್ನು ನೀಡುವ ಮೂಲಕ ಜೀವನವನ್ನು ಪರಿವರ್ತಿಸುವ ಶಕ್ತಿಯನ್ನು ಹೊಂದಿರುವ ಒಂದು ಉದಾತ್ತವಾದ ಕ್ರಿಯೆಯಾಗಿದೆ. ವಿಶೇಷವಾಗಿ ಅರಬಿಂದೋ ಶಾಲೆಯ ಸಹಯೋಗದೊಂದಿಗೆ ನಡೆದ ಆಸ್ಪತ್ರೆಯ ಪ್ರಯತ್ನಗಳು, ಉತ್ತಮ ದೃಷ್ಟಿಯ ಆರೋಗ್ಯವನ್ನು ಹೊಂದಿರುವ ಸಮಾಜವನ್ನು ನಿರ್ಮಿಸುವ ಹಂಚಿಕೊಂಡ ಜವಾಬ್ದಾರಿಯನ್ನು ಪ್ರದರ್ಶಿಸುತ್ತದೆ. ಜಂಟಿ ನಿರ್ದೇಶಕಿಯಾದ (ವೈದ್ಯಕೀಯ) ಡಾ.ರಜನಿ ಎಂ., ಹೇಳಿದರುಜಾಗೃತಿ ಮೂಡಿಸುವುದು ಮಿಥ್ಯೆಗಳನ್ನು ತೊಡೆದುಹಾಕುವುದು ಮತ್ತು ಹೆಚ್ಚಿನ ಜನರು ತಮ್ಮ ಕಣ್ಣುಗಳನ್ನು ದಾನ ಮಾಡಲು ಪ್ರೋತ್ಸಾಹಿಸುವ ಮೊದಲ ಹೆಜ್ಜೆಯಾಗಿದೆ. ಶಿಕ್ಷಣ ಮತ್ತು ಸಂದೇಶಗಳ ಮೂಲಕ, ನಾವು ಅಂತರವನ್ನು ಕಡಿಮೆ ಮಾಡಬಹುದು ಮತ್ತು ಅಕ್ಷಿಪಟಲದ ಕಸಿಯ ಅಗತ್ಯವಿರುವವರಿಗೆ ಈ ಜೀವನವನ್ನು ಬದಲಾಯಿಸುವ ಚಿಕಿತ್ಸೆ ಲಭ್ಯವಿರುವುದನ್ನು ಖಚಿತಪಡಿಸಿಕೊಳ್ಳಬಹುದು. ಈ ಉದ್ದೇಶವನ್ನು ಬೆಂಬಲಿಸಲು ಮತ್ತು ದೃಷ್ಟಿಯನ್ನು ಪುನಃಸ್ಥಾಪಿಸುವ ಈ ಕಾರ್ಯಾಚರಣೆಯ ಭಾಗವಾಗುವಂತೆ ನಾನು ಪ್ರತಿಯೊಬ್ಬರನ್ನು ಪ್ರೋತ್ಸಾಹಿಸುತ್ತೇನೆ.

ರಾಷ್ಟ್ರೀಯ ಅಂಧತ್ವ ಮತ್ತು ದೃಷ್ಟಿ ದೌರ್ಬಲ್ಯ ಸಮೀಕ್ಷೆ 2015-2019ರ ಪ್ರಕಾರ, 50 ವರ್ಷಕ್ಕಿಂತ ಮೇಲ್ಪಟ್ಟ ಭಾರತದ ಜನಸಂಖ್ಯೆಯ 1.99% ಜನರು ಕುರುಡುತನದಿಂದ ಬಳಲುತ್ತಿದ್ದು, ಇದು ನೇತ್ರದಾನವನ್ನು ಬಹಳ ಮುಖ್ಯವಾದ ಸಾರ್ವಜನಿಕ ಆರೋಗ್ಯ ಉಪಕ್ರಮವಾಗಿಸುತ್ತದೆ. 1975ರಲ್ಲಿ ಸ್ಥಾಪನೆಯಾದ ಡಾ.ಅಗರ್ವಾಲ್ಸ್ ಐ ಬ್ಯಾಂಕ್ 30,000ಕ್ಕೂ ಹೆಚ್ಚು ಅಕ್ಷಿಪಟಲಗಳನ್ನು ಕಸಿ ಮಾಡಿದೆ ಮತ್ತು ಜಾಗೃತಿ ಅಭಿಯಾನಗಳು, ಶಿಕ್ಷಣ ಮತ್ತು ಆನ್ ಲೈನ್ ನೋಂದಣಿಯ ಮೂಲಕ ನೇತ್ರದಾನವನ್ನು ಉತ್ತೇಜಿಸುವಲ್ಲಿ ಮುಂಚೂಣಿಯಲ್ಲಿದೆ.

ಬೆಂಗಳೂರಿನ ಡಾ.ಅಗರ್‌ವಾಲ್ ಐ ಹಾಸ್ಪಿಟಲ್‌ನ ರೆಟಿನಾ ಸರ್ವೀಸಸ್‌ನ ಪ್ರಾದೇಶಿಕ ಮುಖ್ಯಸ್ಥರಾದ ಡಾ.ರಾಕೇಶ್ ಎಸ್ ಮಾತನಾಡಿ ಹೇಳಿದರು, ನೇತ್ರದಾನಕ್ಕೆ ಇರುವ ಅಡೆತಡೆಗಳನ್ನು ನಿವಾರಿಸಲು ಜ್ಞಾನ ಮತ್ತು ಶಿಕ್ಷಣ ಪ್ರಮುಖವಾಗಿದೆ. ಈ ಅಡೆತಡೆಗಳಲ್ಲಿ ಅಕ್ಷಿಪಟಲಗಳ ಬಳಕೆಯಲ್ಲಿ ಪಾರದರ್ಶಕತೆಯ ಬಗೆಗಿನ ಆತಂಕ, ಕುಟುಂಬದ ಒಪ್ಪಿಗೆಯ ಕೊರತೆ, ದೇಹವನ್ನು ಹಾಗೇ ಉಳಿಸಿಕೊಳ್ಳುವ ಬಗೆಗಿನ ಸಾಂಸ್ಕೃತಿಕ ನಂಬಿಕೆಗಳು ಮತ್ತು ದಾನದ ಪ್ರಕ್ರಿಯೆಯಲ್ಲಿ ದೇಹವನ್ನು ಹೇಗೆ ನಡೆಸಿಕೊಳ್ಳಲಾಗುತ್ತದೆನ್ನುವ ಬಗೆಗಿನ ಭಯಗಳು ಸೇರಿವೆ. ಪ್ರತಿ ದಾನಿಯೊಂದಿಗೆ, ನಾವು ನಾಲ್ಕು ವ್ಯಕ್ತಿಗಳ ಜೀವನವನ್ನು ಸುಧಾರಿಸಬಹುದು, ಏಕೆಂದರೆ ಪ್ರತಿ ಅಕ್ಷಿಪಟಲವೂ ಇಬ್ಬರ ದೃಷ್ಟಿಯನ್ನು ಪುನಃಸ್ಥಾಪಿಸಬಹುದು. ಪ್ರತಿಯೊಬ್ಬರೂ ಈ ಹೆಜ್ಜೆಯನ್ನು ತೆಗೆದುಕೊಳ್ಳುವಂತೆ ನಾವು ಪ್ರೋತ್ಸಾಹಿಸುತ್ತೇವೆ ಮತ್ತು ಅಗತ್ಯವಿರುವವರಿಗೆ ಪ್ರಯೋಜನವಾಗುವಂತೆ ತಮ್ಮ ಕಣ್ಣುಗಳನ್ನು ದಾನ ಮಾಡುತ್ತೇವೆ. ಡಾ.ಅಗರ್ವಾಲ್ ಐ ಹಾಸ್ಪಿಟಲ್‌ನ ಡಾ.ಅಮರ್ ಅಗರ್ವಾಲ್ ಅವರ ಮುಂದಾಳತ್ವದಲ್ಲಿ ಪ್ರಿ ಡೆಸ್ಸೆಮೆಟ್ ಎಂಡೋಥೆಲಿಯಲ್ ಕೆರಾಟೊಪ್ಲಾಸ್ಟಿಯಂಥ (ಪಿಡಿಇಕೆ) ಸುಧಾರಿತ ಕಾರ್ನಿಯಲ್ ಕಸಿ ತಂತ್ರಗಳನ್ನು ಪರಿಚಯಿಸುತ್ತಿದೆ, ಇದು ಕಸಿಯ ನಂತರ ರೋಗಿಗಳ ದೃಷ್ಟಿಯನ್ನು ಸುಧಾರಿಸುವಲ್ಲಿ ಗಮನಾರ್ಹ ಯಶಸ್ಸನ್ನು ಸಾಧಿಸಿದೆ. ವಾಕಥಾನ್ ನಂತರ, ಕಣ್ಣಿನ ಆರೋಗ್ಯವನ್ನು ಮತ್ತಷ್ಟು ಉತ್ತೇಜಿಸಲು ಮತ್ತು ನೇತ್ರದಾನದ ಪ್ರತಿಜ್ಞೆಗಳನ್ನು ಹೆಚ್ಚಿಸಲು ಆಸ್ಪತ್ರೆಯು ಜಾಗೃತಿ ಕಾರ್ಯಕ್ರಮಗಳು, ಶೈಕ್ಷಣಿಕ ಕಾರ್ಯಕ್ರಮಗಳು ಮತ್ತು ಕುರುಡುತನ ತಪಾಸಣೆಗಳನ್ನು ಯೋಜಿಸಿದೆ. ಒಟ್ಟಾಗಿ, ನಾವು ವ್ಯತ್ಯಾಸವನ್ನು ಮಾಡಬಹುದು. ನಾವು ಎನ್ನುವುದು ನನು ಎನ್ನುವುದರ ಮುಂದೆ ಬಂದಾಗ, ಮಾನವೀಯತೆ ಮುಂದುವರಿಯುತ್ತದೆ. ಡಾ.ಅಗರ್ವಾಲ್ಸ್ ಐ ಹಾಸ್ಪಿಟಲ್ ಪ್ರತಿಯೊಬ್ಬರೂ ತಮ್ಮ ಕಣ್ಣುಗಳನ್ನು ದಾನ ಮಾಡಿ ಅಗತ್ಯವಿರುವವರಿಗೆ ದೃಷ್ಟಿಯನ್ನು ಮರಳಿ ನೀಡಲು ಸಹಾಯ ಮಾಡಲು ಒತ್ತಾಯಿಸುತ್ತದೆ.



ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ-9964739507

www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಅಧಿಕ ಲಾಭ, ಅನಾವಶ್ಯಕ ಖರ್ಚುಗಳು, ಉದ್ಯೋಗದಲ್ಲಿ ಬಡ್ತಿ, ಮಿತ್ರರಿಂದ ದ್ರೋಹ ಎಚ್ಚರ.

**ವೃಷಭ:** ಇಷ್ಟ ವಸ್ತುಗಳ ಖರೀದಿ, ಸ್ಥಗಿತ ಕಾರ್ಯಗಳು ಮುನ್ನಡೆ, ಉದ್ಯೋಗದಲ್ಲಿ ಹೆಚ್ಚಿನ ಜವಾಬ್ದಾರಿ, ಆರೋಗ್ಯ ವೃದ್ಧಿ.

**ಮಿಥುನ:** ಅತಿಯಾದ ನಿದ್ರೆ, ದುಡುಕು ಸ್ವಭಾವ, ಪಾಪ ಬುದ್ಧಿ, ವಾಹನದಿಂದ ತೊಂದರೆ, ಸಣ್ಣ ವಿಷಯಕ್ಕೆ ಭಿನ್ನಾಭಿಪ್ರಾಯ.

**ಕಟಕ:** ಕ್ರಯ ವಿಕ್ರಯಗಳಿಂದ ಲಾಭ, ಚಂಚಲ ಮನಸ್ಸು, ಮಿತ್ರರ ಭೇಟಿ,ವೈಯಕ್ತಿಕ ಕೆಲಸಗಳನ್ನು ಅಲಕ್ಷಿಸಬೇಡಿ.

**ಸಿಂಹ:** ಆದಾಯದ ಮೂಲ ಹೆಚ್ಚಳ, ವ್ಯವಹಾರದಲ್ಲಿ ಆಪ್ತರ ಹಿತನುಡಿ, ಸ್ತ್ರೀ ಲಾಭ, ವಿದ್ಯಾರ್ಥಿಗಳಲ್ಲಿ ಶ್ರದ್ಧೆ.

**ಕನ್ಯಾ:** ಬಿಡುವಿಲ್ಲದ ಕೆಲಸ, ಮತ್ತೊಬ್ಬರ ವಿಷಯದಲ್ಲಿ ಜಾಗ್ರತೆ, ವಿದ್ಯಾರ್ಥಿಗಳಲ್ಲಿ ಪ್ರಶಂಸೆ, ತೀರ್ಥಯಾತ್ರೆ.

**ತುಲಾ:** ವಿವೇಚನೆಯಿಲ್ಲದೆ ಮಾತನಾಡಬೇಡಿ, ಮಾನಸಿಕ ಗೊಂದಲ, ಆರೋಗ್ಯದಲ್ಲಿ ಏರುಪೇರು, ಅಭಿವೃದ್ಧಿ ಕುಂಠಿತ.

**ವೃಶ್ಚಿಕ:** ಆರೋಗ್ಯದ ಕಾಳಜಿ, ವಿಪರೀತವ್ಯಸನ, ಕೃಷಿಕರಿಗೆ ಲಾಭ, ಬೇಡದ ವಿಷಯಗಳಿಂದ ದೂರವಿರಿ.

**ಧನಸ್ಸು:** ನಿರೀಕ್ಷಿತ ಆದಾಯ, ಬಡ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು, ಮನಶಾಂತಿ, ವಿದೇಶ ಯಾನ, ಪ್ರಧಾನ ವ್ಯಕ್ತಿಗಳ ಭೇಟಿ.

**ಮಕರ:** ಮಾತಿನಿಂದ ಕಲಹ, ಸಾಮಾನ್ಯ ಸೌಖ್ಯಕ್ಕೆ ಧಕ್ಕೆ, ಮಿತ್ರ ವಿರೋಧ, ಪರಸ್ಥಳವಾಸ, ದೈವಾನುಗ್ರಹದಿಂದ ಅನುಕೂಲ.

**ಕುಂಭ:** ಅನಾವಶ್ಯಕ ದುಂದು ವೆಚ್ಚ, ಉದ್ಯೋಗದಲ್ಲಿ ಬಡ್ತಿ, ಹೆಚ್ಚು ಶ್ರಮ ಅಲ್ಪ ಗಳಿಕೆ, ನಾನಾ ವಿಚಾರಗಳಲ್ಲಿ ಆಸಕ್ತಿ.

**ಮೀನ:** ಇತರರ ಮಾತಿಗೆ ಮರುಳಾಗಬೇಡಿ, ಮಾತಿನ ಭರಾಟೆ, ಉದ್ಯೋಗದಲ್ಲಿ ಕಿರಿಕಿರಿ, ವಿದ್ಯಾರ್ಥಿಗಳಲ್ಲಿ ಪ್ರತಿಭೆ.

## ಲೈಬ್ರರಿಗಳ ನೆನಪಿನ ದಿನ

ಲೈಬ್ರರೀಸ್ ರಿಮೆಂಬರ್ ಡೇ ಅನ್ನು ವಾರ್ಷಿಕವಾಗಿ ಸೆಪ್ಟೆಂಬರ್ 11 ರಂದು ಸಮಾಜ ಕಲ್ಯಾಣದಲ್ಲಿ ಸಾರ್ವಜನಿಕ ಗ್ರಂಥಾಲಯಗಳ ಪಾತ್ರವನ್ನು ಗುರುತಿಸಲು ಆಚರಿಸಲಾಗುತ್ತದೆ. ಸಾರ್ವಜನಿಕ ಗ್ರಂಥಾಲಯವು ಕಲಿಕೆಯ ಸ್ಥಳವಾಗಿದೆ, ಅಲ್ಲಿ ಯಾರಾದರೂ ಸಣ್ಣ ಶುಲ್ಕವನ್ನು ಪಾವತಿಸುವ ಮೂಲಕ ಸದಸ್ಯರಾಗಬಹುದು. ಲೈಬ್ರರಿಗಳು ಆನ್ಲೈನ್ನಲ್ಲಿ ಮಾಹಿತಿಯನ್ನು ಪ್ರವೇಶಿಸಲು, ಪುಸ್ತಕಗಳನ್ನು ಓದಲು ಮತ್ತು ಅನ್ವೇಷಿಸಲು, ಟಿಪ್ಪಣಿಗಳನ್ನು ತೆಗೆದುಕೊಳ್ಳಲು ಮತ್ತು ಕಲಿಕೆ ಮತ್ತು ತಿಳಿದುಕೊಳ್ಳುವುದರ ಸುತ್ತ ಕೇಂದ್ರೀಕೃತವಾಗಿರುವ ಸಮುದಾಯಗಳನ್ನು ರೂಪಿಸಲು ನಮಗೆ ಅನುಮತಿಸುತ್ತದೆ. ಗ್ರಂಥಾಲಯಗಳು ಜ್ಞಾನದ ಉಗ್ರಾಣವಾಗಿದೆ ಮತ್ತು ಅವರು ತಮ್ಮ ವಯಸ್ಸು ಅಥವಾ ಹಿನ್ನೆಲೆಯ ಹೊರತಾಗಿಯೂ ಎಲ್ಲರಿಗೂ ಸಮಾನ ಕಲಿಕೆಯ ಅವಕಾಶಗಳನ್ನು ಬೆಂಬಲಿಸುತ್ತಾರೆ. ಓದುವ ಅಭ್ಯಾಸವನ್ನು ಬೆಳೆಸುವಲ್ಲಿ ಮತ್ತು ನಮಗೆ ತಿಳಿದಿಲ್ಲದ ಪ್ರಶ್ನೆಗಳಿಗೆ ಉತ್ತರಗಳನ್ನು ಹುಡುಕುವಲ್ಲಿ ಗ್ರಂಥಾಲಯಗಳು ನಿರ್ಣಾಯಕ ಪಾತ್ರವನ್ನು ವಹಿಸುತ್ತವೆ. ಸೆಪ್ಟೆಂಬರ್ 9, 2001 ರಂದು ಅವಳಿ ಗೋಪುರಗಳ ಮೇಲಿನ ಭೀಕರ ದಾಳಿಯ ನಂತರ, ಬಲಿಪಶುಗಳನ್ನು ಹೇಗೆ ನೆನಪಿಸಿಕೊಳ್ಳುವುದು ಮತ್ತು ಅವರ ಸ್ಮರಣೆಯನ್ನು ಹೇಗೆ ಗೌರವಿಸುವುದು ಎಂಬುದರ ಕುರಿತು ಅದರ ಹತ್ತನೇ ವಾರ್ಷಿಕೋತ್ಸವದ ಕುರಿತು ಮಾತುಕತೆಗಳು ನಡೆದವು. ವರ್ಲ್ಡ್ ಟ್ರೇಡ್ ಸೆಂಟರ್ ಇರುವ ಸ್ಥಳದಲ್ಲಿ ಸಾರ್ವಜನಿಕ ಗ್ರಂಥಾಲಯವನ್ನು ನಿರ್ಮಿಸುವುದು ಅತ್ಯಂತ ಸೂಕ್ತವಾದ ಸ್ಮಾರಕವಾಗಿದೆ ಎಂಬುದು ಸ್ಪಷ್ಟವಾಗಿ ತೋರುತ್ತಿದೆ. ಗ್ರಂಥಾಲಯಗಳು ಜ್ಞಾನವನ್ನು ಪ್ರತಿನಿಧಿಸುತ್ತವೆ ಮತ್ತು ಆ ಜ್ಞಾನಕ್ಕೆ ಸಮಾನ ಪ್ರವೇಶ. ಅವರು ಅಭಿವ್ಯಕ್ತಿ ಸ್ವಾತಂತ್ರ್ಯ, ವೈವಿಧ್ಯತೆಯ ಆಚರಣೆ, ಪರಂಪರೆಯ ಸಂರಕ್ಷಣೆ ಮತ್ತು ಭವಿಷ್ಯದ ಭರವಸೆಗಾಗಿ ಸಹ ನಿಲ್ಲುತ್ತಾರೆ. ಭಯೋತ್ಪಾದನೆ, ದ್ವೇಷ, ಧರ್ಮಾಂಧತೆ ಮತ್ತು ಮತಾಂಧತೆಯ ವಿರುದ್ಧ ದೃಢವಾಗಿ ನಿಂತಿರುವ ಎಲ್ಲವನ್ನೂ ಗ್ರಂಥಾಲಯ ಪ್ರತಿನಿಧಿಸುತ್ತದೆ. ಹೀಗಾಗಿ, ಸೆಪ್ಟೆಂಬರ್ 11 ರಂದು ಅಮೆರಿಕ ತನ್ನ ಸಾರ್ವಜನಿಕ ಗ್ರಂಥಾಲಯಗಳನ್ನು ಆಚರಿಸಲು ನಿರ್ಧರಿಸಲಾಯಿತು. ಪ್ರಾಚೀನ ಕಾಲದಿಂದಲೂ ಗ್ರಂಥಾಲಯಗಳು ನಮ್ಮ ಸಾಮಾಜಿಕ ರಚನೆಯ ಒಂದು ಭಾಗವಾಗಿದೆ. ಮೊದಲ ಗ್ರಂಥಾಲಯವು 2600 ಃಅ ಯಲ್ಲಿದೆ. ಅಂದಿನಿಂದ ಪ್ರತಿಯೊಂದು ಪ್ರಮುಖ ನಾಗರಿಕತೆಯು ತನ್ನ ಇತಿಹಾಸದ ದಾಖಲೆಗಳನ್ನು ಆರ್ಕೈವ್ಗಳಲ್ಲಿ ಇರಿಸಿದೆ, ಅದನ್ನು ಗ್ರಂಥಾಲಯಗಳಲ್ಲಿ ಇರಿಸಲಾಗಿದೆ. ಪ್ರಬಲ ಚಕ್ರವರ್ತಿಗಳ ಮತ್ತು ಆಡಳಿತಗಾರರ ಗ್ರಂಥಾಲಯಗಳು ನಮಗೆ ಕೆಲವು ಪ್ರಸಿದ್ಧ ಸಾಹಿತ್ಯ ಕೃತಿಗಳನ್ನು ನೀಡಿವೆ.

ಲೈಬ್ರರೀಸ್ ರಿಮೆಂಬರ್ ಡೇ ಅನ್ನು ಸಂವಹನವನ್ನು ಸುಗಮಗೊಳಿಸುವ ಮೂಲಕ, ಪೌರತ್ವವನ್ನು ಬೆಳೆಸುವ ಮೂಲಕ, ತಿಳುವಳಿಕೆಯನ್ನು ಉತ್ತೇಜಿಸುವ ಮೂಲಕ, ಮಾಹಿತಿಯ ಪ್ರವೇಶದ ಸ್ವಾತಂತ್ರ್ಯವನ್ನು ಖಾತರಿಪಡಿಸುವ ಮೂಲಕ ಮತ್ತು ಸ್ವಾತಂತ್ರ್ಯ ಮತ್ತು ನಿರ್ಭಯತೆಯ ಸಂಕೇತವಾಗಿ ಪ್ರತಿಯೊಬ್ಬರನ್ನು ಗ್ರಂಥಾಲಯಗಳಿಗೆ ಸ್ವಾಗತಿಸುವ ಮೂಲಕ ಆಚರಿಸಲಾಗುತ್ತದೆ. ಸೆಪ್ಟೆಂಬರ್ 11, 2001 ರ ದುರಂತದ ಬಲಿಪಶುಗಳ ಸ್ಮರಣಾರ್ಥವಾಗಿ, ಲೈಬ್ರರೀಸ್ ರಿಮೆಂಬರ್ ಡೇ ಅನ್ನು ಸಾರ್ವಜನಿಕ ಗ್ರಂಥಾಲಯಗಳು ಮುಕ್ತ ಸಮಾಜದ ಸಂರಕ್ಷಣೆಯಲ್ಲಿ ವಹಿಸುವ ಪಾತ್ರವನ್ನು ಆಚರಿಸುತ್ತವೆ. ಅಮೆರಿಕಾದಾದ್ಯಂತ ಅನೇಕ ಸಾರ್ವಜನಿಕ ಗ್ರಂಥಾಲಯಗಳು ಈ ದಿನದಂದು ಸಂಪೂರ್ಣ 24 ಗಂಟೆಗಳ ಕಾಲ ತೆರೆದಿರುತ್ತವೆ.

ಸಂಜೆ ಮುಗಿಲು
ಬುಧವಾರ
11.9.2024



# ಅಮೆರಿಕಾದಲ್ಲಿ ಡಿಕೆಶಿ - ರಾಗಾ ಭೇಟಿ!

**ಅಮೆರಿಕ:** ಅಮೆರಿಕ ಪ್ರವಾಸದಲ್ಲಿರುವ ಡಿಸಿಎಂ ಡಿಕೆ ಶಿವಕುಮಾರ್, ಕಾಂಗ್ರೆಸ್ ಪಕ್ಷದ ವರಿಷ್ಠ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರೊಂದಿಗೆ ವಾಷಿಂಗ್ಟನ್ ನಲ್ಲಿ ಕಾಣಿಸಿಕೊಂಡಿದ್ದಾರೆ. ಇದು ಕೇವಲ ವಯಕ್ತಿಕ ಪ್ರವಾಸ,ಯಾವುದೇ ರಾಜಕೀಯ ಉದ್ದೇಶಗಳು ಇಲ್ಲ ಎಂದು ಹೇಳಿದ್ದ ಡಿಕೆ ಶಿವಕುಮಾರ್ ಇದೀಗ ರಾಗಾ ರನ್ನ ಭೇಟಿ ಮಾಡಿರುವುದು ಕುತೂಹಲ ಹೆಚ್ಚಿಸಿದೆ.

ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ಅವರ ಪತ್ನಿ ಉಷಾ ಅವರು ಅಮೇರಿಕಾದ ವಾಷಿಂಗ್ಟನ್ ನಲ್ಲಿ ರಾಹುಲ್ ಗಾಂಧಿಯವರನ್ನ ಭೇಟಿ ಮಾಡಿದ್ದಾರೆ. ರಾಜ್ಯದಲ್ಲಿ ಮೂಡ ಪ್ರಕರಣದಲ್ಲಿ ಇಷ್ಟೆಲ್ಲಾ ಪ್ರಮುಖ ರಾಜಕೀಯ ಬೆಳವಣಿಗೆಗಳು ಸಂಭವಿಸುತ್ತಿರುವ ಸಂದರ್ಭದಲ್ಲಿ ಡಿಕೆ ಶಿವಕುಮಾರ್ ರ ಈ ಅಮೆರಿಕ ಪ್ರವಾಸ ಮತ್ತು ರಾಹುಲ್ ಗಾಂಧಿ ಭೇಟಿ ಚರ್ಚೆಗೆ ಗ್ರಾಸವಾಗಿದೆ.

ಈ ಹಿಂದೆ ಅಮೆರಿಕಾದ ಅಧ್ಯಕ್ಷೀಯ ಚುನಾವಣೆಯ ಅಭ್ಯರ್ಥಿ ಕಮಲಾ ಹ್ಯಾರಿಸ್ ರ ಆಹ್ವಾನದ ಮೇರೆಗೆ ಡಿಸಿಎಂ ಡಿಕೆ ಶಿವಕುಮಾರ್ ಅಮೆರಿಕಾಗೆ ತೆರಳಿದ್ದಾರೆ ಎಂದು ಹೇಳಲಾಗಿತ್ತಾದರೂ, ಈ ವದಂತಿಗಳನ್ನು ಡಿಕೆ ಶಿವಕುಮಾರ್ ತಳ್ಳಿ ಹಾಕಿದ್ದರು ಮತ್ತು ಇದೊಂದು ಕೇವಲ ವಯಕ್ತಿಕ ಪ್ರವಾಸ ಎಂಬ ಸಮಜಾಯಿಶಿ ನೀಡಿದ್ದರು. ಇದೀಗ ವಾಷಿಂಗ್ಟನ್ ನಲ್ಲಿ ರಾಹುಲ್ ಗಾಂಧಿಯವರನ್ನ ಭೇಟಿ ಮಾಡಿರುವುದು ಕುತೂಹಲಕ್ಕೆ ಕಾರಣವಾಗಿದೆ.



# ಭೂಮಿಯತ್ತ ಶರವೇಗದಲ್ಲಿ ಧಾವಿಸುತ್ತಿರುವ ಕ್ಷುದ್ರಗ್ರಹ

**ವಾಷಿಂಗ್ಟನ್:** ಬೃಹತ್ ಕ್ಷುದ್ರಗ್ರಹವೊಂದು ಭೂಮಿಯತ್ತ ಶರವೇಗದಲ್ಲಿ ಧಾವಿಸುತ್ತಿದೆ ಎಂದು ಅಮೆರಿಕದ ಬಾಹ್ಯಾಕಾಶ ಸಂಶೋಧನಾ ಕೇಂದ್ರ ನಾಸಾ ಮಾಹಿತಿ ನೀಡಿದೆ. 2024 ಒಎನ್ ಎಂದು ಹೆಸರಿಸಿರುವ ಈ ಕ್ಷುದ್ರಗ್ರಹ 60 ಅಂತಸ್ತಿನ ಕಟ್ಟಡದಷ್ಟು ಅಥವಾ ಸುಮಾರು 2 ಫುಟ್ಬಾಲ್ ಮೈದಾನಗಳ ಗಾತ್ರವನ್ನು ಹೊಂದಿದ್ದು ಗಂಟೆಗೆ 40,235 ಕಿ.ಮೀ ವೇಗದಲ್ಲಿ ಭೂಮಿಯತ್ತ ಧಾವಿಸುತ್ತಿದ್ದು 2024ರ ಸೆಪ್ಟಂಬರ್ 15ರಂದು ಭೂಮಿಯ ಅತ್ಯಂತ ನಿಕಟದಲ್ಲಿ ಹಾದುಹೋಗಲಿದೆ ಎಂದು ನಾಸಾ ವಿಜ್ಞಾನಿಗಳು ಹೇಳಿದ್ದಾರೆ. 2024ರ ಸೆಪ್ಟಂಬರ್ 5ರಂದು ಜಿ.ಬೊರಿಸೋವ್ ಪತ್ತೆಹಚ್ಚಿರುವ ಕ್ಷುದ್ರಗ್ರಹ ಸೆಪ್ಟಂಬರ್ 15ರಂದು ಭೂಮಿಯ ಸುಮಾರು 6,20,000 ಮೈಲು ಸನಿಹದಲ್ಲಿ ಹಾದುಹೋಗಲಿದೆ.



ಕ್ಯಾಲಿಫೋರ್ನಿಯಾದಲ್ಲಿರುವ ನಾಸಾದ ಜೆಟ್ ಪ್ರೊಪಲ್ಷನ್ ಲ್ಯಾಬರೇಟರಿ ಕ್ಷುದ್ರಗ್ರಹದ ಪಥವನ್ನು ನಿಕಟವಾಗಿ ಗಮನಿಸುತ್ತಿದೆ. ಇದು ಭೂಮಿಗೆ ಅಪ್ಪಳಿಸುವ ಸಾಧ್ಯತೆ ಕನಿಷ್ಟವಾಗಿದೆ ಎಂದು ನಾಸಾ ಹೇಳಿದೆ.

## ದೇಶದ ಚುನಾವಣೆ ಮೇಲೆ ಬಿಜೆಪಿ, ಮೋದಿ ನಿಯಂತ್ರಣ

**ವಾಷಿಂಗ್ಟನ್:** ಬಿಜೆಪಿ ಬಯಸಿದಂತೆ ಚುನಾವಣ ಆಯೋಗ ಚುನಾವಣೆಯನ್ನು ನಡೆಸಿತು ಎಂದು ವಿಪಕ್ಷ ನಾಯಕ ರಾಹುಲ್ ಗಾಂಧಿ ಮಂಗಳವಾರ ಗಂಭೀರ ಆರೋಪ ಮಾಡಿದ್ದಾರೆ.ಭಾರತದಲ್ಲಿ ಇತ್ತೀಚೆಗೆ ನಡೆದ ಲೋಕಸಭೆ ಚುನಾವಣೆಯು ಸಂಪೂರ್ಣವಾಗಿ ನಿಯಂತ್ರಿತವಾಗಿತ್ತು. ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಚುನಾವಣೆ ನ್ಯಾಯಸಮ್ಮತವಾಗಿ ನಡೆದಿದ್ದರೆ ಬಿಜೆಪಿ 240 ಸ್ಥಾನಗಳನ್ನೂ ಗೆಲ್ಲುತ್ತಿರಲಿಲ್ಲ. ವಿದ್ಯಾ ಅಮೆರಿಕದ ಜಾರ್ಜ್ಟೌನ್ ವಿಶ್ವನಿಲಯದಲ್ಲಿ ಬಿಜೆಪಿ ತನ್ನ ಯೋಚನೆ ಮತ್ತು ಯೋಜನೆಗಳನ್ನು ವಿವಿಧ ರಾಜ್ಯಗಳಲ್ಲಿ ವಿವಿಧ ರೀತಿಯಲ್ಲಿ ಪ್ರಚಾರ ಮಾಡುವುದಕ್ಕೆ ಬೇಕಾದ ಅವಕಾಶವನ್ನು ಚುನಾವಣ ಆಯೋಗ ಕಲ್ಪಿಸಿಕೊಟ್ಟಿತು. ಹೀಗಾಗಿ ಪ್ರಧಾನಿ ಮೋದಿ ತಮ್ಮ ಉದ್ದೇಶಗಳನ್ನು ನಿಖರವಾಗಿ ಜನರಿಗೆ ತಲುಪಿಸಿದರು ಎಂದು ಆರೋಪಿಸಿದರು. ಚುನಾವಣೆ ನಡೆಸುವ ಸಮಯದಲ್ಲಿ ಬಿಜೆಪಿಯ ಬಳಿ ಸಾಕಷ್ಟು ಹಣಕಾಸಿನ ಶಕ್ತಿ ಇತ್ತು. ಆದರೆ ಆ ಸಮಯದಲ್ಲಿ ಕಾಂಗ್ರೆಸ್ನ ಬ್ಯಾಂಕ್ ಖಾತೆಗಳನ್ನು ಅಮಾನತಿನಲ್ಲಿಟ್ಟು, ಹಣಕಾಸು ನೆರವು ದೊರೆಯದಂತೆ ಮಾಡಲಾಗಿತ್ತು. ಆದರೂ ಚುನಾವಣೆಯಲ್ಲಿ ನಾವು ಗಳಿಸಿದ ಸ್ಥಾನಗಳ ಬಗ್ಗೆ ನಮಗೆ ಹೆಮ್ಮೆಯಿದೆ ಎಂದು ರಾಹುಲ್ ಹೇಳಿದರು. ದೇಶದಲ್ಲಿ ಎಲ್ಲರಿಗೂ ಸಮಾನ ಅವಕಾಶಗಳು ಇಲ್ಲ ಎಂದು ದೂರಿದ ರಾಹುಲ್ ಗಾಂಧಿ, ಸಂಪೂರ್ಣ ಶಿಕ್ಷಣ ವ್ಯವಸ್ಥೆಯನ್ನು ಆರೆಸ್ಸೆಸ್ ನಿಯಂತ್ರಿಸುತ್ತದೆ ಎಂದರು. ಇದರ ಜತೆಗೆ ಮಾಧ್ಯಮಗಳನ್ನು ಮತ್ತು ತನಿಖಾ ಸಂಸ್ಥೆಗಳನ್ನೂ ನಿಯಂತ್ರಿಸಲಾಗುತ್ತದೆ ಎಂದು ನಾವು ಆರೋಪಿಸುತ್ತ ಬರುತ್ತಿದ್ದೇವೆ. ಆದರೆ ಜನರಿಗೆ ನಮ್ಮ ಕಳಕಳಿ ಅರ್ಥವಾಗುತ್ತಿಲ್ಲ ಎಂದು ವಿಷಾದಿಸಿದರು.



## ಪ್ರತಿಭಟನೆ ನಿಲ್ಲಿಸಿ, ದುರ್ಗಾಪೂಜೆಗೆ ಗಮನ ಹರಿಸಿ: ದೀದಿ ಹೇಳಿಕೆಗೆ ಮೃತ ಟ್ರೈನಿ ವೈದ್ಯೆತಾಯಿ ಆಕ್ರೋಶ

**ಕೋಲ್ಕತ್ತಾ:** ರಾಜ್ಯದಲ್ಲಿ ನಡೆಯುತ್ತಿರುವ ಪ್ರತಿಭಟನೆಗಳನ್ನು ನಿಲ್ಲಿಸಿ, ದುರ್ಗಾ ಪೂಜೆಯ ಕಡೆಗೆ ಗಮನ ಹರಿಸಿ ಎಂದು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಕರೆ ನೀಡಿದ್ದಾರೆ. ಸಿಎಂ ಹೇಳಿಕೆಗೆ ಕೋಲ್ಕತ್ತಾ ಪ್ರಕರಣದ ಮೃತ ಟ್ರೈನಿ ವೈದ್ಯೆಯ ತಾಯಿ ಮಮತಾ ಬ್ಯಾನರ್ಜಿಯವರ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ನಾವು ನಮ್ಮ ಮಗಳ ಜೊತೆ ದುರ್ಗಾಪೂಜೆಯನ್ನು ಆಚರಿಸುತ್ತಿದ್ದೆವು. ಮುಂದೆ ಇನ್ನಾವುದೇ ಹಬ್ಬ ಅಥವಾ ದುರ್ಗಾಪೂಜೆಯನ್ನು ಆಚರಣೆ ಮಾಡುವುದಿಲ್ಲ. ಅವರು ನಮ್ಮ ಮಗಳನ್ನು ಹಿಂದಿರುಗಿಸಲಿ. ಒಂದು ವೇಳೆ ಇದೇ ರೀತಿಯ ಘಟನೆ ಅವರ ಮನೆಯಲ್ಲಿಯೇ ಆಗಿದ್ದರೆ ಇದೇ ರೀತಿಯಾಗಿ ಹೇಳುತ್ತಿದ್ದೀರಾ ಎಂದು ಪ್ರಶ್ನಿಸಿದ್ದಾರೆ. ಇತ್ತೀಗಷ್ಟೇ ಬ್ಯಾನರ್ಜಿ ಅವರು ಕುಟುಂಬಕ್ಕೆ ಹಣವನ್ನು ನೀಡಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಕಳೆದ ಒಂದು ದಿನದ ಹಿಂದೆಯಷ್ಟೇ ಸಂತ್ರಸ್ತೆ ತಾಯಿ ಕೂಡ ಹಣದ ಆಫರ್ ಬಂದಿದೆ ಎಂದು ಒಪ್ಪಿಕೊಂಡಿದ್ದರು. ಆದ್ರೆ ಮಮತಾ ಬ್ಯಾನರ್ಜಿ ತಮ್ಮ ಮೇಲಿನ ಆರೋಪಗಳನ್ನು ತಳ್ಳಿಹಾಕಿದ್ದರು.

ಆರ್‌ಜಿಕರ್ ಕಾಲೇಜಿನಲ್ಲಿ ನಡೆದ ಟ್ರೈನಿ ವೈದ್ಯೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಮತಾ ಬ್ಯಾನಜಿ ಸೇರಿ ಪೊಲೀಸರು ಪ್ರಕರಣವನ್ನು ಮುಚ್ಚಿಹಾಕಲು ಪ್ರಯತ್ನಿಸಿದರು. ಶವವನ್ನು ನೋಡಲು ನಮಗೆ ಅವಕಾಶ ನೀಡಲಿಲ್ಲ. ಮರಣೋತ್ತರ ಪರೀಕ್ಷೆಗೆ ಕೊಂಡೊಯ್ಯುವಾಗ ಪೊಲೀಸ್ ಠಾಣೆಯಲ್ಲಿ ಕಾಯಬೇಕಾಯಿತು. ನಂತರ, ಶವವನ್ನು ನಮಗೆ ಹಸ್ತಾಂತರಿಸಿದಾಗ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ನಮಗೆ ಹಣವನ್ನು ನೀಡಿದರು. ಅದನ್ನು ನಾವು ತಕ್ಷಣ ನಿರಾಕರಿಸಿದ್ದೇವೆ ಎಂದು ಮೃತ ವೈದ್ಯೆಯ ತಂದೆ ಆರೋಪಿಸಿದ್ದರು. ಇದಕ್ಕೆ ತಿರುಗೇಟು ನೀಡಿರುವ ಸಿಎಂ ಮಮತಾ ಬ್ಯಾನರ್ಜಿ, ಮೃತ ವೈದ್ಯೆಯ ಕುಟುಂಬಕ್ಕೆ ನಾನು ಯಾವತ್ತೂ ಹಣ ನೀಡಿಲ್ಲ. ಇದು ಅಪಪ್ರಚಾರವಲ್ಲದೆ ಬೇರೇನೂ ಅಲ್ಲ. ಹಣವು ಎಂದಿಗೂ ಜೀವನವನ್ನು ಸರಿದೂಗಿಸಲು ಸಾಧ್ಯವಿಲ್ಲ ಎಂದು ನಾನು ಪೋಷಕರಿಗೆ ಈ ಹಿಂದೆ ಹೇಳಿದ್ದೆ. ತಮ್ಮ ಮಗಳ ನೆನಪಿಗಾಗಿ ಏನಾದರೂ ಅರ್ಥಪೂರ್ಣವಾದದ್ದನ್ನು ಮಾಡಲು ಅವರು ಬಯಸಿದರೆ ಸರ್ಕಾರವು ಅವರ ಪರವಾಗಿ ನಿಂತಿದೆ ಎಂದು ತಿಳಿಸಲಾಗಿತ್ತು ಎಂದು ಹೇಳಿದ್ದಾರೆ.

## ಅಕ್ರಮ ಮದ್ಯ ನಾಶದ ವೇಳೆ ಬಾಟಲಿ ದೋಚಿ ಓಡಿದ್ರು!

**ಅಮರಾವತಿ:** ಅಕ್ರಮ ಮದ್ಯವನ್ನು ನಾಶಪಡಿಸುವಾಗ ಪೊಲೀಸರನ್ನು ಲೆಕ್ಕಿಸದೇ ಜನರು ಬಾಟಲಿಗಳನ್ನು ಹಿಡಿದು ಪರಾರಿಯಾದ ಘಟನೆ ಆಂಧ್ರಪ್ರದೇಶ ಅಮರಾವತಿ ಬಳಿಯ ಗುಂಟೂರು ಗ್ರಾಮದಲ್ಲಿ ನಡೆದಿದೆ. ಪೊಲೀಸರು ವಶಪಡಿಸಿಕೊಂಡ ಮದ್ಯವನ್ನು ನಾಶ ಮಾಡುತ್ತಿರುವ ವೇಳೆ ಮದ್ಯಪ್ರಿಯರು ಬಾಟಲಿ ಹಿಡಿದು ಓಡುವ ದೃಶ್ಯ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ವಿವಿಧ ಪ್ರಕರಣಗಳಲ್ಲಿ ಅಕ್ರಮ ಮದ್ಯವನ್ನು ಪೊಲೀಸರು ವಶಪಡಿಸಿಕೊಂಡಿದ್ದರು. ಸುಮಾರು 50 ಲಕ್ಷ ರೂ. ಮೌಲ್ಯದ 24,031 ಮದ್ಯದ ಬಾಟಲಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದು ಎಸ್‌ಪಿ ಸತೀಶ್ ಕುಮಾರ್ ನೇತೃತ್ವದಲ್ಲಿ ನಲ್ಲಚೆರುವು ಡಂಪಿಂಗ್ ಯಾರ್ಡ್ ನಲ್ಲಿ ವಿಲೇವಾರಿ ಮಾಡುವ ಸಂದರ್ಭದಲ್ಲಿ ಜನ ಮದ್ಯ ಬಾಟಲಿಗಾಗಿ ಮುಗಿಬಿದ್ದರು. ಸಾಮಾನ್ಯವಾಗಿ ಮದ್ಯದ ಬಾಟಲಿಗಳನ್ನು ರೋಡ್ ರೋಲರ್ ಮೂಲಕ ನಾಶ ಮಾಡಲಾಗುತ್ತೆ, ಆದರೆ ಸೋಮವಾರ ಪೊಕ್ಲೈನ್ ಯಂತ್ರದ ಮೂಲಕ ನಾಶ ಮಾಡಲು ಮುಂದಾಗಿದ್ದರಿಂದ ಸ್ವಲ್ಪ ವಿಳಂಬವಾಗಿತ್ತು. ಇದರ ಪ್ರಯೋಜನ ಪಡೆದ ಜನರು ಮದ್ಯದ ಬಾಟಲಿಗಳ ಲೂಟಿಗೆ ಮುಂದಾದರು. ಜೋಡಿಸಿಟ್ಟಿದ್ದ ಬಾಟಲಿಗಳತ್ತ ನುಗ್ಗಿದ ಜನರು ಪೊಲೀಸರ ಎದುರೇ ಕೈಗೆ ಸಿಕ್ಕಷ್ಟು ಬಾಟಲಿಗಳನ್ನ ಹಿಡಿದು ಓಡಿಹೋದರು. ಅಲ್ಲೇ ಇದ್ದ ಪೊಲೀಸರು ಜನರನ್ನು ತಡೆಯಲು ಸಾಧ್ಯವಾಗಲಿಲ್ಲ.

# ಇಸ್ರೇಲ್‌ನ ಡೆಲ್ಟಾ ಗಲಿಲ್ ಜತೆ ಭಾರತದಲ್ಲಿ ಕಾರ್ಯತಂತ್ರ

## ಪಾಲುದಾರಿಕೆ ಘೋಷಿಸಿದ ರಿಲಯನ್ಸ್

**ಮುಂಬೈ:** ಭಾರತದ ಮುಂಚೂಣಿ ರೀಟೇಲರ್ ಆದ ರಿಲಯನ್ಸ್ ರೀಟೇಲ್ ವೆಂಚರ್ಸ್ ಲಿಮಿಟೆಡ್ ಹಾಗೂ ಇಸ್ರೇಲ್ ನ ಡೆಲ್ಟಾ ಗಲಿಲ್ ಇಂಡಸ್ಟ್ರೀಸ್ ಸಂಬಂಧಿಸಿದಂತೆ ಮಂಗಳವಾರದಂದು ಪ್ರಮುಖ ಘೋಷಣೆ ಹೊರಬಿದ್ದಿದೆ. ಇದರೊಂದಿಗೆ ಭಾರತದಲ್ಲಿ ಈ ಎರಡೂ ಕಂಪನಿಗಳು ಕಾರ್ಯತಂತ್ರ ಪಾಲುದಾರಿಕೆಯನ್ನು ಪ್ರಕಟಿಸಿವೆ. ಶೇಕಡಾ 50/50ರ ಜಂಟಿ ಉದ್ಯಮ ಇದಾಗಿದೆ. ಡೆಲ್ಟಾ ಗಲಿಲ್ ಟೆಲ್ ಅವಿವ್ ಷೇರು ಮಾರುಕಟ್ಟೆಯಲ್ಲಿ ಲಿಸ್ಟಿಂಗ್ ಆಗಿದೆ. ಈ ಸಂಸ್ಥೆಯು ಜಾಗತಿಕ ದಿರಿಸು ಉತ್ಪಾದಕರಾಗಿ ಗುರುತಿಸಿಕೊಂಡಿದ್ದು, ಜತೆಗೆ ಮಾರ್ಕೆಟಿಂಗ್ ಸಹ ಮಾಡುತ್ತದೆ. ಬ್ರ್ಯಾಂಡೆಡ್ ಬಟ್ಟೆಗಳು, ಖಾಸಗಿ ಲೇಬಲ್ ಗಳನ್ನು ಒಳಗೊಂಡ ದಿರಿಸುಗಳನ್ನು ಮಹಿಳೆಯರು, ಪುರುಷರು ಹಾಗೂ ಮಕ್ಕಳಿಗಾಗಿ ತಯಾರಿಸುತ್ತದೆ. ಇದರಲ್ಲಿ ಡೆನಿಮ್ ಬಟ್ಟೆಗಳು ಸೇರಿವೆ. ಇನ್ನು ಈಗ ರಿಲಯನ್ಸ್ ರೀಟೇಲ್ ಹಾಗೂ ಡೆಲ್ಟಾ ಗಲಿಲ್ ಒಟ್ಟಾಗಿ ಭಾರತದ ಬಟ್ಟೆ ಮಾರುಕಟ್ಟೆಯನ್ನು ಪುನರ್ ವ್ಯಾಖ್ಯಾನಿಸುವ ಗುರಿಯನ್ನು ಇರಿಸಿಕೊಂಡಿವೆ.

ಈ ಪಾಲುದಾರಿಕೆ ಉದ್ದೇಶ ಏನೆಂದರೆ, ಭಾರತೀಯ ಗ್ರಾಹಕರ ವಿಶಿಷ್ಟ ಬೇಡಿಕೆಗಳನ್ನು ಪೂರೈಸುವ ದಿರಿಸುಗಳ ನವೀನ ರೀತಿಯ ವೇದಿಕೆಯನ್ನು ಆರಂಭಿಸುವುದಾಗಿದೆ. ಡೆಲ್ಟಾ ಗಲಿಲ್ ತನ್ನ ನವೀನ ಬಗೆಯ ಹಾಗೂ ಉತ್ಪನ್ನಗಳ ಶ್ರೇಷ್ಠತೆಗೆ ದೊಡ್ಡ ಮಟ್ಟದ ಹೆಸರಾಗಿದೆ. ಬೆಳೆಯುತ್ತಿರುವ ಭಾರತೀಯ ಮಾರುಕಟ್ಟೆಯಲ್ಲಿ ಹೆಜ್ಜೆಗುರುತನ್ನು ವಿಸ್ತರಿಸುವುದಕ್ಕೆ ಈ ಜಂಟಿ ಉದ್ಯಮ ಸಹಕಾರಿ ಆಗುತ್ತದೆ. ಗಲಿಲ್ ಸಂಸ್ಥೆಯ ಸುಂದರ ಉಡುಪುಗಳ ಪೋರ್ಟ್ ಫೋಲಿಯೋ ವ್ಯಾಪಕವಾಗಿದ್ದು, ಗ್ರಾಹಕರ ಮೆಚ್ಚುಗೆಯನ್ನು ಸಹ ಪಡೆದಿದೆ. ಅವುಗಳನ್ನು ರೀಟೇಲ್, ಹೋಲ್ ಸೇಲ್ ಹಾಗೂ ಡಿಜಿಟಲ್ ಚಾನೆಲ್ ಗಳ ಮೂಲಕವಾಗಿ ಖರೀದಿಸಲು ಈ ಸಹಯೋಗದೊಂದಿಗೆ ಅನುವಾಗುತ್ತದೆ. ಇದೇ ವೇಳೆ ಈಗಾಗಲೇ ಹೆಸರಾಗಿರುವ




ರಿಲಯನ್ಸ್ ರೀಟೇಲ್ ನ ಸ್ವಂತ ಬ್ರ್ಯಾಂಡ್ ಗಳ ಉತ್ಪನ್ನಗಳನ್ನು ವಿನ್ಯಾಸ ಮಾಡುವುದಕ್ಕೆ ಹಾಗೂ ತಯಾರಿಸುವುದಕ್ಕೆ ಡೆಲ್ಟಾ ಗಲಿಲ್ ಬೆಂಬಲ ನೀಡುತ್ತದೆ.ರಿಲಯನ್ಸ್ ರೀಟೇಲ್ ವೆಂಚರ್ಸ್ ಲಿಮಿಟೆಡ್ನ ವ್ಯವಸ್ಥಾಪಕ ನಿರ್ದೇಶಕರಾದ ವಿ ಸುಬ್ರಮಣ್ಯಂ ಮಾತನಾಡಿ, ''ಡೆಲ್ಟಾ ಗಲಿಲ್ನ ಇಂಟಿಮೇಟ್ ಉಡುಪು ಮತ್ತು ಆಕ್ಟಿವ್ ಉಡುಪುಗಳಲ್ಲಿ ಜಾಗತಿಕ ಆವಿಷ್ಕಾರಕ ಎಂಬ ಖ್ಯಾತಿಯನ್ನು ಹೊಂದಿದ್ದು, ಅದನ್ನು ರಿಲಯನ್ಸ್ನ ಗುಣಮಟ್ಟ ಮತ್ತು ಬದ್ಧತೆಯ ಸಂಕಲ್ಪದ ಜೊತೆ ತಲುಪಿಸುತ್ತದೆ. ಇದರೊಂದಿಗೆ ಭಾರತೀಯ ಗ್ರಾಹಕರಿಗೆ ನವೀನ ಉತ್ಪನ್ನಗಳು ತಲುಪಿಸುತ್ತೇವೆ. ಒಟ್ಟಾಗಿ, ನಮ್ಮ ರೀಟೇಲ್ ಪ್ಲಾಟ್ಫಾರ್ಮ್ಗಳಾದ್ಯಂತ ಇಂಟಿಮೇಟ್ ಉಡುಪು ಮತ್ತು ಆಕ್ಟಿವ್ ಉಡುಪುಗಳ ವಿಭಾಗಗಳಲ್ಲಿ ಗ್ರಾಹಕರಿಗೆ ದೊರೆಯುವಂಥ ಆಫರ್ ಗಳನ್ನು ಹೆಚ್ಚಿಸಲು ನಾವು ಸಿದ್ಧರಾಗಿದ್ದೇವೆ,'' ಎಂದಿದ್ದಾರೆ.ಡೆಲ್ಟಾ ಗಲಿಲ್ ಸಿಇಒ ಐಸಾಕ್ ದಬಾಹ್ ಮಾತನಾಡಿ, ರಿಲಯನ್ಸ್ ರೀಟೇಲ್ ವಿಶ್ವದಲ್ಲೇ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ರೀಟೇಲ್ ಕಂಪನಿಗಳಲ್ಲಿ ಒಂದಾಗಿದೆ ಮತ್ತು 140 ಕೋಟಿಗೂ ಹೆಚ್ಚು ಗ್ರಾಹಕರನ್ನು ಹೊಂದಿರುವ ಭಾರತದ ಗ್ರಾಹಕ ಮಾರುಕಟ್ಟೆಗೆ ನಾವು ಪ್ರವೇಶಿಸಲು ನೋಡುತ್ತಿರುವಾಗ ರಿಲಯನ್ಸ್ ಕಂಪನಿಯೊಂದಿಗೆ ಪಾಲುದಾರರಾಗಲು ತುಂಬಾ ಹೆಮ್ಮೆಪಡುತ್ತೇವೆ,'' ಎಂದು ಹೇಳಿದ್ದಾರೆ.

# ರಷ್ಯಾ ಮೇಲೆ ಡ್ರೋನ್ ಸುರಿಮಳೆಗರೆದ ಉಕ್ರೇನ್



**ಮಾಸ್ಕೋ:** ರಶ್ಯದ ರಾಜಧಾನಿ ಮಾಸ್ಕೋ ಮತ್ತು ಪಶ್ಚಿಮದ ಪ್ರಾಂತಗಳ ಮೇಲೆ ಉಕ್ರೇನ್ ನಡೆಸಿದ ಅತೀ ದೊಡ್ಡ ಡ್ರೋನ್ ದಾಳಿಯಲ್ಲಿ ಕನಿಷ್ಟ ಒಬ್ಬ ಮಹಿಳೆ ಮೃತಪಟ್ಟಿದ್ದು ಇತರ ಮೂವರು ಗಾಯಗೊಂಡಿದ್ದಾರೆ. ಹಲವು ಮನೆಗಳಿಗೆ ಹಾನಿಯಾಗಿದ್ದು ಮಾಸ್ಕೋದಲ್ಲಿ ಪ್ರಮುಖ ವಿಮಾನ ನಿಲ್ದಾಣಗಳನ್ನು ಮುಚ್ಚಲಾಗಿದೆ ಎಂದು ರಶ್ಯದ ಅಧಿಕಾರಿಗಳು ಹೇಳಿದ್ದಾರೆ.

ವಿಶ್ವದ ಅತೀ ದೊಡ್ಡ ಪರಮಾಣು ಶಕ್ತ ದೇಶವಾಗಿರುವ ರಶ್ಯದ ಮೇಲೆ ಉಕ್ರೇನ್ 144 ಡ್ರೋನ್ಗಳನ್ನು ಪ್ರಯೋಗಿಸಿದ್ದು ಇದರಲ್ಲಿ ಮಾಸ್ಕೋ ವಲಯದಲ್ಲಿ ಕನಿಷ್ಟ 20 ಡ್ರೋನ್ಗಳನ್ನು ಹೊಡೆದುರುಳಿಸಲಾಗಿದೆ. ದಾಳಿಯ ಬಳಿಕ ಮಾಸ್ಕೋದ 4 ವಿಮಾನ ನಿಲ್ದಾಣಗಳಲ್ಲಿ ಮೂರನ್ನು ಮುಚ್ಚಲಾಗಿದೆ. ಮಾಸ್ಕೋವನ್ನು ಸಂಪರ್ಕಿಸುವ ಪ್ರಮುಖ ರಸ್ತೆಯನ್ನೂ ಭಾಗಶಃ ಮುಚ್ಚಲಾಗಿದೆ. ಮಾಸ್ಕೋ ವಲಯದ ರಮೆನ್ಸ್ಕೋಯ್ ಜಿಲ್ಲೆಯಲ್ಲಿ ಎರಡು ಬಹುಮಹಡಿ ಕಟ್ಟಡಗಳಿಗೆ ಹಾನಿಯಾಗಿದ್ದು ಬೆಂಕಿ ಕಾಣಿಸಿಕೊಂಡಿದೆ. ಓರ್ವ ಮಹಿಳೆ ಸಾವನ್ನಪ್ಪಿದ್ದು ಇತರ 3 ಮಂದಿ ಗಾಯಗೊಂಡಿದ್ದಾರೆ. 43 ಜನರನ್ನು ತಾತ್ಕಾಲಿಕ ಆಶ್ರಯ ಕೇಂದ್ರಗಳಿಗೆ ಸ್ಥಳಾಂತರಿಸಲಾಗಿದೆ ಎಂದು ಮಾಸ್ಕೋ ಗವರ್ನರ್ ಆಂಡ್ರೆಯ್ ವೊರೊಬ್ಯೋವ್ ಹೇಳಿದ್ದಾರೆ.

ರಶ್ಯದ ಬ್ರಯಾನ್ಸ್ಕ್ ಪ್ರಾಂತದಲ್ಲಿ 70ಕ್ಕೂ ಹೆಚ್ಚು ಡ್ರೋನ್‌ಗಳನ್ನು ಹಾಗೂ ಇತರ ಪ್ರದೇಶಗಳಲ್ಲಿ 10 ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ ಎಂದು ರಶ್ಯದ ರಕ್ಷಣಾ ಇಲಾಖೆ ಹೇಳಿದೆ.

## ಬಾಹ್ಯಾಕಾಶಕ್ಕೆ ನೆಗೆದ ಸ್ಪೇಸ್‌ಎಕ್ಸ್ ಗಗನ ನೌಕೆ

**ನ್ಯೂಯಾರ್ಕ್:** ಬಾಹ್ಯಾಕಾಶದಲ್ಲಿ ಮೊದಲ ಖಾಸಗಿ ನಡಿಗೆ ನಡೆಸಿದ ದಾಖಲೆ ಬರೆಯುವ ಉದ್ದೇಶದಿಂದ ತಂತ್ರಜ್ಞಾನ ಉದ್ಯಮಿ ಜೇರೆಡ್ ಐಸಾಕ್ಮನ್ ಮಂಗಳವಾರ ಸ್ಪೇಸ್‌ಎಕ್ಸ್ ಗಗನ ನೌಕೆಯ ಮೂಲಕ ಬಾಹ್ಯಾಕಾಶಕ್ಕೆ ನೆಗೆದಿದ್ದಾರೆ.

ಐಸಾಕ್ಮನ್ ಜತೆ ಸ್ಪೇಸ್‌ಎಕ್ಸ್ನ ಇಬ್ಬರು ಇಂಜಿನಿಯರ್ಗಳು ಹಾಗೂ ವಾಯುಪಡೆಯ ಮಾಜಿ ಪೈಲಟ್ಗಳನ್ನು ಹೊತ್ತ ಸ್ಪೇಸ್‌ಎಕ್ಸ್ ನ ಫಾಲ್ಕನ್ 9 ರಾಕೆಟ್ ಫ್ಲೋರಿಡಾದ ಬಾಹ್ಯಾಕಾಶ ಕೇಂದ್ರದಿಂದ ಮಂಗಳವಾರ ಬೆಳಿಗ್ಗೆ ಬಾಹ್ಯಾಕಾಶಕ್ಕೆ ಉಡಾವಣೆಗೊಂಡಿದೆ.

ಬಾಹ್ಯಾಕಾಶ ನಡಿಗೆ ಯೋಜನೆಯ ವೆಚ್ಚವನ್ನು ಐಸಾಕ್ಮನ್ ಸ್ಪೇಸ್ ಎಕ್ಸ್ ಜತೆ ಹಂಚಿಕೊಂಡಿದ್ದಾರೆ. ಬುಧವಾರ ಅಥವಾ ಗುರುವಾರ ಬಾಹ್ಯಾಕಾಶ ನಡಿಗೆ ಸಾಗಲಿದೆ. ಹೊಚ್ಚ ಹೊಸ ಸ್ಪೇಸ್ ಸೂಟ್ (ಗಗನಯಾತ್ರಿಗಳ ಉಡುಗೆ)ಗಳನ್ನು ಅಭಿವೃದ್ಧಿಪಡಿಸುವುದು ಮತ್ತು ಇದು ಕಠಿಣವಾದ ನಿರ್ವಾತದಲ್ಲಿ ಹೇಗೆ ಹೊಂದಿಕೊಳ್ಳುತ್ತದೆ ಎಂಬುದನ್ನು ಪರೀಕ್ಷಿಸುವುದೂ ಈ ಯೋಜನೆಯಲ್ಲಿ ಸೇರಿದೆ ಎಂದು ಮೂಲಗಳು ಹೇಳಿವೆ.



# ನಮಗೆ ಬೇಕು ಭಾರತದ ಅಭಿವೃದ್ಧಿ ಯೋಜನೆ: ಬಾಂಗ್ಲಾದೇಶ



**ಢಾಕಾ:** ಭಾರತ ಸರ್ಕಾರ ನಮ್ಮ ದೇಶದಲ್ಲಿ ಕೈಗೊಂಡಿರುವ ಅಭಿವೃದ್ಧಿ ಯೋಜನೆಗಳು ಮುಂದುವರಿಯಲಿವೆ. ಅವುಗಳ ಮಹತ್ವವನ್ನು ಗಮನಿಸಿ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ವಿತ್ತ ಸಲಹೆಗಾರ ಸಲೇಹುದ್ದೀನ್ ಅಹ್ಮದ್ ಹೇಳಿದ್ದಾರೆ.ಹೂಡಿಕೆ ಮತ್ತು ಆರ್ಥಿಕ ಸಹಕಾರಕ್ಕೆ ಬಾಂಗ್ಲಾ ಸೂಕ್ತ ತಾಣವಾಗಿದೆ ಭಾರತಕ್ಕೆ ತಿಳಿಸಿದ್ದೇವೆ ಎಂದಿದ್ದಾರೆ.

ಒಟ್ಟು 3 ಸಾಲ ಯೋಜನೆಗಳನ್ನು ಚರ್ಚಿಸಲಾಗಿದೆ ಎಂದರು.

ಇತ್ತೀಚೆಗಷ್ಟೆ ಭಾರತದಲ್ಲಿ ಇರುವ ಮಾಜಿ ಪ್ರಧಾನಿ ಶೇಖ್ ಹಸೀನಾರನ್ನು ವಾಪಸ್ ಕರೆಯಿಸಿಕೊಂಡು ಹಿಂಸಾ ಪ್ರಕರಣಗಳಲ್ಲಿ ವಿಚಾರಣೆ ನಡೆಸಲಾಗುತ್ತದೆ ಎಂದು ಸರ್ಕಾರ ಪ್ರಕಟಿಸಿರುವಂತೆಯೇ ಭಾರತದ ಜತೆಗೆ ಸಹಭಾಗಿತ್ವ ಮುಂದುವರಿಸುವ ಬಗ್ಗೆ ಮೊಹಮ್ಮದ್ ಯೂನುಸ್ ನೇತೃತ್ವದ ಸರ್ಕಾರ ಹೇಳಿಕೊಂಡಿದೆ.

# ಭಾರತೀಯರು ರಚಿಸಿದ ಬಾವುಟ, ರಾಷ್ಟ್ರಗೀತೆ ನಮಗೆ ಬೇಡ - ಬಾಂಗ್ಲಾದಲ್ಲಿ ಹೊಸ ಹೋರಾಟ!

**ಡಾಕಾ:** ಕ್ಷಿಪ್ರ ಕ್ರಾಂತಿ ಹಾಗೂ ವ್ಯಾಪಕ ಹಿಂಸಾಚಾರದ ಬಳಿಕ ಬಾಂಗ್ಲಾದೇಶದಲ್ಲಿ ನೂತನ ಸರ್ಕಾರ ಸ್ಥಾಪನೆಗೊಂಡಿದೆ. ಈ ಬೆನ್ನಲ್ಲೆ ಅಲ್ಲಿನ ದಂಗೆಕೋರರು ಹೊಸದೊಂದು ಬೇಡಿಕೆ ಮುಂದಿಟ್ಟಿದ್ದು, ಬಾಂಗ್ಲಾದ ಬಾವುಟ ಮತ್ತು ರಾಷ್ಟ್ರಗೀತೆಯನ್ನು ಬದಲಿಸುವಂತೆ ಸರ್ಕಾರವನ್ನು ಆಗ್ರಹಿಸಿದ್ದಾರೆ.ಬಾಂಗ್ಲಾದ ಬಾವುಟವನ್ನು ನರೇನ್ ದಾಸ್ ಎಂಬ ಭಾರತೀಯರು ರಚಿಸಿದ್ದರು. ಬಾಂಗ್ಲಾದ ರಾಷ್ಟ್ರಗೀತೆಯನ್ನು ರವೀಂದ್ರ ನಾಥ ಟ್ಯಾಗೋರ್ ರಚಿಸಿದ್ದರು.

ಬೇರೆ ಇಸ್ಲಾಂ ದೇಶಗಳಲ್ಲಿರುವಂತೆ ನಮ್ಮ ಧ್ವಜದಲ್ಲಿ ಇಸ್ಲಾಂನ ಯಾವುದೇ ಚಿಹ್ನೆಯಿಲ್ಲ ಎಂದು ಅಲ್ಲಿನ ಜಮಾತ್ ಹೇಳಿದೆ. ಧ್ವಜದಲ್ಲಿರುವ ಹಸಿರು ಬಣ್ಣ ಸಮೃದ್ಧಿಯನ್ನು ಸೂಚಿಸಿದರೆ, ಮಧ್ಯದಲ್ಲಿರುವ ಕೆಂಪು ವೃತ್ತವು 1971 ರಲ್ಲಿ ಪಾಕಿಸ್ತಾನದೊಂದಿಗೆ ಪಾಕಿಸ್ತಾನದೊಂದಿಗೆ ನಡೆದ ಯುದ್ಧದಲ್ಲಿ ಹುತಾತ್ಮರಾದವರ ಸ್ಮರಣೆಗಾಗಿ ರಚಿಸಲಾಗಿದೆ.



# ಭಾರತೀಯ ಪ್ರವಾಸಿಗರಿಗೆ ವೀಸಾ ಮನ್ನಾ ಯೋಜನೆ: ದಕ್ಷಿಣ ಆಫ್ರಿಕಾ ಘೋಷಣೆ

**ಕೇಪ್ಟೌನ್:** ಭಾರತ ಮತ್ತು ಚೀನಾದ ಪ್ರವಾಸಿಗರಿಗೆ 90 ದಿನಗಳ ವೀಸಾ ಮನ್ನ ಯೋಜನೆಯನ್ನು ರೂಪಿಸಲಾಗಿದ್ದು 2025ರ ಜನವರಿಯಿಂದ ಜಾರಿಗೆ ಬರಲಿದೆ ಎಂದು ದಕ್ಷಿಣ ಆಫ್ರಿಕಾ ಘೋಷಿಸಿದೆ.

ಯೋಜನೆಯ ಪ್ರಕಾರ, ಗೃಹ ವ್ಯವಹಾರಗಳ ಇಲಾಖೆಯು ದೇಶಕ್ಕೆ ಬರುವ ಪ್ರವಾಸಿಗರಿಗೆ ಗುಂಪು ವೀಸಾಗಳ ಅರ್ಜಿಯನ್ನು ಇಲಾಖೆಯಲ್ಲಿ ನೋಂದಾಯಿಸಿದ ಭಾರತ ಮತ್ತು ಚೀನಾದ ಪ್ರವಾಸ ನಿರ್ವಾಹಕರ ನೆರವಿನಿಂದ ಪರಿಶೀಲಿಸಲಿದೆ. 'ದಿ ಟ್ರಸ್ಟೆಡ್ ಟೂರ್ ಆಪರೇಟರ್ ಸ್ಕೀಂ' ಎಂಬ ಈ ಯೋಜನೆಯು ದೇಶವನ್ನು ಪ್ರಮುಖ ಪ್ರವಾಸೀ ತಾಣವಾಗಿಸಲು ನೆರವಾಗಲಿದೆ.

ಪ್ರಸ್ತುತ ದಕ್ಷಿಣ ಆಫ್ರಿಕಾಕ್ಕೆ ಆಗಮಿಸುವ ಅಂತರಾಷ್ಟ್ರೀಯ ಪ್ರವಾಸಿಗರಲ್ಲಿ ಭಾರತೀಯರ ಪ್ರಮಾಣ ಕೇವಲ 3.9%ರಷ್ಟು ಮಾತ್ರ. ಪ್ರವಾಸಿಗರಿಗೆ ಹೆಚ್ಚಿನ ಸೌಲಭ್ಯ, ಸರಳ ಮತ್ತು ಸುಲಭ ವೀಸಾ ಪ್ರಕ್ರಿಯೆಯಿಂದ ಈ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶವಿದೆ. ಭಾರತ ಮತ್ತು ಚೀನಾದ ಪ್ರವಾಸಿಗರು ದೊಡ್ಡ ಗುಂಪುಗಳಲ್ಲಿ ಪ್ರಯಾಣಿಸುವುದಕ್ಕೆ ಆದ್ಯತೆ ನೀಡುವುದರಿಂದ ವೀಸಾ ಮನ್ನಾ ಯೋಜನೆ ಅವರನ್ನು ಆಕರ್ಷಿಸಬಹುದು. ಪ್ರವಾಸೋದ್ಯಮದಲ್ಲಿ 10% ಹೆಚ್ಚಳವಾದರೂ ದೇಶದ ವಾರ್ಷಿಕ ಆರ್ಥಿಕ ಪ್ರಗತಿಯಲ್ಲಿ 0.6% ಏರಿಕೆಯಾಗುತ್ತದೆ ಎಂದು ಗೃಹ ವ್ಯವಹಾರಗಳ ಸಚಿವ ಲಿಯಾನ್ ಶ್ರೈಬರ್ ಹೇಳಿದ್ದಾರೆ.




# ರೈಲು ಅಪಘಾತ ನಡೆಸಲು ದುಷ್ಕರ್ಮಿಗಳ ಸಂಚು

**ನವದೆಹಲಿ:** ಕಳೆದ ಒಂದು ವಾರದಲ್ಲಿ ರೈಲು ಹಳಿ ತಪ್ಪಿಸುವ ಮೂರು ಪ್ರಯತ್ನಗಳು ಬೆಳಕಿಗೆ ಬಂದಿದ್ದು, ಇದರ ಜತೆಗೆ ರೈಲಿಗೆ ಕಲ್ಲೆಸೆದ ಘಟನೆಗಳೂ ವರದಿಯಾಗಿವೆ. ಅಪರಾಧ ಉದ್ದೇಶದ ಕಿಡಿಗೇಡಿ ಈ ಕೃತ್ಯಗಳು ರೈಲ್ವೆ ಸುರಕ್ಷತೆ ಬಗ್ಗೆ ಹೊಸ ಆತಂಕಕ್ಕೆ ಕಾರಣವಾಗಿವೆ ಎಂದು ರೈಲ್ವೆ ಇಲಾಖೆ ಹೇಳಿದೆ.

ಕಾನ್ಪುರ ಬಳಿ ರೈಲು ಹಳಿಯ ಮೇಲೆ ಎಲ್ ಪಿಜಿ ಸಿಲಿಂಡರ್ ಇರಿಸಿದ ಘಟನೆಯಲ್ಲಿ ಲೋಕೊ ಪೈಲಟ್ ತುರ್ತು ಬ್ರೇಕ್ ಅನ್ವಯಿಸಿದ್ದರಿಂದ ಅಪಘಾತ ಸಂಭವಿಸಿಲ್ಲ. ಇದರಿಂದಾಗಿ ದೊಡ್ಡ ದುರಂತವೊಂದು ತಪ್ಪಿದಂತಾಗಿದೆ ಎಂದು ಇಲಾಖೆ ವಿವರಿಸಿದೆ.

ಈ ಘಟನೆಯಾದ ಮರುದಿನವೇ ರಾಜಸ್ಥಾನದ ಅಜ್ಮೀರ್ ಜಿಲ್ಲೆಯಲ್ಲಿ ರೈಲ್ವೇ ಹಳಿಗಳ ಮೇಲೆ ಸುಮಾರು 70 ಕೆಜಿ ತೂಕದ ಎರಡು ಸಿಮೆಂಟ್ ಬ್ಲಾಕ್ ಗಳನ್ನು ಇರಿಸಲಾಗಿತ್ತು. ಈ ವೇಳೆ ಅದೇ ಮಾರ್ಗವಾಗಿ ಬರುತ್ತಿದ್ದ ಗೂಡ್ಸ್ ರೈಲು ಸಿಮೆಂಟ್ ಬ್ಲಾಕ್ ಗಳಿಗೆ ಡಿಕ್ಕಿ ಹೊಡೆದಿದ್ದು, ಯಾವುದೇ ಆಹಿತಕರ ಘಟನೆ ನಡೆದಿಲ್ಲ.

ಇನ್ನು ಘಟನೆ ಬಳಿಕ ಕೇಂದ್ರ ರೈಲ್ವೇ ಇಲಾಖೆ ಪ್ರತಿಕ್ರಿಯಿಸಿದ್ದು, ರೈಲ್ವೆ ಹಳಿಗಳ ಮೇಲೆ ಯಾವುದೇ ರೀತಿಯ ವಸ್ತುವನ್ನು ಇಡುವುದು ಶಿಕ್ಷಾರ್ಹ ಅಪರಾಧ. ಇದು ಪ್ರಯಾಣಿಕರಿಗೆ ಮಾರಕವಾಗಬಹುದು. ಜವಾಬ್ದಾರಿಯುತ ನಾಗರಿಕರಾಗಿ ಮತ್ತು ಸುರಕ್ಷಿತ ರೈಲ್ವೆ ಕಾರ್ಯಾಚರಣೆಗಳಲ್ಲಿ ಸಹಕರಿಸಿ ಎಂದು ಸಚಿವಾಲಯ ಮನವಿ ಮಾಡಿದೆ.



ಅಲ್ಲದೇ ಇತ್ತೀಚೆಗೆ ರೈಲು ದುರಂತಗಳು ಹೆಚ್ಚಾಗುತ್ತಿದ್ದು, ಇಂತಹ ಕೃತ್ಯದಿಂದಲೇ ಅಹಿತಕರ ಘಟನೆ ಸಂಭವಿಸುವುದು, ಕೆಲ ದುಷ್ಕರ್ಮಿಗಳನ್ನು ಹುಚ್ಚಾಟಕ್ಕೆ ಈಗಾಗಲೇ ಸಾವಿರಾರು ಜನ ಪ್ರಾಣ ಕಳೆದುಕೊಂಡಿದ್ದರೆ, ಸರ್ಕಾರಕ್ಕೆ ಕೋಟ್ಯಂತರ ನಷ್ಟವಾಗುತ್ತಿದೆ. ಇದಕ್ಕೆಲ್ಲಾ ಸದ್ಯದಲ್ಲೇ ಕ್ರಮಕೈಗೊಳ್ಳುತ್ತೇವೆ ಎಂದು ರೈಲ್ವೇ ಇಲಾಖೆ ತಿಳಿಸಿದೆ.

# ಗಾಜಾ ಮೇಲೆ ಇಸ್ರೇಲ್ ದಾಳಿಯಲ್ಲಿ 3 ಹಿರಿಯ ಹಮಾಸ್ ನಾಯಕರ ಹತ್ಯೆ

**ಜೆರುಸಲೇಂ:** ದಕ್ಷಿಣ ಗಾಜಾದಲ್ಲಿ ಗೊತ್ತುಪಡಿಸಿದ ಸುರಕ್ಷಿತ ವಲಯದ ಮೇಲೆ ನಡೆದ ದಾಳಿಯಲ್ಲಿ ಮೂವರು ಹಿರಿಯ ಹಮಾಸ್ ಉಗ್ರರನ್ನು ಕೊಂದಿರುವುದಾಗಿ ಇಸ್ರೇಲಿ ಮಿಲಿಟರಿ ಹೇಳಿದೆ.

ಗಾಜಾ ಮೂಲದ ಆರೋಗ್ಯ ಅಧಿಕಾರಿಗಳ ಪ್ರಕಾರ, ಖಾನ್ ಯೂನಿಸ್ನ ಮಾವಾಸಿ ಪ್ರದೇಶದಲ್ಲಿ ಸ್ಥಳಾಂತರಗೊಂಡ ಪ್ಯಾಲೆಸ್ಟೀನಿಯಾದ ಜನನಿಬಿಡ ಟೆಂಟ್ ಕ್ಯಾಂಪ್ ಅನ್ನು ಗುರಿಯಾಗಿಟ್ಟುಕೊಂಡು ಸ್ಟ್ರೈಕ್ಗಳು ಕನಿಷ್ಠ 19 ಜನರನ್ನು ಕೊಂದವು, ಹೆಚ್ಚಿನವರು ಅವಶೇಷಗಳಡಿಯಲ್ಲಿ ಸಿಲುಕಿದ್ದಾರೆ.

ಖಾನ್ ಯೂನಿಸ್ನಲ್ಲಿರುವ ಮಾನವೀಯ ಪ್ರದೇಶದೊಳಗೆ ಕಮಾಂಡ್ ಮತ್ತು ಕಂಟ್ರೋಲ್ ಸೆಂಟರ್ನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರಿಯ ಹಮಾಸ್ ಭಯೋತ್ಪಾದಕರನ್ನು ಗುರಿಯಾಗಿಸಿಕೊಂಡು ಗುಪ್ತಚರ ಆಧಾರಿತ ನಿಖರವಾದ ಸ್ಟ್ರೈಕ್ ನಡೆಸಲಾಗಿದೆ ಎಂದು ಇಸ್ರೇಲಿ ಮಿಲಿಟರಿ ವಿವರಿಸಿದೆ.ಇಸ್ರೇಲಿ ಮಿಲಿಟರಿಯ ಪ್ರಕಾರ, ದಾಳಿಯಲ್ಲಿ ಗಾಜಾ ಪಟ್ಟಿಯಲ್ಲಿರುವ ಹಮಾಸ್ನ ವೈಮಾನಿಕ ಘಟಕದ ಮುಖ್ಯಸ್ಥ ಸಮೇರ್ ಇಸ್ಮಾಯಿಲ್ ಖಾದರ್ ಅಬು ದಕ್ಕಾ, ಹಮಾಸ್ನ ಮಿಲಿಟರಿ ಗುಪ್ತಚರ ಪ್ರಧಾನ ಕಛೇರಿಯಲ್ಲಿನ ವೀಕ್ಷಣಾ ಮತ್ತು ಗುರಿ ವಿಭಾಗದ ಮುಖ್ಯಸ್ಥ ಒಸಾಮಾ ತಬೇಶ್ ಮತ್ತು ಹಿರಿಯ ಹಮಾಸ್ ಉಗ್ರಗಾಮಿ ಐಮನ್ ಮಭೌಹ್ ಕೊಲ್ಲಲ್ಪಟ್ಟರು.

ನಂತರ, ಇಸ್ರೇಲಿ ಸೇನೆಯು ಮಧ್ಯ ಗಾಜಾದ ಬುರೇಜ್ ನಿರಾಶ್ರಿತರ ಶಿಬಿರದಲ್ಲಿರುವ ಅಲ್ -ಫರೂಕ್ ಮಸೀದಿಯ ಮೇಲೆ ಮತ್ತೊಂದು ದಾಳಿ ನಡೆಸಿತು. ಈ ದಾಳಿಯು ಮಸೀದಿಯೊಳಗೆ ಇರುವ ಮತ್ತೊಂದು ಹಮಾಸ್ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರವನ್ನು ನಾಶಪಡಿಸುವ ಗುರಿಯನ್ನು ಹೊಂದಿದೆ ಎಂದು ಸೇನೆ ಹೇಳಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಗಾಂಧಾರಿ'ಯಾದ ತಾಪ್ಸಿ ಪನ್ನು ಆಕ್ಷನ್ ಥ್ರಿಲ್ಲರ್ ಕಥೆಯಲ್ಲಿ ನಟಿ



ಬಾಲಿವುಡ್ ಬ್ಯೂಟಿ ತಾಪ್ಸಿ ಪನ್ನು ಸದ್ಯ ಆಕ್ಷನ್ ಥ್ರಿಲ್ಲರ್ ಕಥೆಯೊಂದನ್ನು ಒಪ್ಪಿಕೊಂಡಿಕೊಂಡಿದ್ದಾರೆ. ನಿರ್ಮಾಪಕಿ ಕನ್ನಿಕಾ ಧಿಲ್ಲೋನ್ ಜೊತೆ ಹೊಸ ಚಿತ್ರಕ್ಕಾಗಿ ಕೈಜೋಡಿಸುತ್ತಿದ್ದಾರೆ. ಮದುವೆಯ ಬಳಿಕ ಸಾಲು ಸಾಲು ಸಿನಿಮಾಗಳಲ್ಲಿ ತಾಪ್ಸಿ ಬ್ಯುಸಿಯಾಗಿದ್ದಾರೆ. ಆದರೆ ಹೇಳಿಕೊಳ್ಳುವಂತಹ ಯಶಸ್ಸು ಅವರಿಗೆ ಸಿಕ್ತಿಲ್ಲ. ಹಾಗಂತ ನಟಿಗೆ ಬೇಡಿಕೆ ಏನು ಕಮ್ಮಿಯಾಗಿಲ್ಲ. ಈಗ ಗಾಂಧಾರಿಯಾಗಿ ತೆರೆಯ ಮೇಲೆ ಮಿಂಚಲು ನಟಿ ಸಜ್ಜಾಗಿದ್ದಾರೆ.

ಈ ಹಿಂದೆ 'ಫಿರ್ ಆಯಿ ಹಸೀನ್ ದಿಲ್ರುಬಾ' ಚಿತ್ರಕ್ಕೆ ಕನ್ನಿಕಾ ಧಿಲ್ಲೋನ್ ಕಥೆ ಬರೆದಿದ್ದರು. ಈಗ ಅವರೊಂದಿಗೆ 'ಗಾಂಧಾರಿ' ಎಂಬ ಸಿನಿಮಾಗಾಗಿ ಸಾಥ್ ನೀಡಿದ್ದಾರೆ ತಾಪ್ಸಿ. ವಿಭಿನ್ನ ಕಥೆಯನ್ನು ನಟಿ ಹೇಳಲು ಹೊರಟಿದ್ದಾರೆ. ತಾಯಿ ಮತ್ತು ಮಗುವಿನ ಬಂಧದ ಬಗ್ಗೆ ಸಾರುವ ಕಥೆಯಾಗಿದೆ. ಜೊತೆಗೆ ಆಕ್ಷನ್ ಥ್ರಿಲ್ಲರ್‌ನಲ್ಲಿ ಇದು ಮೂಡಿ ಬರಲಿದೆ. ಒಟಿಟಿಯಲ್ಲಿ ಸಿನಿಮಾ ರಿಲೀಸ್ ಆಗಲಿದೆ.

# ಡಿವೋರ್ಸ್ ಬಳಿಕ ನಿವಿ ಫುಲ್ ಆಕ್ಟೀವ್

ರ್‍ಯಾಪರ್ ಚಂದನ್ ಶೆಟ್ಟಿ ಜೊತೆಗಿನ ಡಿವೋರ್ಸ್ ಬಳಿಕ ನಿವೇದಿತಾ ಗೌಡ ಸೋಶಿಯಲ್ ಮೀಡಿಯಾದಲ್ಲಿ ಫುಲ್ ಆಕ್ಟೀವ್ ಆಗಿದ್ದಾರೆ. ಮತ್ತಷ್ಟು ಹಾಟ್ ಆಗಿರುವ ನಿವೇದಿತಾ ಹೊಸ ರೀಲ್ಸ್‌ಗಳ ಮೂಲಕ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ಶೇರ್ ಮಾಡಿರುವ ರೀಲ್ಸ್‌ನಲ್ಲಿ ನಟಿಯ ಅವತಾರ ನೋಡಿ ನೆಟ್ಟಿಗರು ಕಾಲೆಳೆದಿದ್ದಾರೆ.



ಬಿಗ್ ಬಾಸ್, ಗಿಚ್ಚಿ ಗಿಲಿಗಿಲಿ ಶೋ ನಂತರ ಹೊಸ ಹೊಸ ಫೋಟೋಶೂಟ್‌ಗಳಲ್ಲಿ ನಿವೇದಿತಾ ಕಾಣಿಸಿಕೊಳ್ಳುತ್ತಿದ್ದಾರೆ. ಇಂಗ್ಲಿಷ್ ಹಾಡಿಗೆ ಹೆಜ್ಜೆ ಹಾಕಿದ್ದಾರೆ. ಸಖತ್ ಹಾಟ್ ಆಗಿ ಕಾಣಿಸಿಕೊಂಡಿರುವ ನಟಿಗೆ ಪಾಸಿಟಿವ್ ಮತ್ತು ನೆಗೆಟಿವ್ ಕಾಮೆಂಟ್ ವ್ಯಕ್ತವಾಗಿದೆ. ಮೊದಲು ಬಾತ್‌ರೂಮ್‌ನಿಂದ ಆಚೆ ಬನ್ನಿ ಎಂದೆಲ್ಲಾ ನಟಿಗೆ ನೆಟ್ಟಿಗರು ಟೀಕಿಸಿದ್ದಾರೆ.

ಅಂದಹಾಗೆ, ಚಂದನ್ ಶೆಟ್ಟಿ ಮುದ್ದುರಾಕ್ಷಸಿ, ಸೃಜನ್ ಲೋಕೇಶ್ ನಿರ್ದೇಶನದ 'ಜಿಎಸ್‌ಟಿ' ಚಿತ್ರದಲ್ಲಿಯೂ ನಿವೇದಿತಾ ನಟಿಸಿದ್ದಾರೆ. ಎರಡು ಸಿನಿಮಾಗಳ ರಿಲೀಸ್‌ಗೆ ನಟಿ ಎದುರು ನೋಡ್ತಿದ್ದಾರೆ.

ಇನ್ನೂ 2020ರ ಫೆ.26ರಂದು ಚಂದನ್ ಮತ್ತು ನಿವೇದಿತಾ ಮೈಸೂರಿನಲ್ಲಿ ಮದುವೆಯಾದರು. ಈ ವರ್ಷ ಜೂನ್ 20ರಂದು ಡಿವೋರ್ಸ್ ಘೋಷಣೆ ಮಾಡಿದರು. ದಾಂಪತ್ಯ ಅಂತ್ಯವಾಗಿರುವ ಬಗ್ಗೆ ಚಂದನ್ ಮತ್ತು ನಿವೇದಿತಾ ಅಧಿಕೃತವಾಗಿ ತಿಳಿಸಿದರು.





# ಬೇಬಿ ಬಂಪ್ ಫೋಟೋಶೂಟ್ ಹಂಚಿಕೊಂಡ ಲಕ್ಷ್ಮೀ ಬಾರಮ್ಮ ನಟಿಯರು

ಕಿರುತೆರೆಯ ಜನಪ್ರಿಯ ಲಕ್ಷ್ಮಿ ಬಾರಮ್ಮ ಸೀರಿಯಲ್ ನಟಿಯರಾದ ನೇಹಾ ಗೌಡ ಮತ್ತು ಕವಿತಾ ಇಬ್ಬರೂ ಚೊಚ್ಚಲ ಮಗುವಿನ ನಿರೀಕ್ಷೆಯಲ್ಲಿದ್ದಾರೆ. ಬೇಬಿ ಬಂಪ್ ತೋರಿಸಿ ಪರಸ್ಪರ ಶುಭಾಶಯಗಳನ್ನು ಹೇಳಿದ್ದಾರೆ. ಪ್ರೆಗ್ನೆನ್ಸಿ ಫೋಟೋಶೂಟ್ ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ.



ಒಂದೇ ಧಾರಾವಾಹಿಯಲ್ಲಿ ನಟಿಸಿದ ಇಬ್ಬರೂ ನಟಿಯರು ಪ್ರೆಗ್ನೆಂಟ್ ಆಗಿದ್ದಾರೆ. ನೇಹಾ, ಕವಿತಾ ಗೌಡ ಮನೆಗೆ ಹೊಸ ಅತಿಥಿ ಆಗಮಿಸುತ್ತಿರುವ ಖುಷಿಯಲ್ಲಿದ್ದಾರೆ. ಹ್ಯಾಪಿ ಡೆಲಿವರಿ ಎಂದು ಈ ನಟಿಯರು ಪರಸ್ಪರ ಶುಭಹಾರೈಸಿದ್ದಾರೆ. ಸೀರಿಯಲ್‌ನಲ್ಲಿ ಸಹೋದರಿಯರಾಗಿ ನಟಿಸಿದ್ದ ಚಿನ್ನು ಮತ್ತು ಗೊಂಬೆ ರಿಯಲ್ ಲೈಫ್‌ನಲ್ಲಿಯೂ ಉತ್ತಮ ಒಡನಾಟ ಹೊಂದಿದ್ದಾರೆ. ಒಟ್ಟಿಗೆ ತಾಯಿಯಾಗುತ್ತಿರುವ ಸಂಭ್ರಮವನ್ನು ನಟಿಯರು ಹಂಚಿಕೊಂಡಿದ್ದಾರೆ.

ಇತ್ತೀಚೆಗೆ ನೇಹಾ ಗೌಡ ಸೀಮಂತ ಶಾಸ್ತ್ರ ಅದ್ಧೂರಿಯಾಗಿ ಮಾಡಲಾಗಿತ್ತು. ಅದಷ್ಟೇ ಅಲ್ಲ, ವೆಸ್ಟರ್ನ್ ಸ್ಟೈಲಿನಲ್ಲಿ ಬೇಬಿ ಶವರ್ ಕೂಡ ಆಚರಿಸಿದ್ದರು.

ಹಾಗೆಯೇ ಪತಿ ಚಂದನ್ ಜೊತೆ ಕವಿತಾ ಗೌಡ ಪ್ರೆಗ್ನೆನ್ಸಿ ಫೋಟೋಶೂಟ್ ಹಂಚಿಕೊಂಡು ಸಂಭ್ರಮಿಸಿದ್ದರು. ಒಟ್ಟಿನಲ್ಲಿ ಸ್ಯಾಂಡಲ್‌ವುಡ್‌ನಲ್ಲಿ ನಟಿಮಣಿಯರು ತಾಯಿಯಾಗುತ್ತಿರುವ ಗುಡ್ ನ್ಯೂಸ್ ಕೊಡುತ್ತಾ ಸದ್ದು ಮಾಡ್ತಿದ್ದಾರೆ.

# ಸಚಿನ್ ತೆಂಡೂಲ್ಕರ್ ದಾಖಲೆ ಮುರಿದ ಜೋ ರೂಟ್

ಶ್ರೀಲಂಕಾ ವಿರುದ್ಧದ ಮೂರು ಪಂದ್ಯಗಳ ಟೆಸ್ಟ್ ಸರಣಿಯನ್ನು ಇಂಗ್ಲೆಂಡ್ 2-1 ಅಂತರದಿಂದ ಗೆದ್ದುಕೊಂಡಿದೆ. ಈ ಸರಣಿಯಲ್ಲಿ ಅತ್ಯದ್ಭುತ ಪ್ರದರ್ಶನ ನೀಡಿದ ಜೋ ರೂಟ್ ಸರಣಿ ಶ್ರೇಷ್ಠ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ. ಈ ಪ್ರಶಸ್ತಿಯೊಂದಿಗೆ ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ಹೆಸರಿನಲ್ಲಿದ್ದ ದಾಖಲೆಯೊಂದನ್ನು ಮುರಿದು ರೂಟ್ ಮುನ್ನುಗ್ಗಿದ್ದಾರೆ.





ಶ್ರೀಲಂಕಾ ವಿರುದ್ಧದ ಸರಣಿಯಲ್ಲಿ ಒಟ್ಟು 6 ಇನಿಂಗ್ಸ್ ಆಡಿರುವ ಜೋ ರೂಟ್ 2 ಭರ್ಜರಿ ಶತಕ ಹಾಗೂ 1 ಅರ್ಧಶತಕದೊಂದಿಗೆ ಒಟ್ಟು 375 ರನ್ ಕಲೆಹಾಕಿದ್ದಾರೆ. ಈ ಶ್ರೇಷ್ಠ ಪ್ರದರ್ಶನದಿಂದಾಗಿ ಸರಣಿ ಶ್ರೇಷ್ಠ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಈ ಮೂಲಕ ಟೆಸ್ಟ್‌ನಲ್ಲಿ ಇಂಗ್ಲೆಂಡ್ ಪರ ಅತ್ಯಧಿಕ ಬಾರಿ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದ ಆಟಗಾರ ಎನಿಸಿಕೊಂಡಿದ್ದಾರೆ.

ಇದಕ್ಕೂ ಮುನ್ನ ಈ ದಾಖಲೆ ಇಂಗ್ಲೆಂಡ್‌ನ ಆಂಡ್ರ್ಯೂ ಸ್ಟ್ರಾಸ್, ಅಲೆಸ್ಟರ್ ಕುಕ್ ಹಾಗೂ ಗ್ರಹಾಂ ಗೂಚ್ ಹೆಸರಿನಲ್ಲಿತ್ತು. ಈ ಮೂವರು ಆಟಗಾರರು 5 ಬಾರಿ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದುಕೊಂಡಿದ್ದರು. ಇದೀಗ 6ನೇ ಬಾರಿ ಪ್ಲೇಯರ್ ಆಫ್ ಸಿರೀಸ್ ಪ್ರಶಸ್ತಿ ಪಡೆಯುವ ಮೂಲಕ ಜೋ ರೂಟ್ ಇಂಗ್ಲೆಂಡ್‌ನ ಮಾಜಿ ಆಟಗಾರರ ಸಾಧನೆಯನ್ನು ಹಿಂದಿಕ್ಕಿದ್ದಾರೆ.

ಹಾಗೆಯೇ ಸರಣಿ ಶ್ರೇಷ್ಠ ಪ್ರಶಸ್ತಿಯಲ್ಲಿ ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ಅವರ ದಾಖಲೆಯನ್ನು ಕೂಡ ಮುರಿದಿದ್ದಾರೆ. ಟೀಮ್ ಇಂಡಿಯಾ ಪರ 74 ಟೆಸ್ಟ್ ಸರಣಿಗಳನ್ನು ಆಡಿರುವ ಸಚಿನ್ ತೆಂಡೂಲ್ಕರ್ ಒಟ್ಟು 5 ಬಾರಿ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದಿದ್ದರು.

ಇದೀಗ 48 ಟೆಸ್ಟ್ ಸರಣಿಗಳ ಮೂಲಕ ಜೋ ರೂಟ್ 6ನೇ ಸರಣಿ ಶ್ರೇಷ್ಠ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ. ಈ ಮೂಲಕ ಟೆಸ್ಟ್ ಕ್ರಿಕೆಟ್‌ನಲ್ಲಿ ಐದಕ್ಕಿಂತ ಹೆಚ್ಚು ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದ ಆಟಗಾರರ ಪಟ್ಟಿಗೆ ಎಂಟ್ರಿ ಕೊಟ್ಟಿದ್ದಾರೆ.

ಇನ್ನು ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ಶ್ರೀಲಂಕಾದ ಮಾಜಿ ಸ್ಪಿನ್ನರ್ ಮುತ್ತಯ್ಯ ಮುರಳೀಧರನ್. ಲಂಕಾ ಪರ 61 ಟೆಸ್ಟ್ ಸರಣಿಗಳನ್ನಾಡಿರುವ ಮುರಳೀಧರನ್ ಒಟ್ಟು 11 ಬಾರಿ ಸರಣಿ ಶ್ರೇಷ್ಠ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ. ಈ ಮೂಲಕ ಸ್ಪಿನ್ ಮಾಂತ್ರಿಕ ಟೆಸ್ಟ್ ಕ್ರಿಕೆಟ್‌ನಲ್ಲಿ ಅತ್ಯಧಿಕ ಬಾರಿ ಪ್ಲೇಯರ್ ಆಫ್ ದಿ ಸಿರೀಸ್ ಪ್ರಶಸ್ತಿ ಪಡೆದ ವಿಶ್ವ ದಾಖಲೆ ನಿರ್ಮಿಸಿದ್ದಾರೆ.

# 42ನೇ ವಯಸ್ಸಿನಲ್ಲಿ ಐಪಿಎಲ್‌ನತ್ತ ಜೇಮ್ಸ್ ಅಂಡರ್ಸನ್..!

ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಕಾಣಿಸಿಕೊಳ್ಳದ ಕೆಲವೇ ಕೆಲವು ಶ್ರೇಷ್ಠ ಆಟಗಾರರಲ್ಲಿ ಇಂಗ್ಲೆಂಡ್ ವೇಗಿ ಜೇಮ್ಸ್ ಅಂಡರ್ಸನ್ ಕೂಡ ಒಬ್ಬರು. ಇಂಗ್ಲೆಂಡ್ ಪರ ಮೂರು ಸ್ವರೂಪಗಳಲ್ಲಿ ಕಣಕ್ಕಿಳಿದರೂ ಅಂಡರ್ಸನ್ ಐಪಿಎಲ್‌ನತ್ತ ಮಾತ್ರ ಮುಖ ಮಾಡಿರಲಿಲ್ಲ. ಅದರಲ್ಲೂ ಐಪಿಎಲ್ ಹರಾಜಿಗಾಗಿ ಒಮ್ಮೆಯೂ ಹೆಸರು ನೋಂದಾಯಿಸಿಕೊಂಡಿರಲಿಲ್ಲ ಎಂಬುದು ವಿಶೇಷ.



ಆದರೆ ಇದೀಗ 17 ವರ್ಷಗಳ ಬಳಿಕ ಐಪಿಎಲ್ ಹರಾಜಿಗಾಗಿ ಜೇಮ್ಸ್ ಅಂಡರ್ಸನ್ ಹೆಸರು ನೋಂದಾಯಿಸಿಕೊಳ್ಳುವ ಸಾಧ್ಯತೆಯಿದೆ. ಅದು ಸಹ ತಮ್ಮ 42ನೇ ವಯಸ್ಸಿನಲ್ಲಿ ಎಂಬುದು ವಿಶೇಷ. ಅಂದರೆ ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತರಾಗಿರುವ ಅಂಡರ್ಸನ್ ಫ್ರಾಂಚೈಸಿ ಲೀಗ್‌ನತ್ತ ಮುಖ ಮಾಡಲು ಇಚ್ಛಿಸಿದ್ದಾರೆ.

ಇಂಗ್ಲೆಂಡ್‌ನಲ್ಲಿ ನಡೆದ ದಿ ಹಂಡ್ರೆಡ್ ಲೀಗ್ ವೇಳೆ ಮಾತನಾಡಿದ್ದ ಜೇಮ್ಸ್ ಅಂಡರ್ಸನ್, ಈ ಲೀಗ್‌ನಲ್ಲಿ ಒಬ್ಬ ಬೌಲರ್‌ಗೆ ಕೇವಲ 20 ಎಸೆತಗಳು ಮಾತ್ರ ಇದೆ. ವಿಶೇಷ ಎಂದರೆ ಮೊದಲ 20 ಎಸೆತಗಳಲ್ಲಿ ಚೆಂಡು ಸ್ವಿಂಗ್ ಪಡೆಯುತ್ತಿರುವುದನ್ನು ನಾನು ಗಮನಿಸಿದ್ದೇನೆ. ನಾನು ಸಹ ಅದನ್ನು ಮಾಡಬಲ್ಲೆ ಎಂದು ತಿಳಿಸಿದ್ದರು. ಈ ಮೂಲಕ ಫ್ರಾಂಚೈಸಿ ಲೀಗ್ ಆಡುವ ಇಂಗಿತವನ್ನು ವ್ಯಕ್ತಪಡಿಸಿದ್ದರು.

ಇತ್ತ ಜೇಮ್ಸ್ ಅಂಡರ್ಸನ್ ಅವರ ಈ ಹೇಳಿಕೆಯು ಐಪಿಎಲ್ ಫ್ರಾಂಚೈಸಿಗಳ ಗಮನ ಸೆಳೆದಿದೆ. ಇದಕ್ಕೆ ಮುಖ್ಯ ಕಾರಣ ಅಂಡರ್ಸನ್ ಅವರಿಗಿರುವ ಅನುಭವ. ಏಕೆಂದರೆ ಇಂಗ್ಲೆಂಡ್ ಮಾಜಿ ವೇಗಿಯನ್ನು ತಂಡಕ್ಕೆ ಸೇರಿಸಿಕೊಂಡರೆ, ಯುವ ಆಟಗಾರರಿಗೆ ಉತ್ತಮ ಮಾರ್ಗದರ್ಶನ ಸಿಗಲಿದೆ. ಒಂದು ವೇಳೆ ಅವರು ಹರಾಜಿನಲ್ಲಿ ಕಾಣಿಸಿಕೊಳ್ಳದಿದ್ದರೂ ಅವರನ್ನು ಬೌಲಿಂಗ್ ಕೋಚ್ ಆಗಿ ಆಯ್ಕೆ ಮಾಡಲು ಕೆಲ ಫ್ರಾಂಚೈಸಿಗಳು ಆಸಕ್ತಿ ಹೊಂದಿದೆ ಎಂದು ವರದಿಯಾಗಿದೆ.

ಸದ್ಯ ಜೇಮ್ಸ್ ಅಂಡರ್ಸನ್ ಇಂಗ್ಲೆಂಡ್ ತಂಡದ ಬೌಲಿಂಗ್ ಕೋಚ್ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಆದರೆ ಇನ್ನುಳಿದ ಸಮಯದಲ್ಲಿ ಲೀಗ್ ಕ್ರಿಕೆಟ್ ಆಡುವ ಇರಾದೆಯಲ್ಲಿದ್ದಾರೆ. ಅಂದರೆ ಇಂಗ್ಲೆಂಡ್ ಆಟಗಾರರು ಐಪಿಎಲ್ ಸೇರಿದಂತೆ ಇತರೆ ಲೀಗ್ ಆಡುವ ವೇಳೆ ಜೇಮ್ಸ್ ಅಂಡರ್ಸನ್ ಸಂಪೂರ್ಣ ಫ್ರೀಯಾಗಿರಲಿದ್ದಾರೆ. ಹೀಗಾಗಿ 42ನೇ ವಯಸ್ಸಿನಲ್ಲಿ ಜೇಮ್ಸ್ ಅಂಡರ್ಸನ್ ಐಪಿಎಲ್‌ನತ್ತ ಮುಖ ಮಾಡಿದರೂ ಅಚ್ಚರಿಪಡಬೇಕಿಲ್ಲ.

# ಕೊನೆಗೂ ಗೃಹಲಕ್ಷ್ಮಿಯರ ಖಾತೆಗೆ ಬಂತು ಹಣ ಆದರೂ ಮುಗಿಯದ ಗೋಳು!

**ಬೆಂಗಳೂರು:** ಗೃಹಲಕ್ಷ್ಮಿ ಯೋಜನೆಯಡಿ ರಾಜ್ಯದ ಮಹಿಳೆಯರ ಬ್ಯಾಂಕ್ ಖಾತೆಗಳಿಗೆ ಹಣ ವರ್ಗಾವಣೆಯಾಗದ ವಿಚಾರ ಕಳೆದ ಕೆಲವು ತಿಂಗಳುಗಳಿಂದ ಭಾರಿ ಚರ್ಚೆಗೆ ಗ್ರಾಸವಾಗಿತ್ತು. ಗ್ಯಾರಂಟಿಗಳ ಹೆಸರಿನಲ್ಲಿ ಕಾಂಗ್ರೆಸ್ ಪಕ್ಷವು ಜನರನ್ನು ವಂಚಿಸುತ್ತಿದೆ ಎಂದು ಪ್ರತಿಪಕ್ಷಗಳಾದ ಬಿಜೆಪಿ, ಜೆಡಿಎಸ್ ಟೀಕಿಸಿದ್ದವು. ಆದರೆ, ತಾಂತ್ರಿಕ ಕಾರಣಗಳಿಂದ ಗೃಹಲಕ್ಷ್ಮಿ ಹಣ ವರ್ಗಾವಣೆಯಾಗುತ್ತಿದೆ. ಖಂಡಿತವಾಗಿಯೂ ಸರ್ಕಾರವು 2000 ರೂ. ವರ್ಗಾವಣೆ ಮಾಡಲಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದರು. ಇದೀಗ ಕೊನೆಗೂ ಜೂನ್ ತಿಂಗಳ ಹಣ ಮಹಿಳೆಯರ ಖಾತೆಗಳಿಗೆ ವರ್ಗಾವಣೆಯಾಗಿದೆ.




ಮೂರು ತಿಂಗಳ ಬಳಿಕ ಗೃಹಲಕ್ಷ್ಮಿ ಹಣ ಫಲಾನುಭವಿಗಳ ಖಾತೆ ಸೇರಿದೆ. ಆದರೆ, ಬಾಕಿ ಇರುವ ಇನ್ನೆರಡು ತಿಂಗಳ ಹಣ ಖಾತೆ ಸೇರುವುದು ವಿಳಂಬವಾಗಲಿದೆ. ಸದ್ಯ ಜುಲೈ, ಆಗಸ್ಟ್ ತಿಂಗಳ ಹಣ ಖಾತೆಗಳಿಗೆ ವರ್ಗಾವಣೆಯಾಗುವುದು ಬಾಕಿ ಉಳಿದಿದೆ.

**ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳುವುದೇನು?:** ಜುಲೈ ಹಾಗೂ ಆಗಸ್ಟ್? ತಿಂಗಳ ಗೃಹಲಕ್ಷ್ಮಿ ಹಣವನ್ನು ಖಾತೆಗೆ ವರ್ಗಾಯಿಸುವ ಪ್ರಕ್ರಿಯೆ ಆರಂಭವಾಗಿಲ್ಲ. ಹೀಗಾಗಿ ಜುಲೈ ತಿಂಗಳ ಬರುವುದು ವಿಳಂಬವಾಗುವ ಸಾಧ್ಯತೆ ಇದೆ. ಈ ವಿಚಾರವಾಗಿ ಪ್ರತಿಕ್ರಿಯಿಸಿರುವ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಸದ್ಯ ಮಹಿಳಾ ಮತ್ತು ಮಕ್ಕಳ ಇಲಾಖೆಯಯಿಂದ ಈಗಾಗಲೇ ಜುಲೈ ತಿಂಗಳ ಹಣಕ್ಕೆ ಪತ್ರ ಬರೆಯಲಾಗಿದೆ. ಇನ್ನೂ ಹಣ ಬಿಡುಗಡೆ ಮಾಡಿಲ್ಲ, ಹೀಗಾಗಿ ಜುಲೈ ತಿಂಗಳ ಹಣ ಬರುವುದು ತಡವಾಗಲಿದೆ. ಸರ್ಕಾರ ನಮಗೆ ಬೇಗ ಕೊಟ್ಟರೆ ನಾವು ಖಾತೆಗಳಿಗೆ ವರ್ಗಾವಣೆ ಮಾಡುತ್ತೇವೆ. ಆದರೆ, ಸರ್ಕಾರದಿಂದ ಹಣ ಬಿಡುಗಡೆ ಮಾಡುವುದು ತಡವಾಗುತ್ತಿದೆ ಎಂದಿದ್ದಾರೆ.

ಜೂನ್ ತಿಂಗಳಲ್ಲಿ ಎಸ್ಸಿ, ಎಸ್ಟಿ ಫಾಲಾನುಭವಿಗಳ ಪೋರ್ಟಲ್‌ನಲ್ಲಿ ಒಂದಷ್ಟು ಸಮಸ್ಯೆಗಳು ಕಂಡುಬಂದಿದ್ದವು. ಅವುಗಳನ್ನು ಸರಿಪಡಿಸಿ ಈಗ ಖಾತೆಗೆ ಹಣಹಾಕಲಾಗುತ್ತಿದೆ. ಈ ಮಧ್ಯೆ, ಜೂನ್ ತಿಂಗಳ ಹಣದ ಜತೆಗೇ ಜುಲೈ ಹಣ ಕೂಡ ಬರಲಿದೆ ಎಂದು ಕಾಯುತ್ತಿದ್ದ ಫಾಲಾನುಭವಿಗಳಿಗೆ ನಿರಾಸೆಯಾಗಿದೆ.

**ದುಡ್ಡಿನ ಕೊರತೆ ಇಲ್ಲವೆಂದ ಹೆಬ್ಬಾಳ್ಕರ್:** ಜೂನ್ ತಿಂಗಳದ್ದು 80,000 ಜನರಿಗೆ ಹಣ ಬಂದಿರಲಿಲ್ಲ. ಅದು ಕೂಡ ಈಗಾಗಲೇ ವರ್ಗಾವಣೆಯಾಗಿದೆ. ಎಸ್ಸಿ, ಎಸ್ಟಿ ಪೋರ್ಟಲ್ ಬೇರೆ, ಹೀಗಾಗಿ ಅವರಿಗೆ ತೊಂದರೆ ಆಗಿತ್ತು. ಸರ್ಕಾರಕ್ಕೆ ದುಡ್ಡಿನ ಸಮಸ್ಯೆ ಇಲ್ಲ. ವಿರೋಧ ಪಕ್ಷಗಳು ವೃಥಾ ಆರೋಪ ಮಾಡುತ್ತಿವೆ ಎಂದು ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆ ಒಂದು ಮಹತ್ವಾಕಾಂಕ್ಷೆಯ ಯೋಜನೆ. ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ. ಸಿಎಂ ಬಳಿಯೂ ಹಣ ಬಿಡುಗಡೆ ವಿಚಾರವಾಗಿ ಮಾತುಕತೆ ನಡೆಸಿದ್ದೇನೆ. ತಾಂತ್ರಿಕ ದೋಷವಾದಾಗ ಹೆಚ್ಚುಕಡಿಮೆ ಆಗುತ್ತದೆ. ಹಾಗೆಂದು ಹಣ ವರ್ಗಾವಣೆ ಮಾಡಿಯೇ ಮಾಡುತ್ತೇವೆ ಎಂದು ಅವರು ತಿಳಿಸಿದ್ದಾರೆ.

## ಭೂ ಸುಧಾರಣೆ ತಿದ್ದುಪಡಿ ಕಾಯ್ದೆ ರಾಜ್ಯದಲ್ಲಿ ರದ್ದು ಮಾಡಿ

# ಸಿಎಂಗೆ ಕುರುಬೂರು ಶಾಂತಕುಮಾರ್ ಮನವಿ

**ಬೆಂಗಳೂರು:** ಭೂ ಸುಧಾರಣೆ ತಿದ್ದುಪಡಿ ಕಾಯ್ದೆಯನ್ನು ರದ್ದು ಮಾಡಬೇಕು ಎಂದು ಸಿಎಂ ಸಿದ್ದರಾಮಯ್ಯಗೆ ಮನವಿ ಮಾಡಿರುವುದಾಗಿ ರೈತ ಮುಖಂಡ ಕುರುಬೂರು ಶಾಂತಕುಮಾರ್ ತಿಳಿಸಿದ್ದಾರೆ.



ಸಿಎಂ ಅವರನ್ನು ಭೇಟಿಯಾಗಿ ಬಳಿಕ ವಿಧಾನಸೌಧದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿರುವ 40 ಸಾವಿರ ಕೆರೆಗಳನ್ನು ಹೂಳೆತ್ತಿಸಿ ರೈತ ಜಮೀನಿಗೆ ನೀರು ಸರಬರಾಜು ಮಾಡಲು ಮನವಿ ಮಾಡಿದ್ದೇವೆ. ತೆಲಂಗಾಣದಲ್ಲಿ ಈ ಮಾದರಿ ಮಾಡಿದ್ದಾರೆ. ಇದನ್ನು ರಾಜ್ಯದಲ್ಲಿ ಜಾರಿ ಮಾಡಲು ಮನವಿ ಮಾಡಿದ್ದೇವೆ. ಭೂ ಸುಧಾರಣೆ ತಿದ್ದುಪಡಿ ಕಾಯ್ದೆ ರದ್ದು ಮಾಡುವುದಾಗಿ ಸಿದ್ದರಾಮಯ್ಯ ಹೇಳಿದ್ದರು. ಆದರೆ ಇನ್ನೂ ಕಾಯ್ದೆ ರದ್ದು ಮಾಡಿಲ್ಲ. ಎಪಿಎಂಸಿ ಕಾಯ್ದೆ ರದ್ದು ಮಾಡಿದಂತೆ ಕೂಡಲೇ ಭೂ ಸುಧಾರಣೆ ತಿದ್ದುಪಡಿ ಕಾಯ್ದೆ ರದ್ದು ಮಾಡಬೇಕು ಎಂದು ಮನವಿ ಮಾಡಿದ್ದೇವೆ ಎಂದರು.

ಕೇಂದ್ರದ ಕಾಯ್ದೆ ನೆಪದಲ್ಲಿ ರೈತರ ಜಮೀನುಗಳನ್ನ ಬ್ಯಾಂಕ್ ಮುಟ್ಟುಗೋಲು ಹಾಕಿಕೊಳ್ಳುತ್ತಿದೆ. ಹೀಗಾಗಿ ಕೇಂದ್ರದ ಕಾನೂನನ್ನು ರಾಜ್ಯ ಸರ್ಕಾರ ವಿರೋಧ ಮಾಡಬೇಕು. ಎನ್‌ಡಿಆರ್‌ಎಫ್ ಮಾನದಂಡ ಪರಿಷ್ಕರಣೆ ಮಾಡಬೇಕು. ಬರ ಪರಿಹಾರದ ಪರಿಹಾರ ಮೊತ್ತ ಜಾಸ್ತಿ ಮಾಡಬೇಕು. ಕಳಸಾ-ಬಂಡೂರಿ ಯೋಜನೆ ವಿಚಾರ ವನ್ಯಜೀವಿ ಮಂಡಳಿ ವಿರೋಧ ಮಾಡಿದೆ. ಇದಕ್ಕೆ ಯಾರು ವಿರೋಧ ಮಾಡದೇ ಯೋಜನೆ ಜಾರಿ ಮಾಡಲು ಸಹಕಾರ ನೀಡಬೇಕು. ಈ ಬಗ್ಗೆ ಕೇಂದ್ರಕ್ಕೆ ಒತ್ತಾಯ ಮಾಡಬೇಕು. ಅಗತ್ಯ ಬಿದ್ದರೆ ನಿಯೋಗದಲ್ಲಿ ನಾವು ಭಾಗಿಯಾಗುತ್ತೇವೆ ಎಂದು ತಿಳಿಸಿದ್ದೇವೆ. ಕಳಸಾ-ಬಂಡೂರಿ ವಿಚಾರವಾಗಿ ಕೇಂದ್ರದ ಬಳಿಕ ನಿಯೋಗ ಹೋಗುವುದಾಗಿ ಸಿಎಂ ತಿಳಿಸಿದ್ದಾರೆ ಎಂದು ಹೇಳಿದರು.

ರಾಜ್ಯದಲ್ಲಿ 40 ಸಾವಿರ ಪಂಪ್ ಸೆಟ್‌ಗಳು ಇವೆ. ಈ ಪಂಪ್ ಸೆಟ್‌ಗಳಿಗೆ ಆಧಾರ್ ಕಾರ್ಡ್ ಲಿಂಕ್ ಮಾಡಬೇಕು ಎಂದು ಸರ್ಕಾರ ಹೇಳುತ್ತಿದೆ. ಆಧಾರ್ ಕಾರ್ಡ್ ಕಡ್ಡಾಯಕ್ಕೆ ನಮ್ಮ ವಿರೋಧ ಇದೆ. ಯಾವುದೇ ಕಾರಣಕ್ಕೂ ಪಂಪ್ ಸೆಟ್‌ಗೆ ಆಧಾರ್ ಕಾರ್ಡ್ ಕಡ್ಡಾಯಬೇಡ ಎಂದು ಹೇಳಿದ್ದೇವೆ. ಸಿಎಂ ಇದಕ್ಕೆ ಒಪ್ಪಿದ್ದಾರೆ. ಕಬ್ಬಿನ ಕಾರ್ಖಾನೆಗೆ ಬಾಕಿ ಇರೋ ಹಣ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದೇವೆ. ನಮ್ಮ ಬೇಡಿಕೆ ಈಡೇರಿಕೆಗೆ ಒಂದು ತಿಂಗಳು ಗಡುವು ನೀಡಿದ್ದೇವೆ. ಸರ್ಕಾರ ನಮ್ಮ ಬೇಡಿಕೆ ಈಡೇರಿಸದೇ ಹೋದರೆ ವಿಧಾನಸೌಧದಕ್ಕೆ ಮುತ್ತಿಗೆ ಹಾಕೋದಾಗಿ ತಿಳಿಸಿದ್ದೇವೆ ಎಂದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com